# ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

ಸಂಪಾದಕರು: ಸುಂದರ್ Editor : Sundar

Volume: 01, Issue: 183 RNI Number : KNKAN/25/A2770 12-07-2026 Sunday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :183 ರಾಯಚೂರು 12-07-2026 ರವಿವಾರ ಪುಟ 04 ಬೆಲೆ ರೂ.2/- ಮೊ:8660146563


# ಪೊಲೀಸರೇ ಅಪರಾಧ ಪ್ರಕರಣಗಳಲ್ಲಿ ಶಾಮೀಲಾದರೆ ನಿರ್ದಾಕ್ಷಿಣ್ಯ ಕ್ರಮ: ಸಿಎಂ

ಬೆಂಗಳೂರು: ಯಾವುದೇ ಪೊಲೀಸ್ ಅಧಿಕಾರಿಗಳು ಡೀಲ್‌ಗಳು ಹಾಗೂ ಅಪರಾಧಗಳಲ್ಲಿ ಭಾಗಿಯಾಗಬಾರದು. ಇಂತಹ ವಿಚಾರದಲ್ಲಿ ಭಾಗಿಯಾದರೆ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುವುದು. ಇದು ನನ್ನ ಮನವಿ ಎಂದಾದರೂ ಭಾವಿಸಿ, ಸೂಚನೆ ಎಂದಾದರೂ ಭಾವಿಸಿ ಎಂದು ಸಿಎಂ ಡಿ.ಕೆ. ಶಿವಕುಮಾರ್ ಅವರು ಎಚ್ಚರಿಕೆ ನೀಡಿದ್ದಾರೆ.

ವಿಧಾನಸೌಧದ ಆವರಣದಲ್ಲಿ ಶನಿವಾರ ನಡೆದ ರಾಜ್ಯದ ಜಿಲ್ಲಾ ಘಟಕಗಳಿಗೆ 32 ಅತ್ಯಾಧುನಿಕ ಮೊಬೈಲ್ ಫೊರೆನ್ಸಿಕ್ ವ್ಯಾನ್‌ಗಳು ಹಾಗೂ 75 ಬೊಲೆರೋ ವಾಹನಗಳ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಸಿಎಂ ಡಿಕೆ ಶಿವಕುಮಾರ್ ಅವರು ಮಾತನಾಡಿದರು.

ಡ್ರಗ್ಸ್ ಜಾಲ ಪತ್ತೆ ಮಾಡಿದ ಪೊಲೀಸರ ತಂಡಕ್ಕೆ 10 ಲಕ್ಷ ನಗದು ಬಹುಮಾನ: ಪೊಲೀಸ್ ಇಲಾಖೆಗೆ ಹೊಸ ಶಕ್ತಿ ತುಂಬಲಾಗುತ್ತಿದೆ. ಗಡಿಯಲ್ಲಿ ಸೈನಿಕ, ಗಡಿಯೊಳಗೆ ಆರಕ್ಷಕ. ಈ ಇಬ್ಬರಿಂದ ನಮ್ಮ ರಾಜ್ಯ ಹಾಗೂ ದೇಶ ನೆಮ್ಮದಿಯಾಗಿ ಬದುಕಲು ಸಾಧ್ಯವಾಗುತ್ತಿದೆ. ನಿಮಗೆ ಸರ್ಕಾರದ ಪರವಾಗಿ ಅಭಿನಂದನೆಗಳು. ಸಾಧನೆ ಸಾಮರ್ಥ್ಯಕ್ಕಿಂತ ನಿಮ್ಮ ಗುರಿ ನಿರ್ಧಾರ ಮಾಡಿದಾಗ ಜಯ ನಿಮ್ಮದಾಗಲಿದೆ ಎಂದರು.

ಪೊಲೀಸರು ಒಂದು ವರ್ಷದಲ್ಲಿ 375 ಕೋಟಿ ಮೌಲ್ಯದ ಮಾದಕ ವಸ್ತುಗಳನ್ನು ವಶಪಡಿಸಿಕೊಂಡು 1,500 ಡ್ರಗ್ ಪೆಡ್ಲರ್‌ಗಳನ್ನು ಬಂಧಿಸಿದ್ದಾರೆ. ಇಡೀ ದೇಶ ಕರ್ನಾಟಕವನ್ನು ಗಮನಿಸುತ್ತಿದೆ. ಡ್ರಗ್ಸ್ ಜಾಲವನ್ನು ಭೇದಿಸಿದ ತಂಡಕ್ಕೆ ಸರ್ಕಾರ 10 ಲಕ್ಷದ ನಗದು ಬಹುಮಾನ ನೀಡಲು ತೀರ್ಮಾನಿಸಿದೆ. ಎಲ್ಲಾ ಅಧಿಕಾರಿಗಳಿಗೆ ಅಭಿನಂದನೆ ಸಲ್ಲಿಸುತ್ತೇನೆ. ಪ್ರತಿಯೊಬ್ಬ ನಾಗರಿಕನೂ ಇಲಾಖೆ ಮೇಲೆ ಗೌರವ ಇಟ್ಟುಕೊಳ್ಳುವಂತೆ ಕೆಲಸ ಮಾಡಬೇಕು. ನಿಮ್ಮ ಯಶಸ್ಸೇ ಸರ್ಕಾರದ ಯಶಸ್ಸು ಎಂದು ತಿಳಿಸಿದರು.



ಇತ್ತೀಚೆಗೆ ಕೇರಳ ಗೃಹಸಚಿವರಾದ ರಮೇಶ್ ಚೆನ್ನಿತ್ತಾಲ ಅವರು ನನ್ನನ್ನು ಭೇಟಿ ಮಾಡಿ ಕರ್ನಾಟಕ ಗಡಿ ದಾಟಿ ಯಾವುದೇ ಮಾದಕ ವಸ್ತು ಕೇರಳ ಗಡಿ ಮೂಲಕ ಹೋಗಬಾರದು ಎಂಬ ವಿಚಾರವಾಗಿ ಕೆಲವು ಮಾಹಿತಿ ಹಾಗೂ ಮನವಿ ನೀಡಿದ್ದಾರೆ. ನಮ್ಮ ರಾಜ್ಯದಲ್ಲಿ ಮಾದಕ ವಸ್ತು ಬರದಂತೆ ತಡೆಯಲಾಗುವುದು ಎಂದು ಅವರಿಗೆ ಆಶ್ವಾಸನೆ ನೀಡಿದ್ದೇನೆ ಎಂದು ತಿಳಿಸಿದರು.

ನಮ್ಮ ಪೊಲೀಸ್ ಇಲಾಖೆ ದೇಶದಲ್ಲೇ ದಕ್ಷ ಇಲಾಖೆ ಎಂದು ಹೆಸರು ಪಡೆದಿದೆ. ಪೊಲೀಸ್ ಸಿಬ್ಬಂದಿಗಳ ಪರಿಶ್ರಮ, ನಿಷ್ಠೆ, ಕಾರ್ಯಕ್ಷಮತೆಯಿಂದ ಈ ಹೆಸರು ಬಂದಿದೆ. ಹಗಲು ರಾತ್ರಿ ನಿಮ್ಮ ಸೇವೆಗೆ ಸರ್ಕಾರ ನಿಮ್ಮ ಪರವಾಗಿ ನಿಲ್ಲಲಿದೆ. ಕೆಲವು ಸಂದರ್ಭದಲ್ಲಿ ಅನಾಹುತಗಳು ಆಗುತ್ತವೆ. ಅಂತಹ ಪರಿಸ್ಥಿತಿಯಲ್ಲೂ ನಾನು ಹಾಗೂ ನಮ್ಮ ಸರ್ಕಾರ ನಿಮ್ಮ ಆತ್ಮಸ್ಥೈರ್ಯ ಕುಸಿಯದಂತೆ ನೋಡಿಕೊಳ್ಳಲಾಗಿದೆ. ಕಾನೂನು ಕಾಯುತ್ತೀರಿ, ಸಮಾಜದ ಹಿತ ಕಾಪಾಡುತ್ತೀರಿ. ಅಪರಾಧಗಳಲ್ಲಿ ವಿವಿಧ ರೂಪಗಳಿವೆ. ತಂತ್ರಜ್ಞಾನ, ಎಐ ಬಂದ ಬಳಿಕ ಅಪರಾಧ ಪತ್ತೆಹಚ್ಚಲು ಅನೇಕ ಕ್ರಮ ಕೈಗೊಳ್ಳಲಾಗಿದೆ. ಗೂಂಡಾಗಿರಿ ತಡೆಗಟ್ಟಲು, ಎಲ್ಲ ಠಾಣೆಗಳಲ್ಲಿ ಪಡೆ ರಚಿಸಲು ನಿರ್ದೇಶನ ನೀಡಿದ್ದೇನೆ ಎಂದು ಭರವಸೆ ನೀಡಿದರು.

ದೇವಾಲಯಗಳ ಹುಂಡಿ ರಕ್ಷಣೆಗೆ ತೀರ್ಮಾನ: ರಾಮಮಂದಿರದಲ್ಲಿ ಯಾವ ರೀತಿ ಕಳ್ಳತನವಾಗಿದೆ ಎಂದು ಗಮನಿಸಿದ್ದೀರಿ. ನಮ್ಮ ರಾಜ್ಯದಲ್ಲಿ ಮುಂಜಾಗ್ರತೆಯಿಂದ ಮುಜರಾಯಿ ಇಲಾಖೆಯ ಎಲ್ಲ ದೇವಾಲಯಗಳಲ್ಲಿ ಸ್ಥಳೀಯ ಮುಖಂಡರು, ಪೊಲೀಸ್ ಅಧಿಕಾರಿಗಳು ಸೇರಿ ಹುಂಡಿ ತೆಗೆಯುವುದರಿಂದ, ಹಣ ಎಣಿಕೆ ಮಾಡುವುದು ಸೇರಿ ಅವುಗಳನ್ನು ಬ್ಯಾಂಕಿಗೆ ಸಲ್ಲಿಸುವವರೆಗೂ ಎಲ್ಲವನ್ನು ವಿಡಿಯೋ ದಾಖಲಾತಿ ಮಾಡಬೇಕು ಎಂದು ಮಾರ್ಗದರ್ಶನ ನೀಡಿದ್ದೇನೆ. ಇದರ ಬಗ್ಗೆ ಬೆಳಗಾವಿಯಲ್ಲಿ ಘೋಷಣೆ ಮಾಡಲಾಗಿದೆ. ಸದ್ಯದಲ್ಲೇ ಆದೇಶ ಹೊರಡಿಸಲಾಗುವುದು. ನಮ್ಮ ರಾಜ್ಯದಲ್ಲಿ ಇಂತಹ ಘಟನೆ ನಡೆಯದಂತೆ ನೋಡಿಕೊಳ್ಳಬೇಕಾಗಿರುವುದು ಮುಖ್ಯ. ಯಾವುದೇ ಧರ್ಮದ ದೇವಾಲಯವಿದ್ದರೂ ಸರ್ಕಾರದ ವ್ಯಾಪ್ತಿಯಲ್ಲಿದ್ದರೆ ಅವುಗಳ ರಕ್ಷಣೆ ನಮ್ಮ ಕರ್ತವ್ಯವಾಗಲಿದೆ. ಅಪರಾಧವಾದ ಬಳಿಕ ಹುಡುಕುವುದಕ್ಕಿಂತ ಅಪರಾಧ ನಡೆಯದಂತೆ ಎಚ್ಚರಿಕೆ ವಹಿಸಬೇಕು. ನಮ್ಮ ತೀರ್ಮಾನ ನೋಡಿ, ಖಾಸಗಿ ದೇವಾಲಯ ಹಾಗೂ ಮಠ ಮಾನ್ಯಗಳು ಎಚ್ಚರಿಕೆ ವಹಿಸಬೇಕಾಗುತ್ತದೆ ಎಂದು ತಿಳಿಸಿದರು.

ಲಂಚ ಕೊಟ್ಟು ಪೊಲೀಸ್ ಇಲಾಖೆ ಸೇರುವಂತಿಲ್ಲ: ಪ್ರಿಯಾಂಕ್ ಖರ್ಗೆ ಅವರು ಈ ಇಲಾಖೆ ಬಗ್ಗೆ ಬಹಳ ಆಸಕ್ತಿ ಹೊಂದಿದ್ದರು. ಕಳೆದ ಸರ್ಕಾರದ ಅವಧಿಯಲ್ಲಿ ಪಿಎಸ್‌ಐ ಹಗರಣವನ್ನು ತಮ್ಮದೇ ಆದ ರೀತಿ ತನಿಖೆ ಮಾಡಿ ಸರ್ಕಾರ ಹಾಗೂ ಜನರ ಗಮನ ಸೆಳೆದಿದ್ದರು. ನೇಮಕಾತಿಯಲ್ಲಿ ಪಾರದರ್ಶಕತೆ ಇರಬೇಕು, ಯಾರೊಬ್ಬರೂ ಲಂಚ ಕೊಟ್ಟು ಕೆಲಸಕ್ಕೆ ಸೇರಬಾರದು. ಅರ್ಹತೆಯೇ ಹುದ್ದೆಯ ನೇಮಕಾತಿಗೆ ಮುಖ್ಯ ಮಾನದಂಡ ಎಂಬ ಅಡಿಪಾಯ

3ನೇಯ ಪುಟಕ್ಕೆ

# ಸೂಪರ್‌ವೈಜರ್ ಅಮರಮ್ಮ ವಿರುದ್ಧ ಜಾತಿ ನಿಂದನೆ ರಾಮಲಿಂಗಮ್ಮ ದೂರು

ರಾಯಚೂರು,ಜು.11-

ಜೇಗರಕಲ್ ವಲಯದ ಸೂಪರ್‌ವೈಜರ್ ಅಮರಮ್ಮ ಅವರು ಅವಾಚ್ಯ ಶಬ್ದಗಳಿಂದ ಜಾತಿ ನಿಂದನೆ ಮಾಡುತ್ತಿದ್ದಾರೆ, ಸಭೆಗಳಲ್ಲಿ ಅವಮಾನಿಸುತ್ತಿದ್ದಾರೆ ಮತ್ತು ವಿವಿಧ ಹೆಸರಿನಲ್ಲಿ ಹಣ ಸುಲಿಗೆ ಮಾಡುತ್ತಿದ್ದಾರೆ ಎಂದು ಯದ್ದಾಪೂರು ಕೇಂದ್ರ-1 ರ ಅಂಗನವಾಡಿ ಕಾರ್ಯಕರ್ತೆ ರಾಮಲಿಂಗಮ್ಮ ಅವರು ಗಂಭೀರ ದೂರು ಸಲ್ಲಿಸಿದ್ದಾರೆ.

ಭಾವಚಿತ್ರ



ದೂರಿನ ಪ್ರಮುಖ ಆರೋಪಗಳು: ಜಾತಿ ನಿಂದನೆ ಮತ್ತು ಅವಮಾನ ,ರಾಮಲಿಂಗಮ್ಮ ಅವರ ಪ್ರಕಾರ, ಅಮರಮ್ಮ ಅವರು ವರ್ಗಾವಣೆಯಾಗಿ ಬಂದ ದಿನದಿಂದಲೇ ತಾರತಮ್ಯ ಮಾಡುತ್ತಿದ್ದಾರೆ. - ನೀವು ಕುಳಿತ ಚೇರಿನಲ್ಲಿ ನಾನು ಕೂಡುವುದಿಲ್ಲ. ನೆಲದಲ್ಲಿ ಕುಳಿತುಕೊಳ್ಳಿ ಎಂದು ಹೇಳುತ್ತಾರೆ - ಮೈಲಿಗೆ ಆಗುತ್ತೆ ಎಂದು ಅವಾಚ್ಯ ಶಬ್ದಗಳಿಂದ ನಿಂದಿಸುತ್ತಾರೆ.- ಸಭೆ, ಸಮಾರಂಭಗಳಲ್ಲಿ ಕೀಳು ಜಾತಿಯವಳು, ನೀನು ಭಾಗವಹಿಸಬಾರದು ಎಂದು ಸಾರ್ವಜನಿಕವಾಗಿ ಅವಮಾನ ಮಾಡುತ್ತಾರೆ - ಅಧಿಕಾರಿಗಳ ಹೆಸರಿನ ಮುಂದೆ ಎಂದು ಬರೆದಿಲ್ಲ ಎಂದು ಜಾತಿ ನಿಂದನೆ ಮಾಡುತ್ತಾರೆ

2. ಹಣ ಸುಲಿಗೆ ಮತ್ತು ಭ್ರಷ್ಟಾಚಾರ ಆರೋಪ ದೂರಿನಲ್ಲಿ ಹಲವು ಘಟನೆಗಳನ್ನು ಉಲ್ಲೇಖಿಸಲಾಗಿದೆ: - ಬಾಲಮೇಳ: ಕಡಲೆ ಬೇಳೆ, ಹೆಸರುಕಾಳು, ಸಕ್ಕರೆ ತರಲು ಹೇಳಿ ಸ್ವಂತ ಹಣ 500 ರೂ. ಕೊಡುವಂತೆ ಒತ್ತಾಯ - ಮಕ್ಕಳ ದಿನಾಚರಣೆ: ಡ್ಯಾನ್ಸ್ ಕಲಿಸದಿದ್ದಕ್ಕೆ 500 ರೂ. ದಂಡ ವಸೂಲಿ - ತರಕಾರಿ ಹಣ: 2000 ರೂ. ತೆಗೆದುಕೊಂಡಿದ್ದಾರೆ.- ತರಬೇತಿ ಊಟದ ಬಿಲ್: 4ನೇ ಹಂತಕ್ಕೆ 300 ರೂ, 5ನೇ ಹಂತಕ್ಕೆ 200 ರೂ. ವಸೂಲಿ - ಸೀಮಂತ ಕಾರ್ಯಕ್ರಮ: ಪಂಚಾಯತಿಯಲ್ಲಿ 2000 ರೂ. ಖರ್ಚು ಮಾಡಿಸಿದರೂ, ಮತ್ತೆ ಸರ್ಕಲ್ ವೈಸ್ 1000 ರೂ. ಕೇಳಿದರು. ಕೊಡದವರನ್ನು ಸಭೆಗೆ ಕರೆಯುವುದಿಲ್ಲ 3. ಕರ್ತವ್ಯ ಲೋಪ, - ತಿಂಗಳಿಗೆ 7-8 ಬಾರಿ ಬೇಟಿ ನೀಡುತ್ತೇನೆಂದು ಹೇಳಿದರೂ, ತಮ್ಮ ಕೇಂದ್ರಕ್ಕೆ ಮಾತ್ರ ಬರುತ್ತಾರೆ. ಇನ್ನುಳಿದ 2 ಕೇಂದ್ರಗಳಿಗೆ ಹೋಗುವುದಿಲ್ಲ - ದಾಖಲೆಗಳನ್ನು ಟೇಬಲ್ ಮೇಲೆ ಇಟ್ಟರೂ ಕೈಯಲ್ಲಿ ಕೊಡಿ ಎಂದು ಹೇಳುತ್ತಾರೆ. ಡ್ರಾ ಬಳಿ ಕಾಲು ಇಟ್ಟು ಕುಳಿತು, ಬಗ್ಗಿ ನಮಸ್ಕರಿಸಿ ಕೊಡುವಂತೆ ಮಾಡುತ್ತಾರೆ. - ಫೋನ್ ಮಾಡಿದರೂ ರಿಸೀವ್ ಮಾಡುವುದಿಲ್ಲ,- ಸಿಬ್ಬಂದಿ ಹಾಜರಿ ಪುಸ್ತಕದಲ್ಲಿ ಅಧಿಕಾರಿಗಳ ಹೆಸರನ್ನು ತಿರಸ್ಕರಿಸುತ್ತಾರೆ

ಕೋರಿಕೆ : ರಾಮಲಿಂಗಮ್ಮ ಅವರು ಈ ಎಲ್ಲಾ ಕಿರುಕುಳ, ಜಾತಿ ನಿಂದನೆ, ಅವಮಾನ ಮತ್ತು ಹಣ ಸುಲಿಗೆಗೆ ಸಂಬಂಧಿಸಿದಂತೆ ಅಮರಮ್ಮ ಅವರ ವಿರುದ್ಧ SC/ ST (PA) Act/ () ಅಡಿಯಲ್ಲಿ ಕೇಸು ದಾಖಲಿಸಿ, ಇಲಾಖಾ ಶಿಸ್ತು ಕ್ರಮ ಜರುಗಿಸಿ ಸೇವೆಯಿಂದ ವಜಾಗೊ

3ನೇಯ ಪುಟಕ್ಕೆ

# ಗ್ರಾ.ಪಂ ಮಾಜಿ ಅಧ್ಯಕ್ಷನ ಕೊಲೆ ಪ್ರಕರಣ : 6 ಆರೋಪಿಗಳ ಬಂಧನ

ರಾಯಚೂರು,ಜು.11



ಜಿಲ್ಲೆಯ ಇಡಪನೂರು ಪೊಲೀಸ್ ಠಾಣೆ ವ್ಯಾಪ್ತಿಯ ಹಂಚಿನಾಳ ಗ್ರಾಮದ ಇಂಡಿಯನ್ ಆಯಿಲ್ ಪೆಟ್ರೋಲ್ ಬಂಕ್‌ನಲ್ಲಿ ಪೆಟ್ರೋಲ್ ಹಣದ ವಿಚಾರವಾಗಿ ಆರಂಭವಾದ ಗಲಾಟೆ ಕೊಲೆಯಲ್ಲಿ ಅಂತ್ಯಗೊಂಡಿದ್ದು, ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು ಆರು ಆರೋಪಿಗಳನ್ನು ಬಂಧಿಸಿದ್ದಾರೆ.

ಜುಲೈ 8ರಂದು ರಾತ್ರಿ ಸುಮಾರು 8.35ಕ್ಕೆ ಮಹೇಶ್ ಪೆಟ್ರೋಲ್ ಹಾಕಿಸಿಕೊಂಡ ಬಳಿಕ ಹಣ ಪಾವತಿಸುವ ವೇಳೆ 10 ರೂ. ಕಡಿಮೆ ನೀಡಿದ್ದ ವಿಚಾರವಾಗಿ ಪೆಟ್ರೋಲ್ ಬಂಕ್ ಸಿಬ್ಬಂದಿ ರವಿ ಹಾಗೂ ಮಹೇಶ್ ನಡುವೆ ವಾಗ್ವಾದ ನಡೆದಿದೆ. ಈ ವೇಳೆ ಅಲ್ಲಿಗೆ ನಾಗರಾಜ್ ಆಗಮಿಸಿದ್ದು, ಗಲಾಟೆ ಬಿಡಿಸಲು ಮೇಘನಾಥ್ ಮಧ್ಯಪ್ರವೇಶಿಸಿದ್ದಾರೆ.

ಆ ಸಂದರ್ಭದಲ್ಲಿ ಪೆಟ್ರೋಲ್ ಬಂಕ್‌ನಲ್ಲಿದ್ದ ಆರೋಪಿಗಳು ಗುಂಪು ಕಟ್ಟಿಕೊಂಡು ಬಂದು ಮೇಘನಾಥ್ ಅವರೊಂದಿಗೆ ಜಗಳವಾಡಿ, ಅವಾಚ್ಯ ಶಬ್ದಗಳಿಂದ ನಿಂದನೆ ಮಾಡಿದ್ದಲ್ಲದೆ ಜಾತಿ ನಿಂದನೆಯನ್ನೂ ಮಾಡಿದ್ದಾರೆ ಎಂದು ದೂರಿನಲ್ಲಿ ಆರೋಪಿಸಲಾಗಿದೆ.

ದೂರಿನ ಪ್ರಕಾರ, ವೀರೇಶ್ ಕಟ್ಟಿಗೆಯಿಂದ ಮೇಘನಾಥ್ ಅವರ ತಲೆಗೆ ಹೊಡೆದಿದ್ದು, ಬಳಿಕ ರವಿ ಮತ್ತೊಮ್ಮೆ ಹಲ್ಲೆ ನಡೆಸಿದ್ದಾನೆ. ನರಸಿಂಹ ಕಟ್ಟಿಗೆಯಿಂದ ಬೆನ್ನಿಗೆ ಹೊಡೆದ ಪರಿಣಾಮ ಮೇಘನಾಥ್ ಪ್ರಜ್ಞೆ ತಪ್ಪಿ ಬಿದ್ದಿದ್ದಾರೆ. ಗಲಾಟೆ ಬಿಡಿಸಲು ಮುಂದಾದ ಮಹೇಶ್ ಹಾಗೂ ನಾಗರಾಜ್ ಮೇಲೂ ಇತರ ಆರೋಪಿಗಳು ಹಲ್ಲೆ ನಡೆಸಿದ್ದಾರೆ ಎನ್ನಲಾಗಿದೆ.

ಗಂಭೀರವಾಗಿ ಗಾಯಗೊಂಡ ಮೇಘನಾಥ್ ಅವರನ್ನು ರಾಯಚೂರಿನ ಬಾಲಂಕು ಆಸ್ಪತ್ರೆಗೆ ದಾಖಲಿಸಲಾಗಿತ್ತು. ಜುಲೈ 9ರಂದು ಬೆಳಿಗ್ಗೆ ತಲೆಗೆ ಶಸ್ತ್ರಚಿಕಿತ್ಸೆ ನಡೆಸಿದರೂ ಅವರು ಚಿಕಿತ್ಸೆ ಫಲಕಾರಿಯಾಗದೆ ಬೆಳಿಗ್ಗೆ 8.25ಕ್ಕೆ ಮೃತಪಟ್ಟಿದ್ದಾರೆ ಎಂದು ವೈದ್ಯರು ತಿಳಿಸಿದ್ದಾರೆ.

ಮೃತರ ಪತ್ನಿ ನೀಡಿದ ದೂರಿನ ಮೇರೆಗೆ ಇಡಪನೂರು ಪೊಲೀಸ್

ಮೂರನೇಯ ಪುಟಕ್ಕೆ

# ಜು.13ರಂದು ಗಬ್ಬೂರಿನಲ್ಲಿ ಶಾಂತಮೂರ್ತಿ ಶಿವಾಚಾರ್ಯರ 27ನೇ ಪುಣ್ಯಸ್ಮರಣೋತ್ಸವ

ರಾಯಚೂರು,ಜು.11-

ದೇವದುರ್ಗ ತಾಲೂಕಿನ ಗಬ್ಬೂರಿನ ಸುಕ್ಷೇತ್ರ, ಶ್ರೀ ಬೂದಿ ಬಸವೇಶ್ವರ ಮಹಾಸಂಸ್ಥಾನಮಠದಲ್ಲಿ ಜುಲೈ 13ರಂದು ಪರಮಪೂಜ್ಯ ಅಂ. ಶ್ರೀ ಶಾಂತಮೂರ್ತಿ ಶಿವಾಚಾರ್ಯ ಮಹಾಸ್ವಾಮಿಗಳ 27ನೇ ವರ್ಷದ ಪುಣ್ಯಸ್ಮರಣೋತ್ಸವ, 268ನೇ ಮಾಸಿಕ ಶಿವಾನುಭವ ಗೋಷ್ಠಿ, ಧಾರ್ಮಿಕ ಸಮಾರಂಭ, ಕೃತಿ ಲೋಕಾರ್ಪಣೆ ಹಾಗೂ 'ಶ್ರೀಗುರು ಶಾಂತಮೂರ್ತಿ ಕಾಯಕ-ದಾಸೋಹ ರತ್ನ' ಪ್ರಶಸ್ತಿ ಪ್ರದಾನ ಸಮಾರಂಭವನ್ನು ವಿಜೃಂಭಣೆಯಿಂದ ಆಯೋಜಿಸಲಾಗಿದೆ ಎಂದು ಶ್ರೀಮಠದ ಚನ್ನಬಸವ ಮಠ ತಿಳಿಸಿದರು.



ನಗರದ ಪತ್ರಿಕಾ ಭವನದಲ್ಲಿ ಶನಿವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬೆಳಿಗ್ಗೆ 11 ಗಂಟೆಗೆ ಆರಂಭವಾಗುವ ಸಮಾರಂಭದಲ್ಲಿ ನಿವೃತ್ತ ಸುಪ್ರೀಂ ಕೋರ್ಟ್ ನ್ಯಾಯಮೂರ್ತಿ ಡಾ. ಶಿವರಾಜ ವಿ. ಪಾಟೀಲ್ ರಚಿಸಿರುವ 'ಶಿವಯೋಗಿ ಶ್ರೀ ಬೂದಿಬಸವೇಶ್ವರ ಸುಕ್ಷೇತ್ರ ಗಬ್ಬೂರು' ಕೃತಿಯನ್ನು ಕರ್ನಾಟಕ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ್ ಲೋಕಾರ್ಪಣೆ ಮಾಡಲಿದ್ದಾರೆ ಎಂದು ಹೇಳಿದರು.

ಶ್ರೀಮಠದ ವತಿಯಿಂದ ಇದೇ ಮೊದಲ ಬಾರಿಗೆ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿರುವ ಸಾಧಕರಿಗೆ 'ಶ್ರೀಗುರು ಶಾಂತಮೂರ್ತಿ ಕಾಯಕ ದಾಸೋಹ ರತ್ನ' ಪ್ರಶಸ್ತಿಯನ್ನು ಪ್ರದಾನ ಮಾಡಲಾಗುವುದು. ಕಾರ್ಯಕ್ರಮಕ್ಕೆ ಶ್ರೀ ಉಜ್ಜಯಿನಿ ಸದ್ಧರ್ಮ ಸಿಂಹಾಸನಾಧೀಶ್ವರ ಜಗದ್ಗುರು ಶ್ರೀ ಸಿದ್ಧಲಿಂಗ ರಾಜದೇಶಿಕೇಂದ್ರ ಶಿವಾಚಾರ್ಯ ಮಹಾಸ್ವಾಮಿಗಳು ದಿವ್ಯ ಸಾನ್ನಿಧ್ಯ ವಹಿಸಲಿದ್ದು, ವಿವಿಧ ಮಠಗಳ ಪೂಜ್ಯ ಮಹಾಸ್ವಾಮಿಗಳು ಆಶೀರ್ವಚನ ನೀಡಲಿದ್ದಾರೆ. ಶ್ರೀ ಬೂದಿಬಸವ ಶಿವಾಚಾರ್ಯ ಮಹಾಸ್ವಾಮಿಗಳು ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ತಿಳಿಸಿದರು.

ಸಮಾರಂಭದಲ್ಲಿ ನಿವೃತ್ತ ಸುಪ್ರೀಂ ಕೋರ್ಟ್ ನ್ಯಾಯಮೂರ್ತಿ ಡಾ. ಶಿವರಾಜ ವಿ. ಪಾಟೀಲ್, ಕರ್ನಾಟಕ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ್, ಕರ್ನಾಟಕ ಲೋಕಸೇವಾ ಆಯೋಗದ ಅಧ್ಯಕ್ಷ ಶಿವಶಂಕ್ರಪ್ಪ ಸಾಹುಕಾರ ಹೇಮನಾಳ, ರಾಜ್ಯ ಮಾಹಿತಿ

3ನೇಯ ಪುಟಕ್ಕೆ

# 5 ಜಿಲ್ಲೆಗಳ ಗ್ರಂಥಾಲಯಗಳಿಗೆ ಯಲ್ಲಣ್ಣರ ಜೀವನಚರಿತ್ರೆ ಪುಸ್ತಕ ದೇಣಿಗೆ

ರಾಯಚೂರು,ಜು.11-

ಸ್ವಾತಂತ್ರ್ಯ ಹೋರಾಟಗಾರ ಹಾಗೂ ಸಂಗೊಳ್ಳಿ ರಾಯಣ್ಣರ ಸೈನ್ಯದ ಪ್ರಮುಖ ನಾಯಕರಾಗಿದ್ದ ಶಬ್ದವೇದಿ ಬೆಳವಡಿ ವಡ್ಡರ ಯಲ್ಲಣ್ಣ ಅವರ ಜೀವನ, ದೇಶಭಕ್ತಿ ಮತ್ತು ತ್ಯಾಗವನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಉದ್ದೇಶದಿಂದ ಕರ್ನಾಟಕ ರಾಜ್ಯ ಕ್ರಾಂತಿವೀರ ಬೆಳವಡಿ (ವಡ್ಡರ) ಯಲ್ಲಣ್ಣ ಸಂಘವು ಜುಲೈ 16ರಂದು ರಾಯಚೂರು, ಯಾದಗಿರಿ, ಕೊಪ್ಪಳ, ಬಳ್ಳಾರಿ ಹಾಗೂ ಗದಗ ಜಿಲ್ಲೆಗಳ ಎಲ್ಲಾ ತಾಲ್ಲೂಕು ಸಾರ್ವಜನಿಕ ಗ್ರಂಥಾಲಯಗಳಿಗೆ ಯಲ್ಲಣ್ಣರ ಜೀವನಚರಿತ್ರೆ ಪುಸ್ತಕಗಳನ್ನು ಉಚಿತವಾಗಿ ದೇಣಿಗೆ ನೀಡಲಿದೆ.



ನಗರದ ಪತ್ರಿಕಾ ಭವನದಲ್ಲಿ ಶನಿವಾರ ನಡೆದ ಸುದ್ದಿಗೋಷ್ಠಿಯಲ್ಲಿ ಸಂಘದ ಜಿಲ್ಲಾಧ್ಯಕ್ಷ ಈರಣ್ಣ ಮಾತನಾಡಿ, ಯುವಜನರಲ್ಲಿ ಇತಿಹಾಸದ ಅರಿವು ಮತ್ತು ದೇಶಭಕ್ತಿಯ ಮೌಲ್ಯಗಳನ್ನು ಬೆಳೆಸುವ ಉದ್ದೇಶದಿಂದ ಸಂಘದ ಸಭೆಯಲ್ಲಿ ಈ ಮಹತ್ವದ ನಿರ್ಧಾರ ಕೈಗೊಂಡಿದ್ದು, ಸಾರ್ವಜನಿಕ ಗ್ರಂಥಾಲಯಗಳ ಮೂಲಕ ಯಲ್ಲಣ್ಣ ಅವರ ಜೀವನ ಗಾಥೆ ಜನಸಾಮಾನ್ಯರಿಗೆ ತಲುಪಿಸುವ ಕಾರ್ಯ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಪುಸ್ತಕ ದೇಣಿಗೆ ಕಾರ್ಯಕ್ರಮದಿಂದ ವಿದ್ಯಾರ್ಥಿಗಳು, ಸಂಶೋಧಕರು ಹಾಗೂ ಸಾರ್ವಜನಿಕರು ಯಲ್ಲಣ್ಣ ಅವರ ಸ್ವಾತಂತ್ರ್ಯ ಹೋರಾಟದ ಕೊಡುಗೆ ಮತ್ತು ಜೀವನಾದರ್ಶಗಳನ್ನು ತಿಳಿದುಕೊಳ್ಳಲು ಅವಕಾಶವಾಗಲಿದೆ ಎಂದು ಹೇಳಿದರು.

ಇದೇ ವೇಳೆ, ಶಬ್ದವೇದಿ ಬೆಳವಡಿ ವಡ್ಡರ ಯಲ್ಲಣ್ಣ ಅವರ ಸ್ವಾತಂತ್ರ್ಯ ಹೋರಾಟದಲ್ಲಿನ ಸೇವೆಯನ್ನು ಸರ್ಕಾರ ಅಧಿಕೃತವಾಗಿ ಗುರುತಿಸಿ, ಸರ್ಕಾರಿ ಕಾರ್ಯಕ್ರಮಗಳಲ್ಲಿ ಸೂಕ್ತ ಗೌರವ ನೀಡಬೇಕು. ಜೊತೆಗೆ ಅವರ ಪ್ರತಿಮೆಯನ್ನು ಸ್ಥಾಪಿಸಲು ಕ್ರಮ ಕೈಗೊಳ್ಳಬೇಕು ಎಂದು ಸಂಘ ಆಗ್ರಹಿಸಿತು.

ಸುದ್ದಿಗೋಷ್ಠಿಯಲ್ಲಿ ತಾಲ್ಲೂಕು ಅಧ್ಯಕ್ಷ ತಿಮ್ಮಪ್ಪ, ನಗರಾಧ್ಯಕ್ಷ ಸಣ್ಣ ತಿಮ್ಮಾರೆಡ್ಡಿ, ಗೌರವಾಧ್ಯಕ್ಷ ಈರಣ್ಣ, ಸದಸ್ಯರಾದ ರಾಮಾಂಜಿನಯ್ಯ, ತಿಮ್ಮಯ್ಯ ಸೇರಿದಂತೆ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಅಬಕಾರಿ ಇಲಾಖೆಗೆ ದೂರು ನೀಡಿದರೂ ಕ್ರಮವಿಲ್ಲ: ಜಿಲ್ಲಾಧಿಕಾರಿಗೆ ಮಾರುತಿ ದೂರು

# ನಿಯಮ ಉಲ್ಲಂಘಿಸಿದ ಮದ್ಯದ ಅಂಗಡಿಗಳ ಪರವಾನಗಿ ರದ್ದುಪಡಿಸಲು ಆಗ್ರಹ

ರಾಯಚೂರು, ಜು.11:

ಅಕ್ರಮ ಹಾಗೂ ನಿಯಮಬಾಹಿರವಾಗಿ ಕಾರ್ಯನಿರ್ವಹಿಸುತ್ತಿರುವ ಮದ್ಯದ ಅಂಗಡಿಗಳ ವಿರುದ್ಧ ಅಬಕಾರಿ ಇಲಾಖೆಗೆ ಹಲವು ಬಾರಿ ದೂರು ಸಲ್ಲಿಸಿದರೂ ಯಾವುದೇ ಕ್ರಮ ಕೈಗೊಳ್ಳದಿರುವುದನ್ನು ಖಂಡಿಸಿ, ದಲಿತ ಸೇನೆ ಜಿಲ್ಲಾ ಅಧ್ಯಕ್ಷರಾದ ಮಾರುತಿ ಕವ್ಲೋಳ್ (ಚಿಕ್ಕಸೂಗೂರು) ಅವರು ರಾಯಚೂರು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿ, ತಕ್ಷಣ ಕಾನೂನು ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದರು.



ಯರಮರಸ್ ಕ್ಯಾಂಪ್ ಕ್ರಾಸ್‌ನಿಂದ ಶಕ್ತಿನಗರದವರೆಗೆ ಇರುವ ವಿನಾಯಕ ವೈನ್ಸ್ (ಸಿಎಲ್-2), ಸೂರಿ ವೈನ್ಸ್ (ಸಿಎಲ್-2) ಸೇರಿದಂತೆ ವಿವಿಧ ಸಿಎಲ್-2, ಸಿಎಲ್-7 ಹಾಗೂ ಸಿಎಲ್-9 ಮದ್ಯದ ಅಂಗಡಿಗಳಲ್ಲಿ ಸರ್ಕಾರ ನಿಗದಿಪಡಿಸಿದ ದರಕ್ಕಿಂತ ಹೆಚ್ಚಿನ ದರಕ್ಕೆ ಮದ್ಯ ಮಾರಾಟ ಮಾಡಲಾಗುತ್ತಿದೆ. ಅಲ್ಲದೆ, ಸರ್ಕಾರದ ನಿಯಮಾವಳಿಗಳನ್ನು ಉಲ್ಲಂಘಿಸಿ ಗ್ರಾಹಕರಿಗೆ ಕಡ್ಡಾಯವಾಗಿ ಒದಗಿಸಬೇಕಾದ ಮೂಲಭೂತ ಸೌಲಭ್ಯಗಳನ್ನು ನೀಡದೇ ಕಾನೂನು ಉಲ್ಲಂಘನೆ ಮಾಡಲಾಗುತ್ತಿದೆ ಎಂದು ಅವರು ಆರೋಪಿಸಿದ್ದಾರೆ.

ಈ ಕುರಿತು 2026ರ ಜನವರಿ 9ರಂದು ಅಬಕಾರಿ ಇಲಾಖೆಯ ಅಧಿಕಾರಿಗಳಿಗೆ ಲಿಖಿತ ದೂರು ಸಲ್ಲಿಸಿದ್ದರೂ ಇದುವರೆಗೆ ಯಾವುದೇ ಕ್ರಮ ಕೈಗೊಂಡಿಲ್ಲ. ಆದ್ದರಿಂದ ಜಿಲ್ಲಾಧಿಕಾರಿಗಳು ಮಧ್ಯಪ್ರವೇಶಿಸಿ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಿ, ನಿಯಮ ಉಲ್ಲಂಘಿಸಿರುವ ಮದ್ಯದ ಅಂಗಡಿಗಳ ಪರವಾನಗಿಯನ್ನು ರದ್ದುಪಡಿಸುವುದು ಹಾಗೂ ಅವುಗಳ ಪರವಾನಗಿ ನವೀಕರಣಕ್ಕೆ ಅವಕಾಶ

3ನೇಯ ಪುಟಕ್ಕೆ

# ಸಿಂಧನೂರುನಲ್ಲಿ ಅಕ್ರಮ ಚಟುವಟಿಕೆ ಗಳಿಗೆ ಕಡಿವಾಣ ಹಾಕಲು-ಬಸನಗೌಡ ಬಾದರ್ಲಿ ಒತ್ತಾಯ



ಸಿಂಧನೂರು : ಜುಲೈ : 10: ರಂದು ರಾಜ್ಯದ ಗೃಹ ಸಚಿವರಾದ. ಪ್ರಿಯಾಂಕ್ ಖರ್ಗೆ. ಅವರನ್ನು. ವಿಧಾನ ಪರಿಷತ್ ಶಾಸಕರಾದ. ಬಸನಗೌಡ ಬಾದರ್ಲಿ. ಅವರು ಸಚಿವರ ನಿವಾಸದಲ್ಲಿ ಭೇಟಿಯಾಗಿ. ಸಿಂಧನೂರು ತಾಲೂಕಿನ ಶಾಂತಿ ಹಾಗೂ ಸುವ್ಯವಸ್ಥೆ. ಹಾಗೂ ಮಾದಕ ವಸ್ತು ಗಳಾದ. ಡ್ರಗ್ಸ್ ಹಾವಳಿ ತಡೆ. ಮತ್ತು ಕಾನೂನುಬಾಹಿರ ಚಟುವಟಿಕೆಗಳಾದ. ಅಕ್ರಮ ಮರಳು ಸಾಗಾಟ. ಮಟ್ಕಾ ಇಸ್ಪಟ್ ಹಾಗೂ ಗಾಂಜಾ ನಿಯಂತ್ರಣ ಸೇರಿದಂತೆ ಸಾರ್ವಜನಿಕ

3ನೇಯ ಪುಟಕ್ಕೆ

# ಸಿಂಧನೂರು ತಾಲೂಕನ್ನು ಬರಪೀಡಿತ ಪ್ರದೇಶವನ್ನು ಘೋಷಿಸಲು. ಶಾಸಕ ಹಂಪನಗೌಡ ಬಾದರ್ಲಿ ಮನವಿ

ಸಿಂಧನೂರು,ಜು.11-

ತೀವ್ರ ಮಳೆಯ ಕೊರತೆಯಿಂದಾಗಿ ರೈತರು ಎದುರಿಸುತ್ತಿರುವ ಭೀಕರ ಪರಿಸ್ಥಿತಿಯನ್ನು ಸರ್ಕಾರ ಗಮನಿಸಿ. ಶೀಘ್ರವೇ ಸಿಂಧನೂರು ತಾಲೂಕು ಬರಪಿಡಿತ ತಾಲೂಕು ಎಂದು ಘೋಷಣೆ ಮಾಡಬೇಕು ಎಂದು. ಶಾಸಕ ಹಂಪನಗೌಡ ಬಾದರ್ಲಿ ಸರಕಾರಕ್ಕೆ ಮನವಿ ಸಲ್ಲಿಸಿದ್ದಾರೆ. ಈ ಕುರಿತು ಶುಕ್ರವಾರ ಪತ್ರಿಕಾ ಪ್ರಕಟಣೆ ನೀಡಿದ ಅವರು. ರಾಜ್ಯದ ಮುಖ್ಯಮಂತ್ರಿ. ಡಿ.ಕೆ. ಶಿವಕುಮಾರ ಉಪಮುಖ್ಯಮಂತ್ರಿ.ಜಿ. ಪರಮೇಶ್ವರ ಕಂದಾಯ ಇಲಾಖೆಯ ಮುಖ್ಯ ಕಾರ್ಯದರ್ಶಿಗಳಿಗೆ ಹಾಗೂ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿ. ಸಿಂಧನೂರು ತಾಲೂಕಿನಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಭತ್ತ. ಸೂರ್ಯಕಾಂತಿ. ಜೋಳ. ತೊಗರಿ. ಹತ್ತಿ ಹಾಗೂ ಇತರೆ ಮಳೆ ಆಧಾರಿತ ಬೆಳೆಗಳನ್ನು ಹೆಚ್ಚಿನ ಪ್ರಮಾಣದಲ್ಲಿ ರೈತರು ಬೆಳೆಯುತ್ತಾರೆ. ಈ ಬಾರಿ ಮಳೆ ಯ ಕೊರತೆಯಿಂದ ಬಿತ್ತನೆ ಕಾರ್ಯ ವಿಳಂಬವಾಗಿದ್ದು. ಈಗಾಗಲೇ ಬಿತ್ತಿದವರ ಮೊಳಕೆ ಬಾರದೆ ಇದ್ದಿದ್ದು ರೈತರನ್ನು ಸಂಕಷ್ಟಕ್ಕಿಡುವಂತೆ ಮಾಡಿದೆ. ಬೆಳವಣಿಗೆಯ ಕುಂಠಿತ ಹಾಗೂ ಬೆಳೆ ಒಣಗುವ ಪರಿಸ್ಥಿತಿ ನಿರ್ಮಾಣವಾಗಿದೆ. ಅನೇಕ ರೈತರು ಮರು ಬಿತ್ತನೆ ಮಾಡಲು



3ನೇಯ ಪುಟಕ್ಕೆ

# ವೇತನ ಪರಿಷ್ಕರಣೆ ಸೇರಿ ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ಅಂಗನವಾಡಿ, ಅಕ್ಷರ ದಾಸೋಹ ನೌಕರರ ಪ್ರತಿಭಟನೆ




ಕಲಬುರಗಿ, ಜು.11-

ವೇತನ ಪರಿಷ್ಕರಣೆ, ಖಾಯಂ ನೇಮಕಾತಿ ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ಅಂಗನವಾಡಿ ನೌಕರರ ಸಂಘ ಹಾಗೂ ಕರ್ನಾಟಕ ರಾಜ್ಯ ಅಕ್ಷರ ದಾಸೋಹ ನೌಕರರ ಸಂಘದ ಜಿಲ್ಲಾ ಘಟಕಗಳ ನೇತೃತ್ವದಲ್ಲಿ ಶುಕ್ರವಾರ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನೆಯಲ್ಲಿ ಪಾಲ್ಗೊಂಡ ನೌಕರರು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿ, ಹಲವು ವರ್ಷಗಳಿಂದ ಬಾಕಿ ಉಳಿದಿರುವ ನ್ಯಾಯಸಮ್ಮತ ಬೇಡಿಕೆಗಳನ್ನು ತಕ್ಷಣ ಈಡೇರಿಸಬೇಕು ಎಂದು ಒತ್ತಾಯಿಸಿದರು. ಬಳಿಕ ಜಿಲ್ಲಾಡಳಿತದ ಮೂಲಕ ಮುಖ್ಯಮಂತ್ರಿ ಅವರಿಗೆ ಮನವಿ ಪತ್ರ ಸಲ್ಲಿಸಿದರು.

ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರನ್ನು ಬಿಎಲ್‌ಒ (), ಎಸ್‌ಐಆರ್ () ಸೇರಿದಂತೆ ಇಲಾಖೇತರ ಸಮೀಕ್ಷಾ ಕಾರ್ಯಗಳಿಂದ ಸಂಪೂರ್ಣ ಮುಕ್ತಗೊಳಿಸಬೇಕು ಎಂದು ಅವರು ಆಗ್ರಹಿಸಿದರು. 50 ವರ್ಷ ಮೇಲ್ಪಟ್ಟವರು, ಸಹಾಯಕಿಯರಿಲ್ಲದ ಕೇಂದ್ರಗಳ ಕಾರ್ಯಕರ್ತೆಯರು ಹಾಗೂ ಅನಾರೋಗ್ಯದಿಂದ ಬಳಲುತ್ತಿರುವವರಿಗೆ ಹೆಚ್ಚುವರಿ ಕರ್ತವ್ಯಗಳನ್ನು ನೀಡಬಾರದು ಎಂದು ಮನವಿ ಮಾಡಿದರು.

ಪೋಷಣ್ ಟ್ರ್ಯಾಕರ್ ಹೆಸರಿನಲ್ಲಿ ನಡೆಯುತ್ತಿರುವ ಕಿರುಕುಳವನ್ನು ನಿಲ್ಲಿಸಬೇಕು. ಮೊಬೈಲ್, ಡೇಟಾ ಹಾಗೂ ನಿರ್ವಹಣಾ ವೆಚ್ಚವನ್ನು ಸರ್ಕಾರವೇ ಭರಿಸಬೇಕು. ಡಿಜಿಟಲ್ ಕಾರ್ಯಗಳಿಗಾಗಿ ಗುಣಮಟ್ಟದ ಟ್ಯಾಬ್ಲೆಟ್ ಹಾಗೂ ಉಚಿತ ಡೇಟಾ ಪ್ಯಾಕ್ ಒದಗಿಸಬೇಕು. ಎಫ್‌ಆರ್‌ಎಸ್ () ಹಾಗೂ ಇ-ಕೆವೈಸಿ (-) ಕಡ್ಡಾಯಗೊಳಿಸಿರುವ ಕ್ರಮವನ್ನು ಹಿಂಪಡೆಯಬೇಕು ಎಂದು ಒತ್ತಾಯಿಸಿದರು.

ಅಂಗನವಾಡಿ ಕೇಂದ್ರಗಳಿಗೆ ಶುದ್ಧ ಕುಡಿಯುವ ನೀರು, ಸುಸಜ್ಜಿತ ಕಟ್ಟಡ, ಗ್ಯಾಸ್ ಸಂಪರ್ಕ ಹಾಗೂ ಅಗತ್ಯ ಅಡುಗೆ ಉಪಕರಣಗಳನ್ನು ಒದಗಿಸಬೇಕು. ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕೇಂದ್ರಗಳಿಗೆ ಮಹಾನಗರಗಳಲ್ಲಿ 15 ಸಾವಿರ ರೂ., ನಗರ ಪ್ರದೇಶಗಳಲ್ಲಿ 10 ಸಾವಿರ ರೂ. ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ 5 ಸಾವಿರ ರೂ. ಬಾಡಿಗೆ ನಿಗದಿಪಡಿಸಬೇಕು ಎಂದು ಆಗ್ರಹಿಸಿದರು.

ಅಂಗನವಾಡಿ ಕಾರ್ಯಕರ್ತೆಯರಿಗೆ ಕನಿಷ್ಠ 41 ಸಾವಿರ ರೂ. ಹಾಗೂ ಸಹಾಯಕಿಯರಿಗೆ 35 ಸಾವಿರ ರೂ. ಮಾಸಿಕ ವೇತನ ನಿಗದಿಪಡಿಸಬೇಕು. ನಿವೃತ್ತಿಯ ನಂತರ 18 ಸಾವಿರ ರೂ. ಮಾಸಿಕ ಪಿಂಚಣಿ ನೀಡಬೇಕು. ಅಂಗನವಾಡಿ ನೌಕರರನ್ನು ಕಾರ್ಮಿಕ ಕಾನೂನುಗಳ ವ್ಯಾಪ್ತಿಗೆ ತಂದು, ನಾಲ್ಕು ಕಾರ್ಮಿಕ ಸಂಹಿತೆಗಳನ್ನು ಹಿಂಪಡೆಯಬೇಕು ಎಂದು ಒತ್ತಾಯಿಸಿದರು.

ದೇಶಾದ್ಯಂತ ಏಕರೂಪದ ಸೇವಾ ನಿಯಮಗಳನ್ನು ಜಾರಿಗೊಳಿಸಿ, ವಾರ್ಷಿಕ ಶೇ.10ರಷ್ಟು ವೇತನ ಹೆಚ್ಚಳ, ವೈದ್ಯಕೀಯ ಹಾಗೂ ಬೇಸಿಗೆ ರಜೆ ಸೇರಿದಂತೆ ಎಲ್ಲಾ ಸೌಲಭ್ಯಗಳನ್ನು ಕಲ್ಪಿಸಬೇಕು. ಮೇಲ್ವಿಚಾರಕರ ಹುದ್ದೆಗಳಿಗೆ ಅರ್ಹ ಅಂಗನವಾಡಿ ಕಾರ್ಯಕರ್ತೆಯರನ್ನೇ ಬಡ್ತಿ ಮೂಲಕ ನೇಮಕ ಮಾಡಬೇಕು. ಎಎನ್‌ಎಂ, ಪ್ರಾಥಮಿಕ ಶಾಲಾ ಶಿಕ್ಷಕ, ಗ್ರಾಮ ಸೇವಕ ಸೇರಿದಂತೆ ವಿವಿಧ ಸರ್ಕಾರಿ ಹುದ್ದೆಗಳಿಗೆ ಅಂಗನವಾಡಿ ಕಾರ್ಯಕರ್ತೆಯರಿಗೆ ಆದ್ಯತೆ ನೀಡಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಪ್ರತಿಭಟನೆಯಲ್ಲಿ ಮುಖಂಡರಾದ ಶಾಂತಾ ಘಂಟೆ, ಎಂ.ಬಿ. ಸಜ್ಜನ್, ಶಾಂತಾ ಸರಡಗಿ, ನಾಗಪ್ಪ ರಾಯಚೂರಕರ್, ರಾಜಮತಿ ಪಾಟೀಲ, ಮಹಾದೇವಿ ಪೋಲಕಪಳ್ಳಿ, ವಿಜಯಲಕ್ಷ್ಮೀ ಹಿರೇಮಠ, ಸಂಗೀತಾ ಗುತ್ತೇದಾರ, ರೇಖಾ ರಂಗನ್ ಸೇರಿದಂತೆ ಜಿಲ್ಲಾ ಘಟಕದ ಪದಾಧಿಕಾರಿಗಳು ಹಾಗೂ ಹೆಚ್ಚಿನ ಸಂಖ್ಯೆಯಲ್ಲಿ ಅಂಗನವಾಡಿ ಮತ್ತು ಅಕ್ಷರ ದಾಸೋಹ ನೌಕರರು ಭಾಗವಹಿಸಿದ್ದರು.



# ಪ್ರತ್ಯೇಕ ಕಳವು ಪ್ರಕರಣ : 6 ಆರೋಪಿಗಳ ಬಂಧನ 27 ಲಕ್ಷ ರೂ. ಮೌಲ್ಯದ ಚಿನ್ನಾಭರಣ, 15 ಬೈಕ್‌ಗಳ ವಶ

ವಿಜಯನಗರ ,ಜು.11-

ವಿಜಯನಗರ ಜಿಲ್ಲಾ ಪೊಲೀಸರು ನಡೆಸಿದ ವಿಶೇಷ ಕಾರ್ಯಾಚರಣೆಯಲ್ಲಿ ಜಿಲ್ಲೆಯ ವಿವಿಧ ಪೊಲೀಸ್ ಠಾಣೆಗಳ ವ್ಯಾಪ್ತಿಯಲ್ಲಿ ನಡೆದಿದ್ದ ಕಳವು ಪ್ರಕರಣಗಳನ್ನು ಭೇದಿಸಿ, 6 ಮಂದಿ ಆರೋಪಿಗಳನ್ನು ಬಂಧಿಸಿದ್ದಾರೆ.

ಆರೋಪಿಗಳಿಂದ ಒಟ್ಟು ಸುಮಾರು 27 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಹಾಗೂ 15 ಕಳುವಾದ ದ್ವಿಚಕ್ರ ವಾಹನಗಳನ್ನು ವಶಪಡಿಸಿಕೊಳ್ಳಲಾಗಿದೆ.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ (ಎಸ್‌ಪಿ) ಜಾಹ್ನವಿ ಅವರು ಗುರುವಾರ ಹೊಸಪೇಟೆಯ ಎಸ್‌ಪಿ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಈ ಮಾಹಿತಿ ನೀಡಿದರು.

ಹೊಸಪೇಟೆ ಹಾಗೂ ಹರಪನಹಳ್ಳಿ ಉಪವಿಭಾಗಗಳ ವಿವಿಧ ಪೊಲೀಸ್ ಠಾಣೆಗಳಲ್ಲಿ ದಾಖಲಾಗಿದ್ದ

ಚಿನ್ನಾಭರಣ ಮತ್ತು ಬೈಕ್ ಕಳವು ಪ್ರಕರಣಗಳ ತನಿಖೆಯನ್ನು ವಿಶೇಷ ತಂಡಗಳು ನಡೆಸಿ ಯಶಸ್ವಿಯಾಗಿ ಭೇದಿಸಿವೆ ಎಂದು ಅವರು ತಿಳಿಸಿದರು.

ಹೊಸಪೇಟೆ ಪಟ್ಟಣ ಪೊಲೀಸ್ ಠಾಣೆ ವ್ಯಾಪ್ತಿಯ ಪ್ರಕರಣದಲ್ಲಿ ಸುಮಾರು 11 ಲಕ್ಷ ರೂ. ಮೌಲ್ಯದ 6 ಬೈಕ್‌ಗಳು ಹಾಗೂ 33 ಗ್ರಾಂ ಚಿನ್ನಾಭರಣವನ್ನು ವಶಪಡಿಸಿಕೊಳ್ಳಲಾಗಿದೆ.

ಹರಪನಹಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯ ಕಳವು ಪ್ರಕರಣದಲ್ಲಿ 2.80 ಲಕ್ಷ ರೂ. ಮೌಲ್ಯದ 28 ಗ್ರಾಂ ಚಿನ್ನಾಭರಣ ಜಪ್ತಿ ಮಾಡಲಾಗಿದೆ.

ಚಿತ್ತವಾಡಗಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದ ಬೈಕ್ ಕಳವು ಪ್ರಕರಣದಲ್ಲಿ 4.75 ಲಕ್ಷ ರೂ. ಮೌಲ್ಯದ 9 ದ್ವಿಚಕ್ರ ವಾಹನಗಳನ್ನು ವಶಪಡಿಸಿಕೊಳ್ಳಲಾಗಿದೆ.

ಹೂವಿನಹಡಗಲಿ ಪೊಲೀಸ್ ಠಾಣೆ ವ್ಯಾಪ್ತಿಯ ಮತ್ತೊಂದು ಪ್ರಕರಣದಲ್ಲಿ 3 ಲಕ್ಷ ರೂ. ಮೌಲ್ಯದ 52 ಗ್ರಾಂ ಚಿನ್ನಾಭರಣವನ್ನು ಪೊಲೀಸರು ಜಪ್ತಿ ಮಾಡಿದ್ದಾರೆ.

ಜಿಲ್ಲೆಯ ವಿವಿಧ ಕಳವು ಪ್ರಕರಣಗಳಲ್ಲಿ ಭಾಗಿಯಾಗಿದ್ದ 6 ಮಂದಿ ಆರೋಪಿಗಳನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ಪ್ರಕರಣಗಳ ಭೇದನೆಯಲ್ಲಿ ಉತ್ತಮ ಕಾರ್ಯನಿರ್ವಹಿಸಿದ ತನಿಖಾ ತಂಡದ ಅಧಿಕಾರಿಗಳು ಮತ್ತು ಸಿಬ್ಬಂದಿಯನ್ನು ಎಸ್‌ಪಿ ಜಾಹ್ನವಿ ಅಭಿನಂದಿಸಿದರು.



# ಮತದಾರರ ಪಟ್ಟಿ ಪರಿಷ್ಕರಣೆಗೆ ಸಾರ್ವಜನಿಕರು, ರಾಜಕೀಯ ಪಕ್ಷಗಳ ಸಹಭಾಗಿತ್ವ ಅಗತ್ಯ : ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ

ಬಳ್ಳಾರಿ,ಜು.11-

ಭಾರತ ಚುನಾವಣಾ ಆಯೋಗದ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯವು ಸಂಪೂರ್ಣ ಪಾರದರ್ಶಕತೆಯಿಂದ ಕೂಡಿದ್ದು, ಇದರಲ್ಲಿ ಸಾರ್ವಜನಿಕರು ಹಾಗೂ ರಾಜಕೀಯ ಪಕ್ಷಗಳ ಸಹಭಾಗಿತ್ವವೂ ಅತ್ಯಗತ್ಯವಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಯೂ ಆದ ಜಿಲ್ಲಾಧಿಕಾರಿ ಕೆ. ನಾಗೇಂದ್ರ ಪ್ರಸಾದ್ ಅವರು ಹೇಳಿದರು.

ನಗರದ ನೂತನ ಜಿಲ್ಲಾಡಳಿತ ಭವನದ ವಿಡಿಯೋ ಸಭಾಂಗಣದಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ(ಎಸ್‌ಐಆರ್) ಸಂಬಂಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ಗುರುವಾರ ಹಮ್ಮಿಕೊಂಡಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಮತದಾರರ ಪಟ್ಟಿಯ ನಿಖರತೆ ಮತ್ತು ಪಾರದರ್ಶಕತೆ ಕಾಯ್ದುಕೊಳ್ಳುವ ನಿಟ್ಟಿನಲ್ಲಿ ಜಿಲ್ಲೆಯ ಎಲ್ಲಾ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಹಾಗೂ ಸಾರ್ವಜನಿಕರು ಸಕಾರಾತ್ಮಕವಾಗಿ ಸಹಕರಿಸಬೇಕು ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ ಸಂಬಂಧ ಗಣತಿ ನಮೂನೆಗಳ ವಿತರಣೆಯ ಕಾರ್ಯವು ಪ್ರಗತಿಯಲ್ಲಿದ್ದು, ಈಗಾಗಲೇ ಶೇ.97 ಷ್ಟು ಪ್ರಗತಿ ಸಾಧಿಸಲಾಗಿದೆ. ರಾಜಕೀಯ ಪಕ್ಷಗಳು ನೇಮಕ ಮಾಡಿರುವ ಬೂತ್ ಮಟ್ಟದ ಏಜೆಂಟರುಗಳು ನಮಗೆ ಸಂಪೂರ್ಣ ಮಾಹಿತಿ ನೀಡಿ ಸಹಕರಿಸಬೇಕಿದೆ ಎಂದು ಹೇಳಿದರು.

ಗಣತಿ ನಮೂನೆಗಳನ್ನು ಭರ್ತಿ ಮಾಡುವಾಗ ಸಾರ್ವಜನಿಕರಲ್ಲಿ ಉಂಟಾಗುವ ಗೊಂದಲಗಳ ತಪ್ಪಿಸಲು ವ್ಯಾಪಕ ಜಾಗೃತಿ ಮೂಡಿಸಲಾಗುತ್ತಿದೆ. ಫಾರ್ಮ್‌ಗಳಲ್ಲಿನ ಮೊದಲ ಭಾಗ ಹಾಗೂ ಎರಡನೇ ಭಾಗಗಳನ್ನು ಭರ್ತಿ ಮಾಡುವಾಗ ಆಗುವ ಸಾಮಾನ್ಯ ತಪ್ಪುಗಳನ್ನು ತಪ್ಪಿಸಲು ಬಿಎಲ್‌ಒ ಮತ್ತು ಬಿಎಲ್‌ಎಗಳಿಗೆ ವಿಶೇಷ ತರಬೇತಿ ನೀಡಲಾಗಿದೆ. ಜಿಲ್ಲೆಯಲ್ಲಿ ಅತ್ಯಂತ ಪಾರದರ್ಶಕ ಹಾಗೂ ದೋಷಮುಕ್ತ ಮತದಾರರ ಪಟ್ಟಿ ಸಿದ್ಧಪಡಿಸಲು ಎಲ್ಲಾ ರಾಜಕೀಯ ಪಕ್ಷಗಳು ಕೈಜೋಡಿಸಬೇಕು ಎಂದು ಮನವಿ ಮಾಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್.ಝುಬೇರ್, ಜಿಲ್ಲಾ ಚುನಾವಣಾಧಿಕಾರಿ ಕಚೇರಿ ಅಧಿಕಾರಿ- ಸಿಬ್ಬಂದಿ ಹಾಗೂ ಜಿಲ್ಲೆಯ ಎಲ್ಲಾ ಮಾನ್ಯತೆ ಪಡೆದ ರಾಷ್ಟ್ರೀಯ ಮತ್ತು ಪ್ರಾದೇಶಿಕ ರಾಜಕೀಯ ಪಕ್ಷಗಳ ಮುಖಂಡರು ಹಾಗೂ ಪ್ರತಿನಿಧಿಗಳು ಪಾಲ್ಗೊಂಡಿದ್ದರು.

# ಕ್ಷಯಮುಕ್ತ ಬಳ್ಳಾರಿ ಜಿಲ್ಲೆಯನ್ನಾಗಿಸಲು ಸಾರ್ವಜನಿಕರು ಕೈಜೋಡಿಸಿ


ಬಳ್ಳಾರಿ,ಜು.10-

ಜಿಲ್ಲೆಯನ್ನು ಸಂಪೂರ್ಣ ಕ್ಷಯಮುಕ್ತ (ಟಿಬಿ) ಜಿಲ್ಲೆಯನ್ನಾಗಿ ಮಾಡಲು ಸಾರ್ವಜನಿಕರು ಆರೋಗ್ಯ ಇಲಾಖೆಯೊಂದಿಗೆ ಕೈಜೋಡಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಯಲ್ಲಾ ರಮೇಶ್ ಬಾಬು ಅವರು ಕರೆ ನೀಡಿದ್ದಾರೆ.

ಕ್ಷಯರೋಗವು ಮೈಕೋಬ್ಯಾಕ್ಟೀರಿಯಂ ಟ್ಯುಬರ್ಕ್ಯುಲೋಸಿಸ್ ಎಂಬ ಬ್ಯಾಕ್ಟೀರಿಯಾದಿಂದ ಬರುವ ಒಂದು ಸಾಂಕ್ರಾಮಿಕ ಕಾಯಿಲೆಯಾಗಿದೆ. ಇದು ಮುಖ್ಯವಾಗಿ ಶ್ವಾಸಕೋಶದ ಮೇಲೆ ಪರಿಣಾಮ ಬೀರುತ್ತದೆ. ಆದರೆ, ದೇಹದ ಇತರ ಭಾಗಗಳಾದ ಮೂಳೆ, ಮೆದುಳು ಹಾಗೂ ಮೂತ್ರಪಿಂಡಗಳಿಗೂ ಇದು ಹರಡಬಹುದು.

ಪ್ರಮುಖ ಲಕ್ಷಣಗಳು:

2 ವಾರಗಳಿಗಿಂತ ಹೆಚ್ಚು ಕಾಲ ಇರುವ ಕೆಮ್ಮು ಮತ್ತು ಕೆಮ್ಮಿದಾಗ ಕಫದಲ್ಲಿ ರಕ್ತ ಬೀಳುವುದು. ಮುಖ್ಯವಾಗಿ ಸಂಜೆ ಅಥವಾ ರಾತ್ರಿಯ ಸಮಯದಲ್ಲಿ ಜ್ವರ ಬರುವುದು ಹಾಗೂ ರಾತ್ರಿ ತೀವ್ರವಾಗಿ ಬೆವರುವುದು. ಯಾವುದೇ ನಿಖರ ಕಾರಣವಿಲ್ಲದೆ ದೇಹದ ತೂಕ ಮತ್ತು ಹಸಿವು ಗಣನೀಯವಾಗಿ ಕಡಿಮೆಯಾಗುವುದು. ನಿರಂತರ ಸುಸ್ತು ಮತ್ತು ಉಸಿರಾಡುವಾಗ ಅಥವಾ ಕೆಮ್ಮುವಾಗ ಎದೆಯಲ್ಲಿ ನೋವು ಕಾಣಿಸಿಕೊಳ್ಳುವುದು.



ರೋಗ ಹರಡುವ ವಿಧಾನ:

ಕ್ಷಯರೋಗವು ಗಾಳಿಯ ಮೂಲಕ ಹರಡುತ್ತದೆ. ಶ್ವಾಸಕೋಶದ ಟಿಬಿ ಇರುವ ವ್ಯಕ್ತಿಯು ಕೆಮ್ಮಿದಾಗ, ಸೀನಿದಾಗ ಅಥವಾ ಉಗುಳಿದಾಗ ಬ್ಯಾಕ್ಟೀರಿಯಾಗಳು ಗಾಳಿಯಲ್ಲಿ ಹರಡುತ್ತವೆ. ಆ ಗಾಳಿಯನ್ನು ಆರೋಗ್ಯವಂತ ವ್ಯಕ್ತಿ ಉಸಿರಾಡಿದಾಗ ಅವರ ದೇಹಕ್ಕೆ ರೋಗಾಣು ಪ್ರವೇಶಿಸುತ್ತದೆ. ಆದರೆ, ಟಿಬಿ ಪೀಡಿತ ವ್ಯಕ್ತಿ ಬಳಸಿದ ತಟ್ಟೆ, ಲೋಟ ಅಥವಾ ಅವರು ಮುಟ್ಟಿದ ವಸ್ತುಗಳಿಂದ ಈ ರೋಗ ಹರಡುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಉಚಿತ ತಪಾಸಣೆ ಮತ್ತು ಅತ್ಯಾಧುನಿಕ ಪರೀಕ್ಷೆಗಳು:

ಸರ್ಕಾರಿ ಆಸ್ಪತ್ರೆಗಳಲ್ಲಿ ಟಿಬಿ ಪತ್ತೆಗೆ ಉಚಿತ ವ್ಯವಸ್ಥೆ ಇದೆ. ಕಫದ ಪರೀಕ್ಷೆ ಮತ್ತು ಎದೆಯ ಎಕ್ಸ್-ರೇ (ಕ್ಷ-ಕಿರಣ) ಜೊತೆಗೆ, ಪ್ರಸ್ತುತ ಸಿಬಿನ್ಯಾಟ್/ಟ್ರೂನ್ಯಾಟ್ ಎಂಬ ಅತ್ಯಾಧುನಿಕ ಪರೀಕ್ಷೆ ಲಭ್ಯವಿದೆ. ಇದು ಕೆಲವೇ ಗಂಟೆಗಳಲ್ಲಿ ಟಿಬಿ ಇರುವುದನ್ನು ಪತ್ತೆ ಮಾಡುವುದಲ್ಲದೆ, ಅದಕ್ಕೆ ಯಾವ ಔಷಧಿ ಸೂಕ್ತ ಎಂಬುದನ್ನೂ ನಿಖರವಾಗಿ ತಿಳಿಸುತ್ತದೆ. ಕ್ಷಯರೋಗಕ್ಕೆ ಸಂಪೂರ್ಣ ಮತ್ತು ಪರಿಣಾಮಕಾರಿ ಚಿಕಿತ್ಸೆ ಲಭ್ಯವಿದ್ದು, ಇದು ಸಂಪೂರ್ಣವಾಗಿ ವಾಸಿಯಾಗುವ ಕಾಯಿಲೆಯಾಗಿದೆ ಎಂದು ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ.ಇಂದ್ರಾಣಿ ವಿ. ಅವರು ತಿಳಿಸಿದ್ದಾರೆ.

ಸರ್ಕಾರಿ ಆಸ್ಪತ್ರೆಗಳಲ್ಲಿ ಡಾಟ್ಸ್' ಕೇಂದ್ರಗಳ ಮೂಲಕ ಉಚಿತವಾಗಿ ಮಾತ್ರೆಗಳನ್ನು ಆರೋಗ್ಯ ಕಾರ್ಯಕರ್ತರ ಸಮ್ಮುಖದಲ್ಲೇ ನೀಡಲಾಗುತ್ತದೆ. ಸಾಮಾನ್ಯ ಟಿಬಿಗೆ ಕನಿಷ್ಠ 6 ತಿಂಗಳು ಹಾಗೂ ತೀವ್ರತೆಗೆ ಅನುಗುಣವಾಗಿ 9 ರಿಂದ 12 ತಿಂಗಳವರೆಗೆ ನಿರಂತರವಾಗಿ ಮಾತ್ರೆಗಳನ್ನು ತೆಗೆದುಕೊಳ್ಳಬೇಕು. ಮಾತ್ರೆ ಪ್ರಾರಂಭಿಸಿದ ಕೆಲವು ವಾರಗಳಲ್ಲಿ ಗುಣಮುಖರಾದಂತೆ ಅನಿಸಿದರೂ ವೈದ್ಯರ ಸಲಹೆ ಇಲ್ಲದೆ ಚಿಕಿತ್ಸೆ ನಿಲ್ಲಿಸಬಾರದು. ಮಧ್ಯದಲ್ಲೇ ನಿಲ್ಲಿಸಿದರೆ ಬ್ಯಾಕ್ಟೀರಿಯಾಗಳು ಶಕ್ತಿ ಪಡೆದುಕೊಂಡು ಎಂಡಿಆರ್-ಟಿಬಿ (ಮಲ್ಟಿ ಡ್ರಗ್ ರೆಸಿಸ್ಟಂಟ್ ಟಿಬಿ) ಆಗಿ ಬದಲಾಗುತ್ತವೆ. ಇದರ ಚಿಕಿತ್ಸೆ ಅತ್ಯಂತ ಕಠಿಣ ಮತ್ತು ದೀರ್ಘವಾಗಿರುತ್ತದೆ ಎಂದು ಅವರು ಎಚ್ಚರಿಸಿದ್ದಾರೆ.

ನಿಕ್ಷಯ್ ಪೋಷಣ್ ಯೋಜನೆ: ರೂ. 1000 ಆರ್ಥಿಕ ನೆರವು

ಭಾರತ ಸರ್ಕಾರವು ಟಿಬಿ ರೋಗಿಗಳಿಗೆ ಪೌಷ್ಟಿಕ ಆಹಾರಕ್ಕಾಗಿ ಚಿಕಿತ್ಸೆ ಮುಗಿಯುವವರೆಗೆ ಪ್ರತಿ ತಿಂಗಳು 1000 ರೂ.ಗಳನ್ನು ನೇರವಾಗಿ ರೋಗಿಯ ಬ್ಯಾಂಕ್ ಖಾತೆಗೆ ಜಮೆ ಮಾಡುತ್ತದೆ. ರೋಗ ನಿರೋಧಕ ಶಕ್ತಿ ಹೆಚ್ಚಿಸಲು ಚಿಕಿತ್ಸೆಯ ಸಮಯದಲ್ಲಿ ಮೊಟ್ಟೆ, ಹಾಲು, ಬೇಳೆಕಾಳುಗಳು, ಹಸಿರು ತರಕಾರಿ ಮತ್ತು ಹಣ್ಣುಗಳಂತಹ ಪ್ರೊಟೀನ್ ಯುಕ್ತ ಆಹಾರ ಸೇವಿಸುವುದು ಮುಖ್ಯವಾಗಿದೆ.

ತಡೆಗಟ್ಟುವ ಕ್ರಮಗಳು: ಮಗು ಹುಟ್ಟಿದ ತಕ್ಷಣವೇ ಬಿಸಿಜಿ ಲಸಿಕೆ ಹಾಕಿಸುವುದರಿಂದ ಮಕ್ಕಳಲ್ಲಿ ಟಿಬಿ ಬರದಂತೆ ತಡೆಯಬಹುದು. ಕೆಮ್ಮುವಾಗ ಅಥವಾ ಸೀನುವಾಗ ಕರವಸ್ತ್ರ ಬಳಸಬೇಕು. ಮನೆಯಲ್ಲಿ ಯಾರಿಗಾದರೂ ಟಿಬಿ ಇದ್ದರೆ, ಇತರರೂ ತಪಾಸಣೆ ಮಾಡಿಸಿಕೊಳ್ಳಬೇಕು ಹಾಗೂ ಮನೆಯಲ್ಲಿ ಗಾಳಿ-ಬೆಳಕು ಚೆನ್ನಾಗಿ ಆಡುವಂತೆ ನೋಡಿಕೊಳ್ಳಬೇಕು. ನಿಮಗಾಗಲಿ ಅಥವಾ ನಿಮ್ಮ ಪರಿಚಿತರಿಗಾಗಲಿ ಇಂತಹ ಲಕ್ಷಣಗಳು ಕಂಡುಬಂದಲ್ಲಿ ತಕ್ಷಣವೇ ಹತ್ತಿರದ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ, ಉಚಿತ ತಪಾಸಣೆ ಹಾಗೂ ಚಿಕಿತ್ಸೆ ಪಡೆದುಕೊಳ್ಳಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಳ್ಳಾರಿಯಲ್ಲಿ ವಿಶೇಷಚೇತನರಿಂದ ಎಸ್‌ಐಆರ್ ಜಾಗೃತಿ ತ್ರಿಚಕ್ರ ವಾಹನ ರ್‍ಯಾಲಿ ಎಸ್‌ಐಆರ್ ಗಣತಿ ನಮೂನೆ ಶೀಘ್ರವೇ ಭರ್ತಿ ಮಾಡಿ ನೀಡಿ: ಜಿಪಂ ಸಿಇಒ ಕರೆ



ಬಳ್ಳಾರಿ,ಜು.11-

ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆ ಆರಂಭಗೊಂಡಿದ್ದು, ಬೂತ್ ಮಟ್ಟದ ಅಧಿಕಾರಿಗಳು ಈಗಾಗಲೇ ನೀಡಿರುವ ಗಣತಿ ನಮೂನೆಗಳನ್ನು ಭರ್ತಿ ಮಾಡಿ ಮರಳಿ ಅವರಿಗೆ ಶೀಘ್ರವೇ ನೀಡಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಜಿಲ್ಲಾ ಸ್ವೀಪ್ ಸಮಿತಿಯ ಅಧ್ಯಕ್ಷರೂ ಆಗಿರುವ ಮಹಮ್ಮದ್ ಹಾರೀಸ್ ಸುಮೇರ್ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಸ್ವೀಪ್ ಸಮಿತಿ, ಜಿಲ್ಲಾ ಅಂಗವಿಕಲರ ಕಲ್ಯಾಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಕನಕದುರ್ಗಮ್ಮ ದೇವಸ್ಥಾನದ ಆವರಣದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಎಸ್‌ಐಆರ್ ಜಾಗೃತಿ ಅಂಗವಾಗಿ ತ್ರಿಚಕ್ರ ವಾಹನ ರ್‍ಯಾಲಿಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಜುಲೈ 29 ರ ವರೆಗೆ ನಡೆಯುವ ಎಸ್‌ಐಆರ್ ಗಣತಿ ನಮೂನೆ ವಿತರಣೆ ಪ್ರಕ್ರಿಯೆಯಲ್ಲಿ ಬೂತ್ ಮಟ್ಟದ ಅಧಿಕಾರಿಗಳು ಎಸ್‌ಐಆರ್ ಗಣತಿ ನಮೂನೆ ವಿತರಿಸುತ್ತಿದ್ದಾರೆ. ತಮಗೆ ನೀಡಿರುವ ಗಣತಿ ನಮೂನೆ ಫಾರ್ಮ್ ಗಳನ್ನು ಶೀಘ್ರವೇ ಭರ್ತಿ ಮಾಡಿ ನೀಡಬೇಕು. ಕೊನೆಯವರೆಗೂ ಕಾಯುವುದು ಬೇಡ ಎಂದು ತಿಳಿಸಿದರು.

ಜಿಲ್ಲೆಯ ಯಾವುದೇ ಒಬ್ಬ ವಿಶೇಷಚೇತನರೂ ಈ ಎಸ್‌ಐಆರ್ ಪ್ರಕ್ರಿಯೆಯಿಂದ ವಂಚಿತರಾಗಬಾರದು. ಜಿಲ್ಲೆಯಲ್ಲಿನ ಎಂ.ಆರ್. ಡಬ್ಲ್ಯೂ ಹಾಗೂ ವಿ.ಆರ್.ಡಬ್ಲ್ಯೂ ಕಾರ್ಯಕರ್ತರು ತಮ್ಮ ವ್ಯಾಪ್ತಿಯ ಹಳ್ಳಿಗಳಿಗೆ ಭೇಟಿ ನೀಡಬೇಕು. ಅರ್ಹರ ಪಟ್ಟಿಯ ಆಧಾರದ ಮೇಲೆ ಪ್ರತಿಯೊಬ್ಬರ ಮನೆ ಬಾಗಿಲಿಗೆ ಹೋಗಿ ಎಸ್‌ಐಆರ್ ಪ್ರಕ್ರಿಯೆ ಕುರಿತು ಅರಿವು ಮೂಡಿಸಬೇಕು ಎಂದು ತಿಳಿಸಿದರು.

ಎಸ್‌ಐಆರ್ ಪ್ರಕ್ರಿಯೆಯಲ್ಲಿ ಪ್ರತಿಯೊಬ್ಬರೂ ಭಾಗವಹಿಸಬೇಕು. ಇಲ್ಲದಿದ್ದರೆ 2002 ರ ಮತದಾರರ ಪಟ್ಟಿಯಲ್ಲಿ ಮ್ಯಾಪಿಂಗ್ ಆಗದೇ ಇರುವವರ ಹೆಸರು ಮತದಾರರ ಪಟ್ಟಿಯಲ್ಲಿ ಕೈತಪ್ಪುವ ಸಂಭವವಿರುತ್ತದೆ. ಇದರಿಂದಾಗಿ ಸರ್ಕಾರಿ ಸೌಲಭ್ಯಗಳು ಸಿಗದಂತಾಗುತ್ತದೆ. ಈ ಕುರಿತು ಯಾವುದೇ ಸಂಶಯಗಳಿದ್ದಲ್ಲಿ ತಮ್ಮ ವ್ಯಾಪ್ತಿಯ ಬಿಎಲ್‌ಒ ಅಥವಾ ತಹಶೀಲ್ದಾರರ ಕಚೇರಿಗೆ ಸಂಪರ್ಕಿಸಬಹುದಾಗಿದೆ ಎಂದು ಅರಿವು ಮೂಡಿಸಿದರು.

ಕುಟುಂಬದ ಹಿರಿಯರು ಅಥವಾ ಪೋಷಕರು ಈ ಹಿಂದೆ 2002ರ ಅವಧಿಯಲ್ಲಿ ಭಾರತದ ಯಾವುದೇ ಭಾಗದಲ್ಲಿ ಮತ ಚಲಾಯಿಸಿದ್ದರೆ, ಆ ವಿವರಗಳನ್ನು ಈ ಅರ್ಜಿಯ ಎಡಭಾಗದಲ್ಲಿ ಭರ್ತಿ ಮಾಡಬೇಕಾಗುತ್ತದೆ. 2002ರ ಅವಧಿಯಲ್ಲಿ ಮತ ಚಲಾಯಿಸದೇ ಇರುವವರು ಅರ್ಜಿಯ ಬಲಭಾಗದಲ್ಲಿ ತಮ್ಮ ಪೋಷಕರ (ತಂದೆ, ತಾಯಿ, ಅಜ್ಜ ಅಥವಾ ಅಜ್ಜಿ) ವಿವರಗಳನ್ನು ಭರ್ತಿ ಮಾಡಿ ನೀಡಬೇಕು ಎಂದು ವಿವರಿಸಿದರು.

ಜಿಪಂ ಉಪಕಾರ್ಯದರ್ಶಿ ಶಶಿಕಾಂತ್ ಶಿವಪುರೆ ಅವರು ಮಾತನಾಡಿ, ಪ್ರತಿ ಗ್ರಾಮಗಳಲ್ಲಿ ಕಾರ್ಯನಿರ್ವಹಿಸುವ ವಿ.ಆರ್. ಡಬ್ಲ್ಯೂ ಸಿಬ್ಬಂದಿ ಕಡ್ಡಾಯವಾಗಿ ಪ್ರತಿಯೊಂದು ಮನೆಗೂ ಭೇಟಿ ನೀಡಿ ಮಾಹಿತಿ ಸಂಗ್ರಹಿಸಬೇಕು. ಜಿಲ್ಲೆಯಲ್ಲಿರುವ ಯಾವುದೇ ವಿಶೇಷಚೇತನರು ಈ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಶೀಲನೆಯಿಂದ ಹೊರಗುಳಿಯದಂತೆ ನೋಡಿಕೊಳ್ಳುವುದು ಸಿಬ್ಬಂದಿಯ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಬಳಿಕ ಗಣ್ಯರು ಎಸ್‌ಐಆರ್ ತ್ರಿಚಕ್ರ ವಾಹನ ರ್‍ಯಾಲಿಗೆ ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿದರು.

ರ್‍ಯಾಲಿಯು ಕನಕ ದುರ್ಗಮ್ಮ ದೇವಸ್ಥಾನದ ಆವರಣದಿಂದ ಆರಂಭಗೊಂಡು ಗಡಿಗಿ ಚೆನ್ನಪ್ಪ ವೃತ್ತದ ಮಾರ್ಗವಾಗಿ ರೈಲ್ವೆ ಸ್ಟೇಷನ್ ರಸ್ತೆ ಮೂಲಕ ಹಳೆಯ ಜಿಲ್ಲಾಧಿಕಾರಿಗಳ ಕಚೇರಿ ಆವರಣಕ್ಕೆ ತಲುಪಿ ಮುಕ್ತಾಯಗೊಂಡಿತು. ರ್‍ಯಾಲಿಯಲ್ಲಿ ವಿಶೇಷ ಚೇತನರ ಕೈಯಲ್ಲಿ ಎಸ್‌ಐಆರ್ ಕುರಿತ ಜಾಗೃತಿ ಫಲಕಗಳು ಗಮನಸೆಳೆದವು.

ಈ ವೇಳೆ ಜಿಲ್ಲಾ ಪಂಚಾಯತ್ ಸಹಾಯಕ ನಿರ್ದೇಶಕ ಬಸವರಾಜ ಹಿರೇಮಠ್, ಬಳ್ಳಾರಿ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಶ್ರೀಧರ್ ಐ ಬಾರಿಕರ, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಗೋವಿಂದಪ್ಪ ಸೇರಿಂದತೆ ಜಿಪಂ ಅಧಿಕಾರಿ-ಸಿಬ್ಬಂದಿ ಹಾಗೂ ವಿಶೇಷ ಚೇತನರು, ಸಾರ್ವಜನಿಕರು ಭಾಗವಹಿಸಿದ್ದರು.

# ಸಂವಿಧಾನಿಕ ಮೌಲ್ಯ ಅಳವಡಿಸಿಕೊಂಡು ಸಮಾಜ ಪರಿವರ್ತನೆಗೆ ಯುವಜನರು ಮುಂದಾಗಲಿ: ನ್ಯಾ.ದರಗದ




ಕೊಪ್ಪಳ, ಜು.11-

ಉತ್ತಮ ಸಮಾಜ ನಿರ್ಮಾಣದಲ್ಲಿ ಯುವಜನರ ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, ಸಮಾನತೆ, ಭ್ರಾತೃತ್ವ ಹಾಗೂ ಸಂವಿಧಾನಿಕ ಮೌಲ್ಯಗಳನ್ನು ಅಳವಡಿಸಿಕೊಂಡು ಸಮಾಜ ಪರಿವರ್ತನೆಗೆ ಮುಂದಾಗಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ಮಹಾಂತೇಶ ಎಸ್. ದರಗದ ಹೇಳಿದರು.

ನಗರದ ಕುಷ್ಟಗಿ ರಸ್ತೆಯ ಸಮೂಹ ಸಾಮರ್ಥ್ಯ ಕಟ್ಟಡದ ಸಭಾಂಗಣದಲ್ಲಿ ಇಂಡಿಯನ್ ಸೋಶಿಯಲ್ ಇನ್‌ಸ್ಟಿಟ್ಯೂಟ್ (ಐಎಸ್‌ಐ), ಸಮೂಹ ಸಾಮರ್ಥ್ಯ ಹಾಗೂ ಅಲ್ಫಾ ಫೌಂಡೇಶನ್, ವಿಕಾಸ ಸೇವಾ ಟ್ರಸ್ಟ್, ನೇರಳು ಸಂಸ್ಥೆ ಮತ್ತು ಸಂಭ್ರಮ ಸಂಸ್ಥೆಗಳ ಸಹಯೋಗದಲ್ಲಿ ಶುಕ್ರವಾರ ಆಯೋಜಿಸಿದ್ದ ಮೂರು ದಿನಗಳ ನಾವು ಮತ್ತು ಸಮಾಜ ಯುವಜನರ ಸಾಮರ್ಥ್ಯ ಅಭಿವೃದ್ಧಿ ತರಬೇತಿ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮನುಷ್ಯನು ಸಂಘಜೀವಿಯಾಗಿದ್ದು ಸಮಾಜದೊಂದಿಗೆ ಸಾಮರಸ್ಯದಿಂದ ಬದುಕಬೇಕು. ಆದರೆ ಇತ್ತೀಚಿನ ದಿನಗಳಲ್ಲಿ ಹಣ, ಆಸ್ತಿ ಮತ್ತು ಅಧಿಕಾರದ ವ್ಯಾಮೋಹದಿಂದ ಸ್ವಾರ್ಥ ಜೀವನ ಹೆಚ್ಚಾಗುತ್ತಿದ್ದು, ಸಮಾನತೆ ಹಾಗೂ ಭ್ರಾತೃತ್ವದ ಮೌಲ್ಯಗಳು ಕ್ಷೀಣಿಸುತ್ತಿವೆ. ಆಸ್ತಿ, ಹಣ ಮತ್ತು ಸ್ಥಾನಮಾನಕ್ಕಿಂತ ಪ್ರೀತಿ, ವಿಶ್ವಾಸ ಹಾಗೂ ಮಾನವೀಯ ಸಂಬಂಧಗಳಿಗೆ ಹೆಚ್ಚಿನ ಮಹತ್ವ ನೀಡಬೇಕು ಎಂದು ಹೇಳಿದರು.

ಶಿಕ್ಷಣವು ಕೇವಲ ಅಕ್ಷರಜ್ಞಾನಕ್ಕೆ ಸೀಮಿತವಾಗದೆ, ವಿಜ್ಞಾನ, ಕಾನೂನು, ಸಂವಿಧಾನ ಹಾಗೂ ಸಾಮಾಜಿಕ ಮೌಲ್ಯಗಳನ್ನು ಅರ್ಥಮಾಡಿಕೊಳ್ಳುವ ಸಾಧನವಾಗಬೇಕು. ಡಾ. ಬಿ.ಆರ್. ಅಂಬೇಡ್ಕರ್ ಅವರ ಶಿಕ್ಷಣ, ಸಂಘಟನೆ, ಹೋರಾಟ ಸಂದೇಶವನ್ನು ಅಳವಡಿಸಿಕೊಂಡು ಸಮಾಜವನ್ನು ಸನ್ಮಾರ್ಗದತ್ತ ಕೊಂಡೊಯ್ಯುವ ಜವಾಬ್ದಾರಿ ಯುವಜನರ ಮೇಲಿದೆ ಎಂದು ತಿಳಿಸಿದರು.

ಉತ್ತಮ ವಿಚಾರಗಳನ್ನು ಒಳಗೊಂಡ ಗ್ರಂಥಗಳನ್ನು ಓದುವ ಮೂಲಕ ಜ್ಞಾನವನ್ನು ವಿಸ್ತರಿಸಿಕೊಳ್ಳಬೇಕು. ನಿರಂತರ ಕಲಿಕೆ ಹಾಗೂ ಸಾಮಾಜಿಕ ಜಾಗೃತಿಯಿಂದ ಮಾತ್ರ ಉತ್ತಮ ಸಮಾಜ ನಿರ್ಮಾಣ ಸಾಧ್ಯ ಎಂದು ಹೇಳಿದರು.

ಮಕ್ಕಳ ಕಲ್ಯಾಣ ಸಮಿತಿಯ ಮಾಜಿ ಸದಸ್ಯೆ ಸರೋಜಾ ಬಾಕಳೆ ಮಾತನಾಡಿ, ಶಿಕ್ಷಣಕ್ಕೆ ಸಾಕಷ್ಟು ಅವಕಾಶಗಳಿದ್ದರೂ ಮಕ್ಕಳು ವಿವಿಧ ರೀತಿಯ ಶೋಷಣೆಗೆ ಒಳಗಾಗುತ್ತಿರುವುದು ಆತಂಕಕಾರಿ. ಮಕ್ಕಳ ಹಕ್ಕುಗಳು ಹಾಗೂ ಅವರಿಗೆ ಲಭ್ಯವಿರುವ ಕಾನೂನು ರಕ್ಷಣೆ ಕುರಿತು ಯುವಜನರು ಸಮಗ್ರ ಅರಿವು ಹೊಂದಬೇಕು ಎಂದು ಸಲಹೆ ನೀಡಿದರು.

ಕಾರ್ಯಾಗಾರದ ಮೊದಲ ದಿನದ ಅಧಿವೇಶನವನ್ನು ಸಂಪನ್ಮೂಲ ವ್ಯಕ್ತಿ ಧರ್ಮರಾಜ ಗೋನಾಳ ನಡೆಸಿಕೊಟ್ಟರು.

ಕಾರ್ಯಕ್ರಮದಲ್ಲಿ ಅಲ್ಫಾ ಫೌಂಡೇಶನ್ ಮುಖ್ಯಸ್ಥೆ ಸಲೀಮಾ ಜಾನ್, ವಿಕಾಸ ಸೇವಾ ಟ್ರಸ್ಟ್ ಅಧ್ಯಕ್ಷ ಸುಭಾನ್ ನೀರಲಗಿ , ಸಂಭ್ರಮ ಸಂಸ್ಥೆಯ ಶಂಕರ್ ಸುರಾಳ , ಐಎಸ್‌ಐ ಸಂಯೋಜಕ ವಸಂತ ಹಾಗೂ ವಿವಿಧ ಭಾಗಗಳ ಶಿಬಿರಾರ್ಥಿಗಳು ಉಪಸ್ಥಿತರಿದ್ದರು.

## ಒಂದನೇಯ ಪುಟದಿಂದ

## ಪೊಲೀಸರೇ ಅಪರಾಧ ಪ್ರಕರಣಗಳಲ್ಲಿ ಶಾಮೀಲಾದರೆ ನಿರ್ದಾಕ್ಷಿಣ್ಯ ಕ್ರಮ: ಸಿಎಂ

ಹಾಕಿದ್ದಾರೆ. ಸರ್ಕಾರ ನಿಮ್ಮ ಜೊತೆ ಇರುತ್ತದೆ. ನೀವು ನಿಮ್ಮ ಕರ್ತವ್ಯನ್ನು ಸರಿಯಾಗಿ ನಿಭಾಯಿಸಿ ಎಂದು ಸಿಎಂ ಕಿವಿಮಾತು ಹೇಳಿದರು.

ವಿಧಿವಿಜ್ಞಾನ ಪ್ರಯೋಗಾಲಯಗಳ ಆಧುನೀಕರಣಕ್ಕೆ ಬದ್ಧ: ಇದಕ್ಕೂ ಮುನ್ನ ಗೃಹ ಸಚಿವ ಪ್ರಿಯಾಂಕ್ ಖರ್ಗೆ, ಅಪರಾಧ ಪ್ರಕರಣಗಳ ತ್ವರಿತ ಹಾಗೂ ವೈಜ್ಞಾನಿಕ ತನಿಖೆಗೆ ವಿಧಿವಿಜ್ಞಾನ ಪ್ರಯೋಗಾಲಯಗಳ () ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, ಅವುಗಳನ್ನು ಮತ್ತಷ್ಟು ಬಲಪಡಿಸಲು ರಾಜ್ಯ ಸರ್ಕಾರ ಅಗತ್ಯ ಕ್ರಮಗಳನ್ನು ಕೈಗೊಂಡಿದೆ. ಮೊಬೈಲ್ ವಿಧಿವಿಜ್ಞಾನ ಪ್ರಯೋಗಾಲಯಗಳು ಘಟನೆ ನಡೆದ ಸ್ಥಳದಲ್ಲಿಯೇ ವೈಜ್ಞಾನಿಕ ಸಾಕ್ಷ್ಯ ಸಂಗ್ರಹಿಸಲು ನೆರವಾಗುತ್ತಿದ್ದು, ಪ್ರಸ್ತುತ ರಾಜ್ಯದಲ್ಲಿ 32 ಮೊಬೈಲ್ ವಿಧಿವಿಜ್ಞಾನ ಪ್ರಯೋಗಾಲಯಗಳು ಹಾಗೂ 75 ಹೊಸ ಪೊಲೀಸ್ ವಾಹನಗಳನ್ನು ಸೇವೆಗೆ ಒದಗಿಸಲಾಗಿದೆ ಎಂದರು.

## ಜು.13ರಂದು ಗಬ್ಬೂರಿನಲ್ಲಿ ಶಾಂತಮೂರ್ತಿ ಶಿವಾಚಾರ್ಯರ 27ನೇ ಪುಣ್ಯಸ್ಮರಣೋತ್ಸವ

ಆಯುಕ್ತ ಬಿ. ವೆಂಕಟಸಿಂಗ್, ಕನ್ನಡ ವಿಶ್ವವಿದ್ಯಾಲಯದ ಅಧ್ಯಯನಾಂಗ ನಿರ್ದೇಶಕ ಡಾ. ಅಮರೇಶ ಯತ ಗಲ್ ಸೇರಿದಂತೆ ಹಲವು ಗಣ್ಯರು ವಿಶೇಷ ಉಪನ್ಯಾಸ ನೀಡಲಿದ್ದಾರೆ.

ರಾಯಚೂರು ಲೋಕಸಭಾ ಸದಸ್ಯ ಜಿ. ಕುಮಾರ ನಾಯಕ್, ಮಾಜಿ ಸಚಿವ ಎನ್.ಎಸ್. ಬೋಸರಾಜು, ಜಿಲ್ಲೆಯ ಶಾಸಕರು, ವಿಧಾನ ಪರಿಷತ್ ಸದಸ್ಯರು, ಮಾಜಿ ಸಚಿವರು, ಮಾಜಿ ಶಾಸಕರು, ಜನಪ್ರತಿನಿಧಿಗಳು ಹಾಗೂ ವೀರಶೈವ ಸಮಾಜದ ಮುಖಂಡರು ಕಾರ್ಯ ಕ್ರಮದಲ್ಲಿ ಭಾಗವಹಿಸಲಿದ್ದಾರೆ.

ಕಾರ್ಯಕ್ರಮದ ಅಂಗವಾಗಿ ಪೂಜ್ಯ ಶ್ರೀಗಳ ತುಲಾಭಾರ ಸೇವೆ, ಸಂಗೀತ ಸೇವೆ ಹಾಗೂ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿದ್ದು, ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಜಗದ್ಗುರುಗಳ ಆಶೀರ್ವಾದ ಪಡೆಯುವಂತೆ ಚನ್ನಬಸವ ಮತ ಮನವಿ ಮಾಡಿದರು.

## ಸೂಪರ್‌ವೈಜರ್ ಅಮರಮ್ಮ ವಿರುದ್ಧ ಜಾತಿ ನಿಂದನೆ ರಾಮಲಿಂಗಮ್ಮ ದೂರು

ಳಿಸಬೇಕೆಂದು ಆಗ್ರಹಿಸಿದ್ದಾರೆ.

ಪ್ರತಿಗಳನ್ನು ಸಲ್ಲಿಸಲಾದ ಅಧಿಕಾರಿಗಳು: 1. ಜಿಲ್ಲಾಧಿಕಾರಿಗಳು, ರಾಯಚೂರು 2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ 3. ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ರಾಯಚೂರು 4. ಅರಕ್ಷಕ ಉಪನಿರೀಕ್ಷಕರು, ಶಕ್ತಿನಗರ ಪೊಲೀಸ್ ಠಾಣೆ 5. ರಾಜ್ಯಾಧ್ಯಕ್ಷರು, ಭಾರತ ದಲಿತ ಸಂಘರ್ಷ ಸಮಿತಿ, ಬೆಂಗಳೂರು

ಈ ಕುರಿತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಪೊಲೀಸ್ ಇಲಾಖೆಯಿಂದ ಇನ್ನೂ ಯಾವುದೇ ಅಧಿಕೃತ ಪ್ರತಿಕ್ರಿಯೆ ಬಂದಿಲ್ಲ.

## ಗ್ರಾಪಂ ಮಾಜಿ ಅಧ್ಯಕ್ಷನ ಕೊಲೆ ಪ್ರಕರಣ : 6 ಆರೋಪಿಗಳ ಬಂಧನ

ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಭಾರತೀಯ ನ್ಯಾಯ ಸಂಹಿತೆಯ (ಬಿಎನ್‌ಎಸ್-2023) ವಿವಿಧ ಕಲಂಗಳು ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ (ದೌರ್ಜನ್ಯ ತಡೆ) ಕಾಯ್ದೆಯಡಿ ಪ್ರಕರಣ ದಾಖಲಿಸಲಾಗಿದೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ರವಿ, ವೀರೇಶ್, ನರಸಿಂಹ, ಮಾರೆಪ್ಪ, ರಮೇಶ್ ಹಾಗೂ ಪ್ರವೀಣ್ ಎಂಬ ಆರು ಆರೋಪಿಗಳನ್ನು ಬಂಧಿಸಿರುವ ಪೊಲೀಸರು, ಮುಂದಿನ ಕಾನೂನು ಕ್ರಮ ಕೈಗೊಂಡಿದ್ದಾರೆ.

## ಅಬಕಾರಿ ಇಲಾಖೆಗೆ ದೂರು ನೀಡಿದರೂ ಕ್ರಮವಿಲ್ಲ: ಜಿಲ್ಲಾಧಿಕಾರಿಗೆ ಮಾರುತಿ ದೂರು ನಿಯಮ ಉಲ್ಲಂಘಿಸಿದ ಮದ್ಯದ ಅಂಗಡಿಗಳ ಪರವಾನಗಿ ರದ್ದುಪಡಿಸಲು ಆಗ್ರಹ

ನೀಡದಂತೆ ಕ್ರಮ ಕೈಗೊಳ್ಳಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಈ ಕುರಿತು ಶೀಘ್ರ ಕ್ರಮ ಕೈಗೊಳ್ಳದಿದ್ದರೆ ಜಿಲ್ಲಾಧಿಕಾರಿ ಕಚೇರಿ ಎದುರು ದಲಿತ ಸೇನೆ ವತಿಯಿಂದ ಧರಣಿ ಸತ್ಯಾಗ್ರಹ ನಡೆಸಲಾಗುವುದು ಎಂದು ಮಾರುತಿ ಕಮ್ತೋಳ್ ಎಚ್ಚರಿಕೆ ನೀಡಿದ್ದಾರೆ.

## ಸಿಂಧನೂರುನಲ್ಲಿ ಅಕ್ರಮ ಚಟುವಟಿಕೆ ಗಳಿಗೆ ಕಡಿವಾಣ ಹಾಕಲು-ಬಸನಗೌಡ ಬಾದರ್ಲಿ ಒತ್ತಾಯ

ಹಿತಾಸಕ್ತಿಯ ವಿವಿಧ ವಿಷಯಗಳು ಕುರಿತು ಗೃಹ ಸಚಿವರೊಂದಿಗೆ ಸಮಗ್ರವಾಗಿ ಚರ್ಚಿಸಿದರು. ಮಾದಕ ವಸ್ತುಗಳ ಜಾಲವನ್ನು ಪರಿಣಾಮಕಾರಿಯಾಗಿ ನಿಯಂತ್ರಿಸಲು. ಕೈಗೊಳ್ಳಬೇಕಾದ.ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳುವ ವಿಷಯಗಳ ಕುರಿತು ಮಾತುಕತೆ ನಡೆಸಿದರು.

## ಸಿಂಧನೂರು ತಾಲೂಕನ್ನು ಬರಪೀಡಿತ ಪ್ರದೇಶವನ್ನು ಘೋಷಿಸಲು. ಶಾಸಕ ಹಂಪನಗೌಡ ಬಾದರ್ಲಿ ಮನವಿ

ಅನಿವಾರ್ಯ ಪರಿಸ್ಥಿತಿ ಎದುರಿಸುತ್ತಿದ್ದು ಇದರಿಂದ ಕೃಷಿಗೆ ಬೇಕಾಗುವ ಎಲ್ಲಾ ಧಾನ್ಯಗಳ ಬೆಲೆ ಏರಿಕೆಯಾಗಿದೆ. ಇದರಿಂದ ಗ್ರಾಮೀಣ ಪ್ರದೇಶದ ರೈತರು ಸಂಕಷ್ಟಕ್ಕೆ ಒಳಗಾಗಿದ್ದಾರೆ. ರೈತರಿಗೆ ಧೈರ್ಯ ತುಂಬುವ ಕೆಲಸ ಸರ್ಕಾರದಿಂದ ಆಗಬೇಕು. ಮತ್ತು ಫಸಲ್ ಭೀಮಾ ಯೋಜನೆ ಅಡಿ ಬೆಳೆ ಹಾನಿ ಪರಿಹಾರ ಶೀಘ್ರವೇ ಬಿಡುಗಡೆ ಮಾಡಬೇಕು. ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆ ಅಡಿ ಬೆಳೆವಿಮೆ ಪರಿಹಾರ ತ್ವರಿತ ಗತಿಯಲ್ಲಿ ಮಂಜೂರು ಮಾಡಬೇಕು ರೈತರಿಗೆ ಬೆಳೆ ಸಾಲ ಮರುಪಾವತಿಗೆ ಕಾಲಾವಕಾಶ ನೀಡಿ. ಬಡ್ಡಿ ವಿನಾಯಿತಿ ಹಾಗೂ ಹೊಸ ಸಾಲ ಸೌಲಭ್ಯ ಒದಗಿಸಬೇಕು. ಜಾನುವಾರುಗಳಿಗೆ ಮೇವು ಹಾಗೂ ಕುಡಿಯುವ ನೀರಿನ ವ್ಯವಸ್ಥೆಗೆ ವಿಶೇಷ ಅನುದಾನ ಬಿಡುಗಡೆ ಮಾಡಬೇಕು. ಉದ್ಯೋಗ ಖಾತ್ರಿ ಯೋಜನೆ ಅಡಿ ಹೆಚ್ಚುವರಿ ಕಾಮಗಾರಿಗೆ ಅನುಮೋದನೆ ನೀಡಬೇಕು ಎಂದು ಅವರು. ಸರಕಾರಕ್ಕೆ ಮನವಿ ಮಾಡಿದ್ದಾರೆ.

## ಪ್ರತ್ಯೇಕ ಕಳವು ಪ್ರಕರಣ : 6 ಆರೋಪಿಗಳ ಬಂಧನ 27 ಲಕ್ಷ ರೂ. ಮೌಲ್ಯದ ಚಿನ್ನಾಭರಣ, 15 ಬೈಕ್‌ಗಳ ವಶ

ವಿಜಯನಗರ ,ಜು.11-

ವಿಜಯನಗರ ಜಿಲ್ಲಾ ಪೊಲೀಸರು ನಡೆಸಿದ ವಿಶೇಷ ಕಾರ್ಯಾಚರಣೆಯಲ್ಲಿ ಜಿಲ್ಲೆಯ ವಿವಿಧ ಪೊಲೀಸ್ ಠಾಣೆಗಳ ವ್ಯಾಪ್ತಿಯಲ್ಲಿ ನಡೆದಿದ್ದ ಕಳವು ಪ್ರಕರಣಗಳನ್ನು ಭೇದಿಸಿ, 6 ಮಂದಿ ಆರೋಪಿಗಳನ್ನು ಬಂಧಿಸಿದ್ದಾರೆ.

ಆರೋಪಿಗಳಿಂದ ಒಟ್ಟು ಸುಮಾರು 27 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಹಾಗೂ 15 ಕಳುವಾದ ದ್ವಿಚಕ್ರ ವಾಹನಗಳನ್ನು ವಶಪಡಿಸಿಕೊಳ್ಳಲಾಗಿದೆ.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ (ಎಸ್‌ಪಿ) ಜಾಹ್ನವಿ ಅವರು ಗುರುವಾರ ಹೊಸಪೇಟೆಯ ಎಸ್‌ಪಿ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಈ ಮಾಹಿತಿ ನೀಡಿದರು.

ಹೊಸಪೇಟೆ ಹಾಗೂ ಹರಪನಹಳ್ಳಿ ಉಪವಿಭಾಗಗಳ ವಿವಿಧ ಪೊಲೀಸ್ ಠಾಣೆಗಳಲ್ಲಿ ದಾಖಲಾಗಿದ್ದ

ಚಿನ್ನಾಭರಣ ಮತ್ತು ಬೈಕ್ ಕಳವು ಪ್ರಕರಣಗಳ ತನಿಖೆಯನ್ನು ವಿಶೇಷ ತಂಡಗಳು ನಡೆಸಿ ಯಶಸ್ವಿಯಾಗಿ ಭೇದಿಸಿವೆ ಎಂದು ಅವರು ತಿಳಿಸಿದರು.

ಹೊಸಪೇಟೆ ಪಟ್ಟಣ ಪೊಲೀಸ್ ಠಾಣೆ ವ್ಯಾಪ್ತಿಯ ಪ್ರಕರಣದಲ್ಲಿ ಸುಮಾರು 11 ಲಕ್ಷ ರೂ. ಮೌಲ್ಯದ 6 ಬೈಕ್‌ಗಳು ಹಾಗೂ 33 ಗ್ರಾಂ ಚಿನ್ನಾಭರಣವನ್ನು ವಶಪಡಿಸಿಕೊಳ್ಳಲಾಗಿದೆ.

ಹರಪನಹಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯ ಕಳವು ಪ್ರಕರಣದಲ್ಲಿ 2.80 ಲಕ್ಷ ರೂ. ಮೌಲ್ಯದ 28 ಗ್ರಾಂ ಚಿನ್ನಾಭರಣ ಜಪ್ತಿ ಮಾಡಲಾಗಿದೆ.

ಚಿತ್ತವಾಡಗಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದ ಬೈಕ್ ಕಳವು ಪ್ರಕರಣದಲ್ಲಿ 4.75 ಲಕ್ಷ ರೂ. ಮೌಲ್ಯದ 9 ದ್ವಿಚಕ್ರ ವಾಹನಗಳನ್ನು ವಶಪಡಿಸಿಕೊಳ್ಳಲಾಗಿದೆ.

ಹೂವಿನಹಡಗಲಿ ಪೊಲೀಸ್ ಠಾಣೆ ವ್ಯಾಪ್ತಿಯ ಮತ್ತೊಂದು ಪ್ರಕರಣದಲ್ಲಿ 3 ಲಕ್ಷ ರೂ. ಮೌಲ್ಯದ 52 ಗ್ರಾಂ ಚಿನ್ನಾಭರಣವನ್ನು ಪೊಲೀಸರು ಜಪ್ತಿ ಮಾಡಿದ್ದಾರೆ.

ಜಿಲ್ಲೆಯ ವಿವಿಧ ಕಳವು ಪ್ರಕರಣಗಳಲ್ಲಿ ಭಾಗಿಯಾಗಿದ್ದ 6 ಮಂದಿ ಆರೋಪಿಗಳನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ಪ್ರಕರಣಗಳ ಭೇದನೆಯಲ್ಲಿ ಉತ್ತಮ ಕಾರ್ಯನಿರ್ವಹಿಸಿದ ತನಿಖಾ ತಂಡದ ಅಧಿಕಾರಿಗಳು ಮತ್ತು ಸಿಬ್ಬಂದಿಯನ್ನು ಎಸ್‌ಪಿ ಜಾಹ್ನವಿ ಅಭಿನಂದಿಸಿದರು.

## ಮತದಾರರ ಪಟ್ಟಿ ಪರಿಷ್ಕರಣೆಗೆ ಸಾರ್ವಜನಿಕರು, ರಾಜಕೀಯ ಪಕ್ಷಗಳ ಸಹಭಾಗಿತ್ವ ಅಗತ್ಯ: ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ



ಬಳ್ಳಾರಿ,ಜು.11-

ಭಾರತ ಚುನಾವಣಾ ಆಯೋಗದ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯವು ಸಂಪೂರ್ಣ ಪಾರದರ್ಶಕತೆಯಿಂದ ಕೂಡಿದ್ದು, ಇದರಲ್ಲಿ ಸಾರ್ವಜನಿಕರು ಹಾಗೂ ರಾಜಕೀಯ ಪಕ್ಷಗಳ ಸಹಭಾಗಿತ್ವವೂ ಅತ್ಯಗತ್ಯವಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಯೂ ಆದ ಜಿಲ್ಲಾಧಿಕಾರಿ ಕೆ. ನಾಗೇಂದ್ರ ಪ್ರಸಾದ್ ಅವರು ಹೇಳಿದರು.

ನಗರದ ನೂತನ ಜಿಲ್ಲಾಡಳಿತ ಭವನದ ವಿಡಿಯೋ ಸಭಾಂಗಣದಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ(ಎಸ್‌ಐಆರ್) ಸಂಬಂಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ಗುರುವಾರ ಹಮ್ಮಿಕೊಂಡಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮತದಾರರ ಪಟ್ಟಿಯ ನಿಖರತೆ ಮತ್ತು ಪಾರದರ್ಶಕತೆ ಕಾಯ್ದುಕೊಳ್ಳುವ ನಿಟ್ಟಿನಲ್ಲಿ ಜಿಲ್ಲೆಯ ಎಲ್ಲಾ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಹಾಗೂ ಸಾರ್ವಜನಿಕರು ಸಕಾರಾತ್ಮಕವಾಗಿ ಸಹಕರಿಸಬೇಕು ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ ಸಂಬಂಧ ಗಣತಿ ನಮೂನೆಗಳ ವಿತರಣೆಯ ಕಾರ್ಯವು ಪ್ರಗತಿಯಲ್ಲಿದ್ದು, ಈಗಾಗಲೇ ಶೇ.97 ಷ್ಟು ಪ್ರಗತಿ ಸಾಧಿಸಲಾಗಿದೆ. ರಾಜಕೀಯ ಪಕ್ಷಗಳು ನೇಮಕ ಮಾಡಿರುವ ಬೂತ್ ಮಟ್ಟದ ಏಜೆಂಟರುಗಳು ನಮಗೆ ಸಂಪೂರ್ಣ ಮಾಹಿತಿ ನೀಡಿ ಸಹಕರಿಸಬೇಕಿದೆ ಎಂದು ಹೇಳಿದರು.

ಗಣತಿ ನಮೂನೆಗಳನ್ನು ಭರ್ತಿ ಮಾಡುವಾಗ ಸಾರ್ವಜನಿಕರಲ್ಲಿ ಉಂಟಾಗುವ ಗೊಂದಲಗಳ ತಪ್ಪಿಸಲು ವ್ಯಾಪಕ ಜಾಗೃತಿ ಮೂಡಿಸಲಾಗುತ್ತಿದೆ. ಫಾರ್ಮ್‌ಗಳಲ್ಲಿನ ಮೊದಲ ಭಾಗ ಹಾಗೂ ಎರಡನೇ ಭಾಗಗಳನ್ನು ಭರ್ತಿ ಮಾಡುವಾಗ ಆಗುವ ಸಾಮಾನ್ಯ ತಪ್ಪುಗಳನ್ನು ತಪ್ಪಿಸಲು ಬಿಎಲ್‌ಒ ಮತ್ತು ಬಿಎಲ್‌ಎಗಳಿಗೆ ವಿಶೇಷ ತರಬೇತಿ ನೀಡಲಾಗಿದೆ. ಜಿಲ್ಲೆಯಲ್ಲಿ ಅತ್ಯಂತ ಪಾರದರ್ಶಕ ಹಾಗೂ ದೋಷಮುಕ್ತ ಮತದಾರರ ಪಟ್ಟಿ ಸಿದ್ಧಪಡಿಸಲು ಎಲ್ಲಾ ರಾಜಕೀಯ ಪಕ್ಷಗಳು ಕೈಜೋಡಿಸಬೇಕು ಎಂದು ಮನವಿ ಮಾಡಿದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್.ಝುಬೇರ್ ಜಿಲ್ಲಾ ಚುನಾವಣಾಧಿಕಾರಿ ಕಚೇರಿ ಅಧಿಕಾರಿ- ಸಿಬ್ಬಂದಿ ಹಾಗೂ ಜಿಲ್ಲೆಯ ಎಲ್ಲಾ ಮಾನ್ಯತೆ ಪಡೆದ ರಾಷ್ಟ್ರೀಯ ಮತ್ತು ಪ್ರಾದೇಶಿಕ ರಾಜಕೀಯ ಪಕ್ಷಗಳ ಮುಖಂಡರು ಹಾಗೂ ಪ್ರತಿನಿಧಿಗಳು ಪಾಲ್ಗೊಂಡಿದ್ದರು.

## ಜನರ ಹೃದಯದಲ್ಲಿ ಸ್ಥಾನ ಪಡೆದಿರುವುದೇ ನನ್ನ ದೊಡ್ಡ ಸಾಧನೆ: ಹನೀಫಾ ಎಂ.ಶೇಖ್



ಕಲಬುರಗಿ,ಜು.11-

''ನಾನು ಸ್ವತಃ ಯಾವುದೇ ದೊಡ್ಡ ಸಾಧನೆ ಮಾಡಿಲ್ಲ. ಆದರೆ ಜನರ ಹೃದಯದಲ್ಲಿ ಸ್ಥಾನ ಪಡೆದಿರುವುದೇ ನನ್ನ ಜೀವನದ ಅತ್ಯಂತ ದೊಡ್ಡ ಸಾಧನೆ. ಕಲಬುರಗಿ ಜಿಲ್ಲೆಯಲ್ಲಿ ಕಲೆಗೆ ಇನ್ನಷ್ಟು ಪ್ರೋತ್ಸಾ ಹ ಮತ್ತು ಗೌರವ ಸಿಗಬೇಕಿದೆ'' ಎಂದು ರಾಜ್ಯೋತ್ಸ ವ ಪ್ರಶಸ್ತಿ ಪುರಸ್ಕೃತ ಹಿರಿಯ ಜಾನಪದ ಕಲಾವಿದೆ ಹನೀಫಾ ಎಂ. ಶೇಖ್ ಹೇಳಿದರು.

ನಗರದ ರಂಗಾಯಣ ಅಡಿಟೋರಿಯಂನಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಆಯೋಜಿಸಿದ್ದ ಸಾಧಕರೊಂದಿಗೆ ಸಂವಾದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಬಡತನದ ದಿನಗಳಲ್ಲಿ ಜಾನಪದ ಕಲೆಯೇ ತಮ್ಮ ಬದುಕಿಗೆ ಆಸರೆಯಾಗಿತ್ತು ಎಂದು ಸ್ಮರಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಅಧಿಕಾರಿಗಳು ಹಾಗೂ ಸಹ ಕಲಾವಿದರು ತಮ್ಮೊಂದಿಗೆ ಇರುವವರೆಗೆ ತಾವು ಬಡವರಲ್ಲ, ಶ್ರೀಮಂತರೇ ಎಂದು ಹೇಳಿದ ಅವರು, ಇಲಾಖೆಯ ಬೆಂಬಲವನ್ನು ಶ್ಲಾಘಿಸಿದರು. ಇದೇ ವೇಳೆ ತಾವು ರಚಿಸಿದ ಭಜನಾ ಗೀತೆಯನ್ನು ಹಾಡಿ ನೆರೆದಿದ್ದವರ ಮೆಚ್ಚುಗೆಗೆ ಪಾತ್ರರಾದರು. ಕಲಾವಿದರು ಸರ್ಕಾರದ ವಿವಿಧ ಸೌಲಭ್ಯಗಳನ್ನು ಪಡೆಯಲು ಅಗತ್ಯ ದಾಖಲೆಗಳನ್ನು ಸಕಾಲದಲ್ಲಿ ಸಲ್ಲಿಸಬೇಕು ಎಂದು ಸಲಹೆ ನೀಡಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಂಟಿ ನಿರ್ದೇಶಕ ಬಸವರಾಜ ಹೂಗಾರ ಮಾತನಾಡಿ, ಕಲ್ಯಾಣ ಕರ್ನಾಟಕವು ವಚನ, ತತ್ವಪದ ಹಾಗೂ ದಾಸ ಪರಂಪರೆಯ ಮೂಲಕ ಮಹಿಳಾ ಧ್ವನಿಯನ್ನು ಜಗತ್ತಿಗೆ ಪರಿಚಯಿಸಿದ ಸಾಂಸ್ಕೃತಿಕ ನೆಲವಾಗಿದೆ. ಸಂಪ್ರದಾಯಸ್ಥ ಕುಟುಂಬದಿಂದ ಬಂದ ಹನೀಫಾ ಎಂ. ಶೇಖ್ ಅವರು ತತ್ವಪದಗಳ ಮೂಲಕ ವಿಶಿಷ್ಟ ಸಾಂಸ್ಕೃತಿಕ ಪರಂಪರೆಯನ್ನು ಕಟ್ಟಿಕೊಟ್ಟಿದ್ದು, ಅವರ ಜೀವನ ಇಂದಿನ ಯುವ ಪೀಳಿಗೆಗೆ ಪ್ರೇರಣೆಯಾಗಿದೆ ಎಂದು ಹೇಳಿದರು.

ರಂಗಾಯಣದ ಆಡಳಿತಾಧಿಕಾರಿ ಸಿದ್ರಾಮ ಸಿಂಧೆ ಮಾತನಾಡಿ, ಕಡಿಕೋಲ ಮಡಿವಾಳಪ್ಪನವರ ತತ್ವಪದಗಳನ್ನು ಗಾಯನದ ಮೂಲಕ ಜನಮಾನಸಕ್ಕೆ ತಲುಪಿಸಿ, ನಾಡಿನ ಸಂಸ್ಕೃತಿಯನ್ನು ಉಳಿಸಿ ಬೆಳೆಸುವಲ್ಲಿ ಹನೀಫಾ ಎಂ. ಶೇಖ್ ಅವರ ಕೊಡುಗೆ ಅಪಾರವಾಗಿದೆ ಎಂದು ಪ್ರಶಂಸಿಸಿದರು.

ನಶಿಸುತ್ತಿರುವ ಸಾಂಪ್ರದಾಯಿಕ ಕಲೆಗಳನ್ನು ಉಳಿಸುವ ಉದ್ದೇಶದಿಂದ ಹಿರಿಯ ಕಲಾವಿದರನ್ನು ಗುರುತಿಸಿ ವೇದಿಕೆ ಕಲ್ಪಿಸಿರುವ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕಾರ್ಯವನ್ನು ಅವರು ಶ್ಲಾಘಿಸಿದರು. ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಪನಿರ್ದೇಶಕಿ ಜಗದೀಶ್ವರಿ ನಾಸಿ ಸ್ವಾಗತಿಸಿದರು.

ಕಾರ್ಯಕ್ರಮದಲ್ಲಿ ರಂಗಾಯಣದ ನಿರ್ದೇಶಕಿ ಡಾ.ಸುಜಾತಾ ಜಂಗಮಶೆಟ್ಟಿ, ದತ್ತಾತ್ರೇಯ ಭಂಗಿ, ಸಿದ್ಧರಾಮ ಪೊಲೀಸ್ ಪಾಟೀಲ್, ಗಣ್ಯರಾದ ಕೋಬಾಳ, ಗಿರಿಜಾ ಕರ್ಪೂರ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

## ಬಳ್ಳಾರಿ: ಸರ್ಕಾರಿ ನೌಕರರ ಭವನ ನಿರ್ಮಾಣಕ್ಕೆ 0.20 ಸೆಂಟ್ಸ್ ಜಮೀನು ಕಾಯ್ದಿರಿಸಿ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಆದೇಶ

ಬಳ್ಳಾರಿ,ಜು.11

ಬಳ್ಳಾರಿ ನಗರದ ಸರ್ಕಾರಿ ನೌಕರರ ಬಹುದಿನಗಳ ಬೇಡಿಕೆಯಾಗಿದ್ದ ಜಿಲ್ಲಾ ಸರ್ಕಾರಿ ನೌಕರರ ಭವನ ನಿರ್ಮಾಣಕ್ಕೆ ಕನಸು ಈಡೇರಿದ್ದು, ನಗರದ ಪ್ರಮುಖ ಪ್ರದೇಶದಲ್ಲಿ ಭವನ ನಿರ್ಮಾಣಕ್ಕಾಗಿ 0.20 ಸೆಂಟ್ಸ್ ಜಮೀನನ್ನು ಕಾಯ್ದಿರಿಸಿ ಜಿಲ್ಲಾಧಿಕಾರಿ ಕೆ. ನಾಗೇಂದ್ರ ಪ್ರಸಾದ್ ಅವರು ಆದೇಶ ಹೊರಡಿಸಿದ್ದಾರೆ.

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷರು ಹಾಗೂ ಬಳ್ಳಾರಿ ಜಿಲ್ಲಾ ಶಾಖೆಯ ಅಧ್ಯಕ್ಷರು ಸಲ್ಲಿಸಿದ್ದ ಮನವಿಯನ್ನು ಪುರಸ್ಕರಿಸಿ ಈ ಕ್ರಮ ಕೈಗೊಳ್ಳಲಾಗಿದೆ. ಜಿಲ್ಲೆಯ ಸರ್ಕಾರಿ ನೌಕರರ ಶ್ರೇಯೋಭಿವೃದ್ಧಿ, ಕೌಶಲ್ಯಾಭಿವೃದ್ಧಿ ತರಬೇತಿ ಹಾಗೂ ಇತರೆ ಸಾಂಸ್ಕೃತಿಕ ಚಟುವಟಿಕೆಗಳ ಉದ್ದೇಶಕ್ಕಾಗಿ ಈ ಭವನವನ್ನು ನಿರ್ಮಿಸಲಾಗುತ್ತಿದೆ.

ಈ ಜಮೀನು ಮಂಜೂರಾತಿಗೆ ರಾಜ್ಯಸಭಾ ಸದಸ್ಯರಾದ ಡಾ. ಸೈಯದ್ ನಾಸೀರ್ ಹುಸೇನ್, ಬಳ್ಳಾರಿ ಗ್ರಾಮಾಂತರ ವಿಧಾನಸಭಾ ಕ್ಷೇತ್ರದ ಶಾಸಕರು ಹಾಗೂ ಮಾಜಿ ಸಚಿವರಾದ ಬಿ. ನಾಗೇಂದ್ರ ಮತ್ತು ಬಳ್ಳಾರಿ ನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ನಾರಾ ಭರತ್ ರೆಡ್ಡಿ ಅವರುಗಳು ಪತ್ರದ ಮೂಲಕ ಶಿಫಾರಸು ಮಾಡಿ, ಬೆಂಬಲ ಸೂಚಿಸಿದ್ದರು.

ಜಮೀನಿನ ವಿವರಗಳು: ಸ್ಥಳ: ಬಳ್ಳಾರಿ ತಾಲ್ಲೂಕು, ಬಳ್ಳಾರಿ ನಗರದ ಟಿ.ಎಸ್. ನಂ. 94 ರ ಪೈಕಿ ವಿಸ್ತೀರ್ಣ 0.20 ಸೆಂಟ್ಸ್.

ಸ್ಥಿತಿಗತಿ: ಎಲ್.ಆರ್ ಪ್ರಕಾರ ಇದು ಗ್ರಾಮಕಂಠ ಜಮೀನಾಗಿದ್ದು, ಕೋಟೆ ಮುಖ್ಯ ರಸ್ತೆ ಸಂಪರ್ಕ ಹೊಂದಿದೆ.

ಪ್ರಸ್ತಾಪಿತ ಜಮೀನಿನಲ್ಲಿ ಯಾವುದೇ ಐತಿಹಾಸಿಕ ಸ್ಮಾರಕಗಳು, ಅನಧಿಕೃತ ಕಟ್ಟಡಗಳು, ಗುಡಿ-ಗೋಪುರಗಳು ಅಥವಾ ಹೈ-ಟೆನ್ಷನ್ ವಿದ್ಯುತ್ ಕಂಬಗಳು ಇರುವುದಿಲ್ಲ. ಯಾವುದೇ 94 ಸಿ ಅಥವಾ 94 ಸಿಸಿ ಅರ್ಜಿಗಳು ಇಲ್ಲಿ ಬಾಕಿ ಇರುವುದಿಲ್ಲ.

ಷರತ್ತುಗಳು:

ಕರ್ನಾಟಕ ಭೂ ಕಂದಾಯ ಕಾಯ್ದೆ 1964 ರ ಕಲಂ 71 ರ ಅಡಿಯಲ್ಲಿ ಈ ಜಮೀನನ್ನು ಜಿಲ್ಲಾಧಿಕಾರಿಗಳ ಹೆಸರಿಗೆ ಕಾಯ್ದಿರಿಸಲಾಗಿದ್ದು, ಕೆಲವು ಪ್ರಮುಖ ಷರತ್ತುಗಳನ್ನು ವಿಧಿಸಲಾಗಿದೆ.

ಕಾಯ್ದಿರಿಸಿದ ಜಮೀನನ್ನು ಯಾವ ಉದ್ದೇಶಕ್ಕಾಗಿ ನೀಡಲಾಗಿದೆಯೋ, ಅದೇ ಉದ್ದೇಶಕ್ಕೆ (ನೌಕರರ ಭವನ) ಬಳಸಬೇಕು. ಆದೇಶ ಹೊರಡಿಸಿದ ದಿನಾಂಕದಿದ ಮೂರು ವರ್ಷದೊಳಗಾಗಿ ಜಮೀನನ್ನು ನಿಗದಿತ ಉದ್ದೇಶಕ್ಕೆ ಬಳಸಿಕೊಳ್ಳತಕ್ಕದ್ದು. ಒಂದು ವೇಳೆ ನಿಗದಿತ ಅವಧಿಯಲ್ಲಿ ಉದ್ದೇಶಿತ ಕಾರ್ಯಕ್ಕೆ ಬಳಸದಿದ್ದಲ್ಲಿ ಜಮೀನನ್ನು ಕಂದಾಯ ಇಲಾಖೆಗೆ ಹಿಂತಿರುಗಿಸಬೇಕು. ಯಾವುದೇ ಷರತ್ತುಗಳನ್ನು ಉಲ್ಲಂಘಿಸಿದರೆ ಮುನ್ಸೂಚನೆ ನೀಡದೆಯೇ ಏಕಪಕ್ಷೀಯವಾಗಿ ಆದೇಶವನ್ನು ರದ್ದುಪಡಿಸಲಾಗುವುದು.

ಸಹಾಯಕ ನಿರ್ದೇಶಕರು, ಭೂ ದಾಖಲೆಗಳ ನಗರ ಮಾಪನ ಇಲಾಖೆ ಬಳ್ಳಾರಿ ಇವರಿಗೆ ಆಸ್ತಿ ಪ್ರಕಟಣೆ ಪತ್ರ (ಪಿಆರ್)/ಎಲ್.ಆರ್‌ನಲ್ಲಿ ಮಾಲಿಕತ್ವ ಬದಲಾವಣೆ ಮಾಡಿ ಹಸ್ತಾಂತರಿಸಲು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಸೂಚನೆ ನೀಡಿದ್ದಾರೆ ಎಂದು ಆದೇಶದಲ್ಲಿ ತಿಳಿಸಲಾಗಿದೆ.



## ವಿಶೇಷ ಸಮಗ್ರ ಪರಿಷ್ಕರಣೆಯಲ್ಲಿ ಪ್ರತಿಯೊಬ್ಬ ಮತದಾರ ಕಡ್ಡಾಯವಾಗಿ ಮಾಹಿತಿ ನೀಡಿರಿ: ಮಹೇಶ್

ಕೊಪ್ಪಳ ಜು.11-

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಕಾರ್ಯಕ್ರಮ ಹಮ್ಮಿಕೊಂಡಿದ್ದು ಬೂತ್ ಮಟ್ಟದ ಅಧಿಕಾರಿಗೆ ಅಗತ್ಯ ಮಾಹಿತಿ ನೀಡಲು ಸಹಕರಿಸಬೇಕೆಂದು ಕೊಪ್ಪಳ ತಾಲೂಕ ಪಂಚಾಯತ ಪಂಚಾಯತ್ ರಾಜ್ ಸಹಾಯಕ ನಿರ್ದೇಶಕ ಮಹೇಶ್ ಅವರು ಕರೆ ನೀಡಿದರು.

ಕೊಪ್ಪಳ ತಾಲೂಕ ಸ್ವೀಪ್ ಸಮಿತಿ, ಣಿಗೇರಾ ಗಾಮ ಪಂಚಾಯತಿ ಹಾಗೂ ಮುಕ್ಕುಂದ ಸುಮಿ ಸ್ಪೇಷಲ್ ಸ್ಟೀಲ್ ಲಿಮಿಟೆಡ್ ಕಂಪನಿ ನೌಕರರ ಸಹಯೋಗದಲ್ಲಿ ಹೊಸಕನಕಾಪುರ ಗ್ರಾಮದಲ್ಲಿ ಗುರುವಾರ (ಜು. 9ರಂದು) ಆಯೋಜಿಸಿದ್ದ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಈ ಕಾರ್ಯಕ್ರಮದ ಮೂಲಕ ಅರ್ಹ ಮತದಾರರನ್ನು ಮತದಾರರ ಪಟ್ಟಿಯಲ್ಲಿ ಸೇರ್ಪಡೆಗೊಳಿಸುವುದು ಹಾಗೂ ಮರಣ ಹೊಂದಿರುವವರು, ಸ್ಥಳಾಂತರಗೊಂಡಿರುವವರು, ನಕಲು ಹೆಸರುಗಳು, ಮತ್ತು ಇತರ ಅನರ್ಹ ಮತದಾರರನ್ನು ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳುವುದು ಇದರ ಉದ್ದೇಶವಾಗಿದೆ. ಜೂನ್ 30 ರಿಂದ ಜುಲೈ 29 ರವರೆಗೆ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಓ) ಮನೆ ಮನೆಗೆ ಭೇಟಿ ನೀಡಿ ಮತದಾರರ ವಿವರಗಳನ್ನು ಪರಿಶೀಲಿಸಲಿದ್ದಾರೆ. ಮತದಾರರು ಎಸ್‌ಐರ್ಆ ಅರ್ಜಿಯನ್ನು ಭರ್ತಿ ಮಾಡಿ ಸಲ್ಲಿಸಬೇಕೆಂದರು. ಬೂತ್ ಮಟ್ಟದ ಅಧಿಕಾರಿಯು ಪ್ರತಿ ಮನೆಗೆ 03 ಬಾರಿ ಭೇಟಿ ನೀಡಲಿದ್ದಾರೆ. ಅಗತ್ಯ ಮಾಹಿತಿಯನ್ನು ಪ್ರತಿಯೊಬ್ಬರು ಸಲ್ಲಿಸಲು ಇದೊಂದು ಸದಾವಕಾಶ ಹಾಗೂ ಹೊಸದಾಗಿ ಸೇರ್ಪಡೆಗೆ ಅವಕಾಶವಿದೆ ಎಂದರು.

ಮುಕಂದ ಸುಮಿ ಸ್ಪೇಷಲ್ ಸ್ಟೀಲ್ ಲಿಮಿಟೆಡ್ ಕಂಪನಿಯ ನೌಕರರಿಂದ ಕಾಲ್ನಡಿಗೆ ಜಾಗೃತಿ ಜಾಥಾವು ಕಂಪನಿ ಆವರಣದಲ್ಲಿ ಜರುಗಿತು. ಬಟಿಂಗ್ಸ್ ಪ್ರದರ್ಶನದಿಂದ ಕಾಲ್ನಡಿಗೆ ಜಾಥಾಕ್ಕೆ ಮೆರಗು ತಂದಿತು. 250 ಕ್ಕೂ ಹೆಚ್ಚು ಕಂಪನಿಯ ನೌಕರರು ಭಾಗವಹಿಸಿದ್ದರು.

## ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ: ಹಲಗೇರಿ ಸರ್ಕಾರಿ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿಗಳಿಂದ ಜಾಗೃತಿ ಜಾಥಾ



ಕೊಪ್ಪಳ ಜು.11-

ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ-2026ರ ಅಂಗವಾಗಿ ಕೊಪ್ಪಳ ತಾಲೂಕ ಸ್ವೀಪ್ ಸಮಿತಿ ಹಾಗೂ ಹಲಗೇರಿ ಗಾಮ ಪಂಚಾಯತಿ ಸಂಯುಕ್ತಾಶ್ರಯದಲ್ಲಿ (ಜು. 10 ರಂದು) ಹಲಗೇರಿಯಲ್ಲಿ ಅರಿವು ಕಾರ್ಯಕ್ರಮ ಹಮ್ಮಿಕೊಂ ಡಿದ್ದು, ಸರ್ಕಾರಿ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿ ಗಳಿಂದ ನಡೆದ ಜಾಥಾ ಮೂಲಕ ಜಾಗೃತಿ ಮೂಡಿಸಲಾಯಿತು.

ಕಾರ್ಯಕ್ರಮಕ್ಕೆ ಕೊಪ್ಪಳ ತಾಲೂಕ ಪಂಚಾಯತ ಪಂಚಾಯತ್ ರಾಜ್ ಸಹಾಯಕ ನಿರ್ದೇಶಕ ಮಹೇಶ್ ಅವರು ಚಾಲನೆ ನೀಡಿದರು. ಬಳಿಕ ಮಾತನಾಡಿ, ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ವಿಶೇಷ ಸಮಗ್ರ ಪರಿಷ್ಕರಣೆ (ಎಸ್.ಐ.ಆರ್) ಕಾರ್ಯಕ್ರಮ ಹಮ್ಮಿಕೊಂಡಿದ್ದು ಬೂತ್ ಮಟ್ಟದ ಅಧಿಕಾರಿಗೆ ಅಗತ್ಯ ಮಾಹಿತಿ ನೀಡಲು ಸಹಕರಿಸಬೇಕು. ಕಾರ್ಯಕ್ರಮದ ಮೂಲಕ ಅರ್ಹ ಮತದಾರರನ್ನು ಮತದಾರರ ಪಟ್ಟಿಯಲ್ಲಿ ಸೇರ್ಪಡೆಗೊಳಿಸುವುದು ಹಾಗೂ ಮರಣ ಹೊಂದಿರುವವರು, ಸ್ಥಳಾಂತರಗೊಂಡಿರುವವರು, ನಕಲು ಹೆಸರುಗಳು, ಮತ್ತು ಇತರ ಅನರ್ಹ ಮತದಾರರನ್ನು ಪರಿಶೀಲಿಸಿ ಸೂಕ್ತ ಕ್ರಮಕೈಗೊಳ್ಳುವುದು ಇದರ ಉದ್ದೇಶವಾಗಿದೆ. ಜೂನ್ 30 ರಿಂದ ಜುಲೈ 29 ರವರೆಗೆ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಓ) ಮನೆ ಮನೆಗೆ ಭೇಟಿ ನೀಡಿ ಮತದಾರರ ವಿವರಗಳನ್ನು ಪರಿಶೀಲಿಸಲಿದ್ದಾರೆ. ಮತದಾರರು ಎಸ್‌ಐರ್ಆ ಅರ್ಜಿಯನ್ನು ಭರ್ತಿ ಮಾಡಿ ಸಲ್ಲಿಸಬೇಕೆಂದರು.

ಬೂತ್ ಮಟ್ಟದ ಅಧಿಕಾರಿಯು ಪ್ರತಿ ಮನೆಗೆ 03 ಬಾರಿ ಭೇಟಿ ನೀಡಲಿದ್ದಾರೆ. ಅಗತ್ಯ ಮಾಹಿತಿಯನ್ನು ಪ್ರತಿಯೊಬ್ಬರು ಸಲ್ಲಿಸಲು ಇದೊಂದು ಸದಾವಕಾಶ ಹಾಗು ಹೊಸದಾಗಿ ಸೇರ್ಪಡೆಗೆ ಅವಕಾಶವಿದೆ ಎಂದರು.

ವಿದ್ಯಾರ್ಥಿಗಳಿಂದ ಕಾಲ್ನಡಿಗೆ ಮೂಲಕ ಜಾಗೃತಿ ಜಾಥಾವು ಗ್ರಾಮ ಪಂಚಾಯತಿಯಿಂದ ಪ್ರಾರಂಭವಾಗಿ ಗ್ರಾಮದ ಶಾಂಭವಿ ದೇವಸ್ಥಾನದ ಮಾರ್ಗವಾಗಿ ಕನಕನಗರ, ಕೆಂಚಮ್ಮ ದೇವಸ್ಥಾನದ ಮೂಲಕ ಸಂಚರಿಸಿ ಪುನಃ ಗ್ರಾಮ ಪಂಚಾಯತಿಗೆ ತಲುಪಿ ಜಾಗೃತಿ ಮೂಡಿಸಿ ಮುಕ್ತಾಯಗೊಂಡಿತು.ಬಟಿಂಗ್ಸ್ ಪ್ರದರ್ಶನದಿಂದ ಕಾಲ್ನಡಿಗೆ ಜಾಥಾಕ್ಕೆ ಮೆರಗು ತಂದಿತು. 250 ಕ್ಕೂ ಹೆಚ್ಚು ಕಾಲೇಜು ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಕಾರ್ಯಕ್ರಮದಲ್ಲಿ ಪಂಚಾಯತ ಅಭಿವೃದ್ಧಿ ಅಧಿಕಾರಿ ಸಂಗಮೇಶ ತೇರಿನ, ತಾಲೂಕ ಐಇಸಿ ಸಂಯೋಜಕ ದೇವರಾಜ ಪತ್ತಾರ, ದೊಡ್ಡನಗೌಡ ಪಾಟೀಲ್, ಸಂಜೀವಿನಿ ಯೋಜನೆಯ ತಾಲೂಕ ಕಾರ್ಯಕ್ರಮ ವ್ಯವಸ್ಥಾಪಕ ಸುನೀಲ್, ಕಾಲೇಜಿನ ಉಪನ್ಯಾಸಕ ವಿರೇಶ್, ಗ್ರಾಮ ಪಂಚಾಯತ ಕಾರ್ಯದರ್ಶಿ ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರು, ಸಂಜೀವಿನಿ ಯೋಜನೆಯ ಮಹಿಳಾ ಸ್ವಸಹಾಯ ಸಂಘದ ಸದಸ್ಯರು, ಒಕ್ಕೂಟದ ಪದಾಧಿಕಾರಿಗಳು, ಗ್ರಾಮ ಪಂಚಾಯತಿ ಸಿಬ್ಬಂದಿಗಳಾದ ದೇವಪ್ಪ ಪಿಟ್ಟರ್ ಪಂಚಾಕ್ಷರಿ, ಮಾಲತೇಶ ಹಾಜರಿದ್ದರು.

# ನಿಮ್ಮೂರು ಸುದ್ದಿ

## ಸಂಪಾದಕೀಯ

## ಹೆಣ್ಣುಮಕ್ಕಳ ಸುರಕ್ಷತೆ ಕೇವಲ ರಾಜಕೀಯ ಭಾಷಣದ ಸರಕಾಗದಿರಲಿ



ಸರ್ಕಾರಗಳು, ರಾಜಕೀಯ ಪಕ್ಷಗಳು ಹೆಣ್ಣುಮಕ್ಕಳ ಸುರಕ್ಷತೆಯ ಬಗ್ಗೆ ಪೊಳ್ಳು ಭಾಷಣ ಮಾಡುತ್ತಲೇ ಬಂದಿವೆ. ಯಾವ ಸರ್ಕಾರವೂ ಮಹಿಳಾ ಸುರಕ್ಷತೆಯನ್ನು ಆದ್ಯತೆಯ ವಿಷಯವಾಗಿ ಪರಿಗಣಿಸಿಲ್ಲ. ದಶಕದ ಹಿಂದೆ ದೆಹಲಿಯ ಪ್ಯಾರಾ ಮೆಡಿಕಲ್ ವಿದ್ಯಾರ್ಥಿನಿಯ ಮೇಲಿನ ಸಾಮೂಹಿಕ ಅತ್ಯಾಚಾರ ಪ್ರಕರಣ ಇಡೀ ದೇಶದಲ್ಲಿ ಪ್ರತಿಭಟನೆಗೆ ಕಾರಣವಾಗಿತ್ತು. ಆ ಕಾಮುಕರಿಗೆ ಗಲ್ಲು ಶಿಕ್ಷೆಯೂ ಆಯಿತು. ಆದರೆ, ಆನಂತರ ಅದಕ್ಕಿಂತ ಭೀಕರ ಕ್ರೌರ್ಯಗಳು ದೇಶದಲ್ಲಿ ವರದಿಯಾಗುತ್ತಲೇ ಇವೆ. ಮಹಿಳೆಯರಿಗೆ ರಾಜಕೀಯ ಪ್ರಾತಿನಿಧ್ಯ ನೀಡಲು ಭಾರೀ ಉತ್ಸುಕವಾಗಿರುವ ಮೋದಿ ಸರ್ಕಾರ ಮೊದಲು ಹೆಣ್ಣುಮಕ್ಕಳಿಗೆ ಸುರಕ್ಷತೆಯ ಬದುಕು ನೀಡಬೇಕಿದೆ.

ರಾಜಸ್ಥಾನದಲ್ಲಿ ಹದಿಮೂರರ ಹರೆಯದ ಬಾಲಕಿಯನ್ನು ಅಪಹರಿಸಿ ಹೊಟೇಲಿನಲ್ಲಿ ಕೂಡಿ ಹಾಕಿ ಮುವ್ವತ್ತು ಮಂದಿ ರಾಕ್ಷಸರು ನಿರಂತರ ಅತ್ಯಾಚಾರವೆಸಗಿದ್ದಾರೆ. ಐದುದಿನಗಳ ಕಾಲ ಕಾಮುಕರ ಕ್ರೌರ್ಯಕ್ಕೆ ಜರ್ಝರಿತವಾಗಿದ್ದ ಬಾಲಕಿ ಆಸ್ಪತ್ರೆಯಲ್ಲಿ ಪ್ರಾಣ ಬಿಟ್ಟಿದ್ದಾಳೆ. ಈ ಎಳೆ ಬಾಲಕಿಯನ್ನು ಆಟೋ ಚಾಲಕನೊಬ್ಬ ಅಪಹರಿಸಿ ಹೊಟೇಲಿನ ಮಾಲೀಕನಿಗೆ ಮಾರಿದ್ದನಂತೆ! ಖರೀದಿ ಮಾಡಿದ ವ್ಯಕ್ತಿ ಬಾಲಕಿಯನ್ನು ವೇಶ್ಯಾವಾಟಿಕೆಗೆ ತಳ್ಳಿದ್ದಾನೆ. ಆಕೆ ಕಿರುಚಾಡಬಾರದು ಎಂದು ನಿರಂತರವಾಗಿ ಮದ್ಯ ಕುಡಿಸುತ್ತಿದ್ದರಂತೆ. ದೇಶದಲ್ಲಿ ವರದಿಯಾಗುವ ಒಂದೊಂದು ಅತ್ಯಾಚಾರ ಪ್ರಕರಣಗಳೂ ಒಂದಕ್ಕಿಂತ ಒಂದು ಹೆಚ್ಚು ಭೀಕರವಾಗಿರುತ್ತವೆ ಎಂಬುದು ವಾಸ್ತವ.

2023ರಲ್ಲಿ ರಾಜಸ್ಥಾನದಲ್ಲಿ ಚುನಾವಣೆ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ‘‘ಬಿಜೆಪಿಯ ಏಕೈಕ ಸಂಕಲ್ಪವೆಂದರೆ ರಾಜಸ್ಥಾನವನ್ನು ಅಪರಾಧ ಮುಕ್ತಗೊಳಿಸುವುದು ಮತ್ತು ಹೆಣ್ಣುಮಕ್ಕಳ ಘನತೆಯನ್ನು ಎತ್ತಿಹಿಡಿಯುವುದು. ನಮ್ಮ ಸರ್ಕಾರ ಬಂದರೆ ಮಹಿಳೆಯರ ರಕ್ಷಣೆಗಾಗಿ ವಿಶೇಷ ಕಣ್ಗಾವಲು ಮತ್ತು ಕಠಿಣ ಕಾನೂನು ಜಾರಿ ಮಾಡಲಾಗುತ್ತದೆ’’ ಎಂದು ಭರವಸೆ ನೀಡಿದ್ದರು. ಆದರೆ, ರಾಜಸ್ಥಾನ ಈಗಲೂ ಅತಿ ಹೆಚ್ಚು ಅತ್ಯಾಚಾರ ಪ್ರಕರಣಗಳು ನಡೆಯುತ್ತಿರುವ ರಾಜ್ಯಗಳ ಪೈಕಿ ಮೊದಲ ಸ್ಥಾನದಲ್ಲಿದೆ. ಚುನಾವಣೆಯ ಸಮಯದಲ್ಲಿ ಏನೋ ಒಂದು ಬೊಗಳೆ ಬಿಡುವುದು ರಾಜಕೀಯ ಪಕ್ಷಗಳಿಗೆ, ನಾಯಕರಿಗೆ ರೂಢಿಯಾಗಿಬಿಟ್ಟಿದೆ. ಅದರಾಚೆಗೆ ಹೆಣ್ಣುಮಕ್ಕಳ ಸುಕ್ಷರತೆ, ಶಿಕ್ಷಣ, ಸಬಲೀಕರಣ ಸರ್ಕಾರಗಳ ಆದ್ಯತೆಯ ಪಟ್ಟಿಯಲ್ಲಿ ಇರುವುದೇ ಇಲ್ಲ.

ರಾಜಸ್ಥಾನದ ಚುನಾವಣೆಯ ಸಮಯದಲ್ಲಿ ‘‘ಗೆಹ್ಲೋಟ್ ಸರ್ಕಾರವು ರಾಜಸ್ಥಾನವನ್ನು ಮಹಿಳೆಯರ ಮೇಲಿನ ದೌರ್ಜನ್ಯ ಮತ್ತು ಅತ್ಯಾಚಾರ ಪ್ರಕರಣಗಳಲ್ಲಿ ದೇಶದಲ್ಲೇ ಮೊದಲ ಸ್ಥಾನಕ್ಕೆ ತಂದು ನಿಲ್ಲಿಸಿದೆ. ಇಂತಹ ನಾಚಿಕೆಗೇಡಿನ ವ್ಯವಸ್ಥೆಯನ್ನು ಕೊನೆಗಾಣಿಸಲು ಬಿಜೆಪಿ ಸಿದ್ಧವಾಗದೆ. ಬಿಜೆಪಿ ಸರ್ಕಾರ ರಚನೆಯಾದ ತಕ್ಷಣ, ಪ್ರತಿ ಜಿಲ್ಲೆಯಲ್ಲೂ ಮಹಿಳಾ ಸುರಕ್ಷತಾ ಸೆಲ್ ಮತ್ತು ಆ್ಯಂಟಿ ರೋಮಿಯೋ ಸ್ಕ್ವಾಡ್‌ಗಳನ್ನು ರಚಿಸಲಾಗುವುದು. ಹೆಣ್ಣುಮಕ್ಕಳು ನಿರ್ಭೀತಿಯಿಂದ ಓಡಾಡುವಂತೆ ಮಾಡುವುದು ನಮ್ಮ ಜವಾಬ್ದಾರಿ’’ ಎಂದು ಹೇಳಿದ್ದ ಅಮಿತ್ ಶಾ ಈಗ ಏನು ಹೇಳುತ್ತಾರೆ? ಮಹಿಳೆಯರ ಮೇಲಿನ ಅತ್ಯಾಚಾರದಲ್ಲಿ ರಾಜಸ್ಥಾನ ಈಗಲೂ ನಂಬರ್ ವನ್ ಸ್ಥಾನದಲ್ಲಿಯೇ ಇದೆ ಎಂದರೆ ಅದು ನಾಚಿಕೆಗೇಡಿನ ಸಂಗತಿ ಅಲ್ಲವೇ? ಶಾ ಭರವಸೆಗೆ ಬೆಲೆಯೆಲ್ಲಿ ಉಳಿದಿದೆ?

ವೇಶ್ಯಾವಾಟಿಕೆ ನಾಗರಿಕತೆ ಹುಟ್ಟಿದಾಗಿನಿಂದಲೂ ಇದೆ. ಬದುಕಿನ ಅನಿವಾರ್ಯತೆ, ಬಡತನ, ವಂಚನೆ, ಹೀಗೆ ನಾನಾ ಕಾರಣಗಳಿಂದ ವೇಶ್ಯಾವೃತ್ತಿಗೆ ಬರುವ ಹೆಣ್ಣುಮಕ್ಕಳು ಈ ವಿಷಮ ವ್ಯವಸ್ಥೆಯೇ ಹುಟ್ಟಿಸಿ ಆಹುತಿ ಪಡೆಯುವ ಬಲಿಪಶುಗಳು. ಆದರೆ, ಅಮಾನುಷ ಖೂಳರು ಪುಟ್ಟ ಪುಟ್ಟ ಮಕ್ಕಳನ್ನು ಅಪಹರಿಸಿ ಕಾಮುಕರ ಬಳಿಗೆ ಬಿಡುವ, ಕ್ರೂರವಾಗಿ ಹಿಂಸಿಸುವ ಹೇಯ ಘಟನೆಗಳು ಪದೇ ಪದೇ ನಡೆಯುತ್ತಿವೆ. ಗ್ರಾಮಗಳಲ್ಲಿ ಹೊಲಕ್ಕೆ ಹೋದ ಮಗಳು, ನೆರೆಮನೆಗೆ ಹೋದ ಪುಟ್ಟ ಬಾಲೆ, ಶಾಲೆಗೆ ಹೋದ ಕಂದಮ್ಮ ಕಾಮುಕರ ಅಟ್ಟಹಾಸಕ್ಕೆ ಬಲಿಯಾಗಿ ಉಸಿರು ಚೆಲ್ಲುವ ಘಟನೆಗಳು ಸಾಮಾನ್ಯವೆಂಬಂತೆ ವರದಿಯಾಗುತ್ತಲೇ ಇದೆ. ಯಾವ ಕಾನೂನು ಕೂಡ ಹೆಣ್ಣುಮಕ್ಕಳನ್ನು ಬಚಾವ್ ಮಾಡುತ್ತಿಲ್ಲ ಎಂಬುದು ದುರಂತ.

ಇನ್ನು ಸರ್ಕಾರಗಳು, ರಾಜಕೀಯ ಪಕ್ಷಗಳು ಹೆಣ್ಣುಮಕ್ಕಳ ಸುರಕ್ಷತೆಯ ಬಗ್ಗೆ ಪೊಳ್ಳು ಭಾಷಣ ಮಾಡುತ್ತಲೇ ಬಂದಿವೆ. ಯಾವ ಸರ್ಕಾರವೂ ಮಹಿಳಾ ಸುರಕ್ಷತೆಯನ್ನು ಆದ್ಯತೆಯ ವಿಷಯವಾಗಿ ಪರಿಗಣಿಸಿಲ್ಲ. ದಶಕದ ಹಿಂದೆ ದೆಹಲಿಯ ಪ್ಯಾರಾ ಮೆಡಿಕಲ್ ವಿದ್ಯಾರ್ಥಿನಿಯ ಮೇಲಿನ ಸಾಮೂಹಿಕ ಅತ್ಯಾಚಾರ ಪ್ರಕರಣ ಇಡೀ ದೇಶದಲ್ಲಿ ಪ್ರತಿಭಟನೆಗೆ ಕಾರಣವಾಗಿತ್ತು. ಆ ಕಾಮುಕರಿಗೆ ಗಲ್ಲು ಶಿಕ್ಷೆಯೂ ಆಯಿತು. ಆದರೆ, ಅಂತಹ ಪ್ರಕರಣಗಳು, ಅದಕ್ಕಿಂತ ಭೀಕರ ಪ್ರಕರಣಗಳು ದೇಶದಲ್ಲಿ ವರದಿಯಾಗುತ್ತಲೇ ಇದೆ. ನಿರ್ಭಯಾ ಪ್ರಕರಣದ ನಂತರ ಉತ್ತರಪ್ರದೇಶದ ಉನ್ನಾಂವ್ ಮತ್ತು ಹಾಥರಸ್ ಸಾಮೂಹಿಕ ಅತ್ಯಾಚಾರ ಪ್ರಕರಣಗಳು ದೇಶದೆಲ್ಲೆಡೆ ಭಾರೀ ಆಕ್ರೋಶ ಉಂಟು ಮಾಡಿದ್ದವು. ರಾಜಕೀಯ ಮೇಲಾಟಕ್ಕೂ ಕಾರಣವಾಗಿತ್ತು. ಆದರೆ, ಉತ್ತರಪ್ರದೇಶದಲ್ಲಿ ಈಗಲೂ ಅತ್ಯಾಚಾರ ಪ್ರಕರಣಗಳು ತಗ್ಗಿಲ್ಲ.

ಹನ್ನೆರಡು ವರ್ಷಗಳ ಹಿಂದೆ ಯುಪಿಎ ಸರ್ಕಾರದ ವಿರುದ್ಧ ಅಬ್ಬರದ ಪ್ರತಿಭಟನೆ ಮಾಡಿ ಅಧಿಕಾರಕ್ಕೆ ಬಂದ ಬಿಜೆಪಿ ನರೇಂದ್ರ ಮೋದಿ ಅವರು ಬೇಟಿ ಬಚಾವೋ ಬೇಟಿ ಪಢಾವೋ ಎಂದು ಹೇಳಿದ್ದೇ ಬಂತು. ದೇಶದಲ್ಲಿ ಭೀಕರ ಅತ್ಯಾಚಾರ ಪ್ರಕರಣಗಳು ನಡೆದಾಗ ಅವರು ಕನಿಷ್ಠ ಬಾಯಿ ತೆರೆದು ಮಾತನಾಡಿದ್ದೇ ಇಲ್ಲ. ತಮ್ಮ ಡಬಲ್ ಎಂಜಿನ್ ಸರ್ಕಾರದ ಅಡಿಯಲ್ಲಿ ಉತ್ತರಪ್ರದೇಶ, ಮಧ್ಯಪ್ರದೇಶ, ರಾಜಸ್ಥಾನ, ಬಿಹಾರ, ದೆಹಲಿಯಲ್ಲಿ ಅಪ್ರಾಪ್ತ ಹೆಣ್ಣುಮಕ್ಕಳ ಮೇಲೆ ಅತಿ ಹೆಚ್ಚು ಲೈಂಗಿಕ ದೌರ್ಜನ್ಯ ಪ್ರಕರಣಗಳು ನಡೆಯುತ್ತಿವೆ. ದೇಶಕ್ಕೆ ಕಳಂಕ ತರುವ ಅಂತಹ ಪ್ರಕರಣಗಳನ್ನು ತಡೆಯುವ ನಿಟ್ಟಿನಲ್ಲಿ ಮೋದಿಯವರು ಒಂದು ಸಭೆ ನಡೆಸಿದ ಉದಾಹರಣೆ ಇಲ್ಲ. ಕಟ್ಟು ನಿಟ್ಟಿನ ಕಾನೂನು ಕ್ರಮ ಜರುಗಿಸುವ ಬಗ್ಗೆ ಅವರು ಎಂದೂ ರಾಜ್ಯಗಳ ಜೊತೆಗೆ ಚರ್ಚೆ ನಡೆಸಿಲ್ಲ. ತಮ್ಮ ತಿಂಗಳ ಮನ್ ಕೀ ಬಾತ್‌ನಲ್ಲಿ ಅಡುಗೆ ಎಣ್ಣೆ ಕಡಿಮೆ ಬಳಸಿ ಎಂಬ ಸಲಹೆ ನೀಡುವ ಮೋದಿಯವರು ಹೆಣ್ಣುಮಕ್ಕಳಿಗೆ ಘನತೆಯ ಬದುಕು ಕಲ್ಪಿಸುವುದು ಪ್ರತಿ ಪುರುಷನ ಜವಾಬ್ದಾರಿ ಎಂಬಂತಹ ಮಾತುಗಳನ್ನು ಆಡಿದ್ದೇ ಇಲ್ಲ. ಮೋದಿಯವರ ಮನ್ ಕೀ ಬಾತ್ ಭಾಷಣವನ್ನು ಬಿಜೆಪಿಯ ನಾಯಕರು ಪ್ರೊಮೋಟ್ ಮಾಡುತ್ತಾರೆ. ಬೂತ್ ಮಟ್ಟದಲ್ಲಿ ಸಾರ್ವಜನಿಕವಾಗಿ ಆಡಿಯೋ ಭಾಷಣ ಕೇಳುವ ವ್ಯವಸ್ಥೆ ಮಾಡಲಾಗುತ್ತದೆ. ಬಿಜೆಪಿಯ ಎಲ್ಲ ನಾಯಕರು, ಕಾರ್ಯಕರ್ತರು ಮನ್ ಕೀ ಬಾತ್ ಆಲಿಸಿದ ಬಗ್ಗೆ ಪೋಸ್ಟ್‌ಗಳನ್ನು ಹಾಕುತ್ತಾರೆ. ಇವೆಲ್ಲ ಪಕ್ಷದ ಕಡೆಯಿಂದ ಕೊಡುವ ಟಾಸ್ಕ್. ಹೀಗಿರುವಾಗ ಮನ್ ಕೀ ಬಾತ್‌ನಲ್ಲಿ ಯುವ ಜನತೆಗೆ ಉತ್ತಮ ಸಂದೇಶ ಕೊಡುವ ಕನಿಷ್ಠ ಕಾಳಜಿಯನ್ನೂ ಮೋದಿಯವರು ಯಾಕೆ ತೋರುತ್ತಿಲ್ಲ?

ಬಿಜೆಪಿಯೇತರ ಸರ್ಕಾರಗಳು ಇರುವ ರಾಜ್ಯಗಳ ಅತ್ಯಾಚಾರ ಪ್ರಕರಣಗಳ ಬಗ್ಗೆ ಭಾರೀ ಪ್ರತಿಭಟನೆ ದಾಖಲಿಸುವ ಬಿಜೆಪಿ ನಾಯಕರು ಅದನ್ನು ರಾಜಕೀಯ ಲಾಭಕ್ಕಾಗಿ ಬಳಸಿಕೊಂಡ ಉದಾಹರಣೆ ಸಾಕಷ್ಟಿವೆ. ಎರಡು ವರ್ಷಗಳ ಹಿಂದೆ ಪಶ್ಚಿಮ ಬಂಗಾಳದ ಆರ್.ಜಿ. ಕರ್ ಆಸ್ಪತ್ರೆಯಲ್ಲಿ ಟ್ರೈನಿ ವೈದ್ಯೆಯ ಮೇಲೆ ನಡೆದ ಅತ್ಯಾಚಾರ- ಕೊಲೆ ಪ್ರಕರಣವನ್ನು ಬಿಜೆಪಿ ಒಂದು ತಿಂಗಳ ಕಾಲ ಪ್ರತಿಭಟನೆ ನಡೆಸಿ ರಾಜಕೀಯ ಲಾಭಕ್ಕಾಗಿ ಬಳಸಿಕೊಂಡಿತ್ತು. ಬಿಜೆಪಿ ಅಧಿಕಾರಕ್ಕೆ ಬಂದರೆ ಹೆಣ್ಣುಮಕ್ಕಳಿಗೆ ರಕ್ಷಣೆ ನೀಡುತ್ತೇವೆ ಎಂದು ಮೋದಿ, ಅಮಿತ್ ಶಾ ಚುನಾವಣಾ ಪ್ರಚಾರ ಸಭೆಗಳಲ್ಲಿ ಹೇಳಿದ್ದರು. ಅತ್ಯಾಚಾರ-ಹತ್ಯೆಗೆ ಈಡಾದ ವೈದ್ಯೆಯ ತಾಯಿಯನ್ನು ರಾಜಕೀಯಕ್ಕೆ ಎಳೆತಂದು ಟಿಕೆಟ್ ಕೊಟ್ಟು ಗೆಲ್ಲಿಸಿ, ರಾಜಕೀಯ ಲಾಭ ಗಳಿಸಿದರು. ಮೊನ್ನೆಯಷ್ಟೇ ಪಶ್ಚಿಮ ಬಂಗಾಳದಲ್ಲಿ ಬಾಲಕಿಯೊಬ್ಬಳ ಭೀಕರ ಅತ್ಯಾಚಾರ- ಕೊಲೆ ನಡೆದಿದೆ. ಆರೋಪಿಯನ್ನು ಎನ್‌ಕೌಂಟರ್ ಮಾಡಲಾಗಿದೆ. ಹೀಗೆ ಮಾಡಿ ಜನರ ಮನಸ್ಸಿನಲ್ಲಿ ತಾವು ಕಠಿಣ ಕ್ರಮ ಕೈಗೊಂಡಿದ್ದೇವೆ ಎಂಬ ಭ್ರಮೆ ಹುಟ್ಟಿಸುವುದು ಮತ್ತೊಂದು ಬಗೆಯ ರಾಜಕೀಯ ಹುನ್ನಾರ.

ದಶಕದಿಂದ ಅಧಿಕಾರ ನಡೆಸುತ್ತಿರುವ ಉತ್ತರ ಪ್ರದೇಶದಲ್ಲಿ ಅಷ್ಟೊಂದು ಅತ್ಯಾಚಾರಗಳು ನಡೆಯುತ್ತಿದೆ. ಅದ್ಯಾವ ಬಗೆಯ ಕಠಿಣ ಕಾನೂನು ತಂದಿದ್ದಾರೆ ಅಥವಾ ಅಪರಾಧಿಗಳಿಗೆ ಶಿಕ್ಷೆ ಕೊಡಿಸಿದ್ದಾರೆ? ಎಷ್ಟು ಅಪರಾಧಿಗಳು ಕಂಬಿ ಎಣಿಸಿದ್ದಾರೆ? ಸ್ವತಃ ಬಿಜೆಪಿಯ ಮಾಜಿ ಶಾಸಕ ಕುಲದೀಪ್ ಸೆಂಗರ್ ಸಾಮೂಹಿಕ ಅತ್ಯಾಚಾರದ ಅಪರಾಧಿಯಾಗಿದ್ದಾನೆ!

ಜನಸಂಖ್ಯೆಯ ಅರ್ಧದಷ್ಟಿರುವ ಮಹಿಳೆಯರಿಗೆ ಯಾವ ಸರ್ಕಾರಗಳೂ ಘನತೆಯ ಬದುಕು ನೀಡುತ್ತಿಲ್ಲ. ಮಹಿಳೆಯರಿಗೆ ರಾಜಕೀಯ ಪ್ರಾತಿನಿಧ್ಯ ನೀಡಲು ಭಾರೀ ಉತ್ಸುಕವಾಗಿರುವ ಮೋದಿ ಸರ್ಕಾರ ಮೊದಲು ಹೆಣ್ಣುಮಕ್ಕಳಿಗೆ ಸುರಕ್ಷತೆಯ ಬದುಕು ನೀಡಬೇಕಿದೆ. ಅಪ್ರಾಪ್ತ ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ತಡೆಯುವ ನಿಟ್ಟಿನಲ್ಲಿ ಯುಪಿಎ ಸರ್ಕಾರ ಜಾರಿಗೆ ತಂದ ಪೋಕ್ಸೊ ಕಾಯ್ದೆಯನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಎಲ್ಲ ರಾಜ್ಯ ಸರ್ಕಾರಗಳಿಗೂ ಸೂಚನೆ ನೀಡಬೇಕು. ನಿಗದಿತ ಸಮಯದಲ್ಲಿ ಕಾನೂನು ಪ್ರಕ್ರಿಯೆ ಮುಗಿದು ಕಠಿಣ ಶಿಕ್ಷೆ ನೀಡುವುದನ್ನು ಖಾತ್ರಿಪಡಿಸಬೇಕಿದೆ. ಹೆಣ್ಣುಮಕ್ಕಳ ವಿಚಾರ ಕೇವಲ ರಾಜಕೀಯ ಲಾಭಕ್ಕಾಗಿ ಬಳಕೆ ಮಾಡುವ ಹೇಯ ಕೃತ್ಯ ತಕ್ಷಣ ನಿಲ್ಲಬೇಕಿದೆ.

# ಅಂಗನವಾಡಿ, ಆಶಾ, ಬಿಸಿಯೂಟ ಕಾರ್ಮಿಕರಿಂದ ‘ಕರಾಳ ದಿನ’ ಮುಷ್ಕರ: ರಾಜ್ಯದಲ್ಲಿ ಮೊಳಗಿದ ಹಕ್ಕುಗಳ ಧ್ವನಿ

ಸ್ಕೀಂ ನೌಕರರು ಜುಲೈ 10ರಂದು ನಡೆಸಿದ ಹೋರಾಟವು ಸಮಾಜದ ಎಲ್ಲ ವರ್ಗಗಳಿಗೆ ಎಚ್ಚರಿಕೆಯಾಗಬೇಕು. ಮಹಿಳಾ ಕಾರ್ಮಿಕರ 'ಪಿಂಕ್ ವೇವ್' ಹೋರಾಟಗಳು ಬಲಗೊಳ್ಳುತ್ತಿದ್ದು, ಸರ್ಕಾರಗಳು ಎಚ್ಚೆತ್ತುಕೊಳ್ಳದಿದ್ದರೆ ಈ 'ಕರಾಳ ದಿನ'ಗಳು ದೀರ್ಘಕಾಲೀನ ಹೋರಾಟಕ್ಕೆ ಕಾರಣವಾಗುತ್ತವೆ.

ಭಾರತದ ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ಮಕ್ಕಳ ಪೋಷಣೆ, ಗರ್ಭಿಣಿ ಮತ್ತು ತಾಯಂದಿರ ಆರೋಗ್ಯ, ಪೋಷಣೆ ಹಾಗೂ ಶಿಕ್ಷಣ ನೀಡುವಲ್ಲಿ ಮುಂಚೂಣಿಯಲ್ಲಿರುವ ಲಕ್ಷಾಂತರ ಮಹಿಳಾ ಕಾರ್ಮಿಕರು ಜುಲೈ 10ರಂದು ದೇಶವ್ಯಾಪಿ ಹಕ್ಕೊತ್ತಾಯ ದಿನವನ್ನು ಆಚರಿಸಿದ್ದು, ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರು, ಆಶಾ() ಕಾರ್ಯಕರ್ತೆಯರು ಮತ್ತು ಬಿಸಿಯೂಟ (ಮಧ್ಯಾಹ್ನ ಬಿಸಿಯೂಟ ಅಥವಾ -) ಯೋಜನಾ ಕಾರ್ಮಿಕರು ಕೇಂದ್ರ ಸರ್ಕಾರದ ಅನುದಾನ ಕಡಿತ ಮತ್ತು ಯೋಜನೆಗಳನ್ನು ದುರ್ಬಲಗೊಳಿಸುವ ನೀತಿಗಳ ವಿರುದ್ಧ ಕರಾಳ ದಿನವಾಗಿ ಮುಷ್ಕರಗಳನ್ನು ನಡೆಸಿದರು.

ಯೋಜನೆಗಳ ಹಿನ್ನೆಲೆ ಮತ್ತು ಕಾರ್ಮಿಕರ ಕೊಡುಗೆ

ಭಾರತದ ಸಮಗ್ರ ಶಿಶು ಅಭಿವೃದ್ಧಿ ಸೇವೆಗಳು ( ಅಂಗನವಾಡಿ ಯೋಜನೆ) 1975ರಲ್ಲಿ ಪ್ರಾರಂಭವಾದವು. ಆಶಾ ಕಾರ್ಯಕರ್ತೆಯರು ರಾಷ್ಟ್ರೀಯ ಆರೋಗ್ಯ ಮಿಷನ್ () ಅಡಿಯಲ್ಲಿ 2005ರಲ್ಲಿ ಪರಿಚಯಿಸಲ್ಪಟ್ಟರು. ಬಿಸಿಯೂಟ ಯೋಜನೆ ಶಾಲಾ ಮಕ್ಕಳ ಪೋಷಣೆಗೆ ಮುಖ್ಯವಾಗಿದೆ. ಈ ಎಲ್ಲ ಯೋಜನೆಗಳು ದೇಶದ ಅತ್ಯಂತ ದುರ್ಬಲ ವರ್ಗಗಳ ಗ್ರಾಮೀಣ ಮಕ್ಕಳು, ಮಹಿಳೆಯರು ಮತ್ತು ಹಸಿವಿನಿಂದ ಬಳಲುತ್ತಿರುವವರ ಜೀವನವನ್ನು ಸುಧಾರಿಸುವಲ್ಲಿ ನಿರ್ಣಾಯಕ ಪಾತ್ರ ವಹಿಸುತ್ತವೆ.

ಈ ಯೋಜನೆಗಳಲ್ಲಿ ಕೆಲಸ ಮಾಡುವ ಲಕ್ಷಾಂತರ ಮಹಿಳೆಯರು(ಅಂಗನವಾಡಿ ಕಾರ್ಯಕರ್ತೆಯರು ಸುಮಾರು 14ರಿಂದ 15 ಲಕ್ಷ, ಆಶಾ ಕಾರ್ಯಕರ್ತೆಯರು 10 ಲಕ್ಷಕ್ಕೂ ಹೆಚ್ಚು, ಲಕ್ಷಾಂತರ ಮಂದಿ ಬಿಸಿಯೂಟ ಕಾರ್ಮಿಕರು ) ಪ್ರತಿದಿನ ತಮ್ಮ ಮನೆ, ಮನೆಕೆಲಸಗಳನ್ನು ಬಿಟ್ಟು, ಕಡಿಮೆ ವೇತನದಲ್ಲಿ, ಯಾವುದೇ ಸುರಕ್ಷತೆ, ಭದ್ರತೆಗಳಿಲ್ಲದೆ ಕೆಲಸ ಮಾಡುತ್ತಾರೆ. ಅವರು ಮಕ್ಕಳಿಗೆ ಪೋಷಕಾಂಶ, ಆರೋಗ್ಯ ತಪಾಸಣೆ, ಲಸಿಕೆ, ಶಿಕ್ಷಣ ಪೂರ್ವ ಚಟುವಟಿಕೆಗಳು, ಗರ್ಭಿಣಿ ಮತ್ತು ತಾಯಂದಿರ ಆರೋಗ್ಯ ರಕ್ಷಣೆ, ಸಮುದಾಯ ಆರೋಗ್ಯ ಜಾಗೃತಿ ಇವೆಲ್ಲವನ್ನೂ ನಿರ್ವಹಿಸುತ್ತಾರೆ.

ಕೋವಿಡ್ ಸಮಯದಲ್ಲಿ ಇವರು ಮುಂಚೂಣಿಯ ಸೈನಿಕರಾಗಿ ಸೇವೆ ಸಲ್ಲಿಸಿದ್ದಾರೆ. ಆದರೆ ಇವರನ್ನು ಕಾರ್ಯಕರ್ತೆಯರು ಅಥವಾ ಸ್ವಯಂಸೇವಕರು ಎಂದು ಕರೆದು, ಗೌರವಧನ () ನೀಡಿ, ನಿಯಮಿತ ಸರ್ಕಾರಿ ನೌಕರರ ಸೌಲಭ್ಯಗಳಿಂದ ವಂಚಿಸಲಾಗುತ್ತಿದೆ.

ಅಂಗನವಾಡಿ ಕಾರ್ಯಕರ್ತೆಯರ ಸಂಘದ ಉಪಾಧ್ಯಕ್ಷೆ ಸುದರ್ಶನ ಶರ್ಮಾ ಮಾತನಾಡಿ, ‘‘ಅಂಗನವಾಡಿ ಕಾರ್ಮಿಕರು ದಶಕಗಳಿಂದ ತಮ್ಮ ಹಕ್ಕುಗಳಿಗಾಗಿ ಸತತವಾಗಿ ಹೋರಾಡುತ್ತಿದ್ದಾರೆ. ಆದರೆ ಸರ್ಕಾರಗಳಿಂದ ಅವರಿಗೆ ಯಾವುದೇ



ಬೆಂಬಲ ಸಿಕ್ಕಿಲ್ಲ. ಸುಮಾರು 50 ವರ್ಷಗಳ ಸೇವೆಯ ನಂತರವೂ, ಸಾಕಷ್ಟು ವೇತನ ಅಥವಾ ಭತ್ಯೆಗಳನ್ನು ನೀಡಿಲ್ಲ. ಯಾವುದೇ ಹೆಚ್ಚಳ ಘೋಷಿಸಿದಾಗಲೆಲ್ಲ ಅದು ಕೇವಲ ಪುಡಿಗಾಸೇ ಆಗಿರುತ್ತದೆಯೇ ಹೊರತು ಶ್ರಮಕ್ಕೆ ತಕ್ಕ ಪ್ರತಿಫಲ ನೀಡುವುದಿಲ್ಲ. ಕೇಂದ್ರ ಸರ್ಕಾರದಿಂದ ನಮಗೆ ಏನೂ ಸಿಕ್ಕಿಲ್ಲ. ನಿವೃತ್ತಿಯ ನಂತರ ಅಂಗನವಾಡಿ ಕಾರ್ಯಕರ್ತೆಯರ ದುಃಸ್ಥಿತಿ ಯಾರಿಗೂ ಹೇಳತೀರದಾಗಿದೆ. ದಶಕಗಳ ಸೇವೆ ನೀಡಿದ್ದರೂ ಅವರಿಗೆ ಯಾವುದೇ ಆರ್ಥಿಕ ಭದ್ರತೆ ಇಲ್ಲ’’ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಕೇಂದ್ರ ಸರ್ಕಾರದ ಅನುದಾನ ಕಡಿತ ಮತ್ತು ದುರ್ಬಲಗೊಳಿಸುವುದರ ಪರಿಣಾಮ

ಇತ್ತೀಚಿನ ಬಜೆಟ್‌ಗಳಲ್ಲಿ , ಮತ್ತು - ಯೋಜನೆಗಳಿಗೆ ಅನುದಾನ ಕಡಿತವಾಗುತ್ತಿರುವುದು ದೊಡ್ಡ ಸಮಸ್ಯೆಯಾಗಿದೆ. ಕೇಂದ್ರ ಸರ್ಕಾರದ ಈ ನೀತಿ ಯೋಜನೆಗಳನ್ನು ಖಾಸಗೀಕರಣದತ್ತ ತಳ್ಳುತ್ತಿದೆ ಎಂಬ ಆರೋಪಗಳಿವೆ. ಅನುದಾನ ಕಡಿಮೆಯಾದರೆ, ಕಾರ್ಮಿಕರ ವೇತನ, ಪೋಷಣೆ ಸಾಮಗ್ರಿ, ತರಬೇತಿ ಮತ್ತು ಮೂಲಸೌಕರ್ಯಗಳಿಗೆ ಹಣ ಲಭ್ಯವಾಗುವುದಿಲ್ಲ. ಇದರಿಂದಾಗಿ ಯೋಜನೆಗಳ ಗುಣಮಟ್ಟ ಕುಸಿಯುತ್ತದೆ. ಇದರಿಂದಾಗಿ ಮಕ್ಕಳ ಪೋಷಣೆ, ಆರೋಗ್ಯ ಸೇವೆಗಳು ದುರ್ಬಲಗೊಳ್ಳುತ್ತವೆ.

ಕರ್ನಾಟಕ ಸೇರಿದಂತೆ ವಿವಿಧ ರಾಜ್ಯಗಳಲ್ಲಿ ಕಾರ್ಮಿಕರು ವೇತನ ಹೆಚ್ಚಳ, ಬಾಕಿ ವೇತನ ಬಿಡುಗಡೆ, ನಿಯಮಿತಗೊಳಿಸುವಿಕೆ(), ಪಿಂಚಣಿ, ಗ್ರ್ಯಾಚ್ಯುಟಿ, , , ಮಾತೃತ್ವ ರಜೆ, ಕನಿಷ್ಠ ವೇತನ ಜಾರಿ ಮುಂತಾದ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸುತ್ತಿದ್ದಾರೆ. ಅಂಗನವಾಡಿ ಕಾರ್ಯಕರ್ತೆಯರಿಗೆ ₹13,000ದಿಂದ ₹26000 ವೇತನ, ಸಹಾಯಕಿಯರಿಗೆ ₹10000ಕ್ಕೂ ಮೇಲ್ಪಟ್ಟು, ಆಶಾ ಕಾರ್ಯಕರ್ತೆಯರಿಗೆ ದೈನಂದಿನ ಗೌರವಧನ ಹೆಚ್ಚಳ ಇತ್ಯಾದಿ ಬೇಡಿಕೆಗಳು ಮುಖ್ಯವಾಗಿವೆ. ಬಹುತೇಕ ಸಂದರ್ಭಗಳಲ್ಲಿ ವೇತನವು ಕನಿಷ್ಠ ಕೂಲಿಗಿಂತ ಕಡಿಮೆಯಾಗಿರುವುದಲ್ಲದೆ, ಬಾಕಿ ಉಳಿಸಿಕೊಳ್ಳಲಾಗುತ್ತದೆ.

ಹೋರಾಟದ ಇತಿಹಾಸ ಮತ್ತು ಪ್ರಸ್ತುತ ಸ್ಥಿತಿ

ಆಲ್ ಇಂಡಿಯಾ ಫೆಡರೇಷನ್ ಆಫ್ ಅಂಗನವಾಡಿ ವರ್ಕರ್ಸ್ ಅಂಡ್ ಹೆಲ್ಪರ್ಸ್ () ಮತ್ತು ಸೆಂಟರ್ ಆಫ್ ಇಂಡಿಯನ್ ಟ್ರೇಡ್ ಯೂನಿಯನ್ಸ್() ನೇತೃತ್ವದಲ್ಲಿ ವರ್ಷವಿಡೀ ಹೋರಾಟಗಳು ನಡೆಯುತ್ತಿವೆ. ಜುಲೈ 10ನ್ನು ಸಾಂಪ್ರದಾಯಿಕವಾಗಿ ಹಕ್ಕೊತ್ತಾಯ ದಿನವಾಗಿ ಆಚರಿಸಲಾಗುತ್ತದೆ. ಈ ವರ್ಷ ಇದನ್ನು ಕೇಂದ್ರ ಸರ್ಕಾರದ ವಿರುದ್ಧ ಕರಾಳ ದಿನವಾಗಿ ಘೋಷಿಸಲಾಗಿದೆ. ದೇಶಾದ್ಯಂತ ಮೆರವಣಿಗೆಗಳು, ಧರಣಿಗಳು, ರಸ್ತೆ ತಡೆಗಳು ಮತ್ತು ಮುಷ್ಕರಗಳು ನಡೆದಿವೆ. ಕರ್ನಾಟಕದಲ್ಲಿ ಕಾರವಾರ, ಹಾಸನ, ಬೆಂಗಳೂರು, ಹಾವೇರಿ, ಕಲಬುರಗಿ, ರಾಯಚೂರು ಸೇರಿದಂತೆ ಬಹುತೇಕ ಜಿಲ್ಲೆಗಳಲ್ಲಿ ಪ್ರತಿಭಟನೆಗಳು ಜೋರಾಗಿ ನಡೆದಿವೆ.

ಹಿಂದಿನ ಹೋರಾಟಗಳಲ್ಲಿ ಕೆಲವು ರಾಜ್ಯಗಳಲ್ಲಿ ಆಂಶಿಕ ಜಯ ಸಿಕ್ಕಿದೆ(ಉದಾ. ಹರಿಯಾಣದಲ್ಲಿ ಕೆಲವು ಬೇಡಿಕೆಗಳು ಅಂಗೀಕೃತವಾಗಿವೆ). ಆದರೆ ಕೇಂದ್ರ ಮಟ್ಟದಲ್ಲಿ ಮೂಲಭೂತ ಬದಲಾವಣೆಗಳು ನಡೆಯುತ್ತಿಲ್ಲ. ಕಾರ್ಮಿಕರು ಸರ್ಕಾರಿ ನೌಕರರ ಸ್ಥಾನಮಾನ, ಕನಿಷ್ಠ ವೇತನ, ಸಾಮಾಜಿಕ ಭದ್ರತಾ ಯೋಜನೆಗಳು ಮತ್ತು ಖಾಸಗೀಕರಣ ವಿರೋಧವನ್ನು ಒತ್ತಾಯಿಸುತ್ತಿದ್ದಾರೆ.

ಸಮಾಜಕ್ಕೆ ಸಂದೇಶ ಮತ್ತು ಮುಂದಿನ ದಾರಿ

ಈ ಕಾರ್ಮಿಕರು ದೇಶದ ಸಾಮಾಜಿಕ ಭದ್ರತಾ ಜಾಲದ ಅಡಿಪಾಯ. ಅವರನ್ನು ನಿರ್ಲಕ್ಷಿಸುವುದು ಮಕ್ಕಳ ಭವಿಷ್ಯ, ಮಹಿಳಾ ಸಬಲೀಕರಣ ಮತ್ತು ಗ್ರಾಮೀಣ ಆರೋಗ್ಯವನ್ನು ನಿರ್ಲಕ್ಷಿಸಿದಂತಾಗುತ್ತದೆ. ಸರ್ಕಾರಗಳು ಅವರನ್ನು ವಾಲಂಟಿಯರ್ ಎಂದು ಕರೆದು ಶೋಷಿಸುವ ಬದಲು, ಪೂರ್ಣ ಸಮ್ಮಾನ, ಸಮಾನ ವೇತನ ಮತ್ತು ಸೌಲಭ್ಯಗಳನ್ನು ನೀಡಬೇಕು. ಇದು ಕೇವಲ ಕಾರ್ಮಿಕರ ಹಕ್ಕಲ್ಲ; ದೇಶದ ಅಭಿವೃದ್ಧಿ ಮತ್ತು ಸಮಾನತೆಯ ಪ್ರಶ್ನೆ.

ಕೇಂದ್ರ ಸರ್ಕಾರದ ಅನುದಾನ ಕಡಿತ ಮತ್ತು ಯೋಜನೆಗಳನ್ನು ದುರ್ಬಲಗೊಳಿಸಲು ಹೊರಟಿರುವುದು ಕೇವಲ ಆರ್ಥಿಕ ನೀತಿಯಲ್ಲ; ಇದು ಸಮಾಜದ ಅತ್ಯಂತ ದುರ್ಬಲ ವರ್ಗಗಳ ಮೇಲಿನ ದಾಳಿ. ಇದರಿಂದಾಗಿ ಮಕ್ಕಳ ಪೋಷಣೆ ಇಲ್ಲದಂತಾಗಿ, ಆರೋಗ್ಯ ಸಮಸ್ಯೆಗಳು ಮತ್ತು ಅಸಮಾನತೆಗಳು ಹೆಚ್ಚುತ್ತವೆ. ಈ ಕಾರ್ಮಿಕರ ಹೋರಾಟವು ಮಹಿಳಾ ಸಬಲೀಕರಣದ ಪ್ರಶ್ನೆಯೂ ಹೌದು.

ಈ ಹೋರಾಟದ ಯಶಸ್ಸು ಕೇವಲ ಕಾರ್ಮಿಕರ ಏಕೈಕ ಜವಾಬ್ದಾರಿಯಲ್ಲ. ಸಮಾಜದ ಎಲ್ಲ ವರ್ಗಗಳು, ವಿಶೇಷವಾಗಿ ಶಿಕ್ಷಣವಂತರು, ಯುವಜರು, ಬುದ್ಧಿಜೀವಿಗಳು ಮತ್ತು ರಾಜಕೀಯ ಪಕ್ಷಗಳು ಇವರ ಬೆನ್ನಿಗೆ ನಿಲ್ಲಬೇಕು. ಸರ್ಕಾರಗಳು ತ್ವರಿತವಾಗಿ ಸಂವಾದಕ್ಕೆ ಮುಂದಾಗಿ, ಬೇಡಿಕೆಗಳನ್ನು ಈಡೇರಿಸಬೇಕು. ಅಂಗನವಾಡಿಗಳು, ಆಶಾ ಕೇಂದ್ರಗಳು ಮತ್ತು ಬಿಸಿಯೂಟ ಯೋಜನೆಗಳನ್ನು ಬಲಪಡಿಸುವುದು ರಾಷ್ಟ್ರ ನಿರ್ಮಾಣದ ಅವಿಭಾಜ್ಯ ಅಂಗವಾಗಿದೆ.

ಹಾಗಾಗಿ, ಸ್ಕೀಂ ನೌಕರರು ಜುಲೈ 10ರಂದು ನಡೆಸಿದ ಹೋರಾಟವು ಸಮಾಜದ ಎಲ್ಲ ವರ್ಗಗಳಿಗೆ ಎಚ್ಚರಿಕೆಯಾಗಬೇಕು. ಮಹಿಳಾ ಕಾರ್ಮಿಕರ ಪಿಂಕ್ ವೇವ್ ಹೋರಾಟಗಳು ಬಲಗೊಳ್ಳುತ್ತಿದ್ದು, ಸರ್ಕಾರಗಳು ಎಚ್ಚೆತ್ತುಕೊಳ್ಳದಿದ್ದರೆ ಈ ಕರಾಳ ದಿನಗಳು ದೀರ್ಘಕಾಲೀನ ಹೋರಾಟಕ್ಕೆ ಕಾರಣವಾಗುತ್ತವೆ.

# ಖಾಲಿಯಾಗುತ್ತಿರುವ ತರಗತಿ ಬೆಂಚುಗಳಾಚೆ: ಕೋವಿಡ್ ನಂತರದ ಜಗತ್ತಿನಲ್ಲಿ ಶಿಕ್ಷಣದ ಮರುಚಿಂತನೆ

ವಿದ್ಯಾರ್ಥಿ ತರಗತಿಗೆ ಬರುವವರೆಗೆ ಶಿಕ್ಷಣ ಕಾಯಬಾರದು. ವಿದ್ಯಾರ್ಥಿಯ ಜೀವನ ಎಲ್ಲಿಗೆ ತಲುಪಿದೆಯೋ ಅಲ್ಲಿಗೇ ಶಿಕ್ಷಣವೂ ತಲುಪಬೇಕು. ಆಗ ಮಾತ್ರ ಶಿಕ್ಷಣ ನಾಲ್ಕು ಗೋಡೆಗಳೊಳಗೆ ಸೀಮಿತವಾಗದೆ, ಸಮಾಜದ ಪ್ರತಿಯೊಂದು ಹೆಜ್ಜೆಯೊಂದಿಗೂ ಜೊತೆಯಾಗಿ ಸಾಗುವ ಜೀವಂತ ಶಕ್ತಿಯಾಗುತ್ತದೆ.

ಒಂದು ಕಾಲದಲ್ಲಿ ಶಾಲೆ-ಕಾಲೇಜಿನ ತರಗತಿ ಕೊಠಡಿಯೇ ಜ್ಞಾನದ ಕೇಂದ್ರವಾಗಿತ್ತು. ಶಿಕ್ಷಕರು ಜ್ಞಾನದ ಪ್ರಮುಖ ಮೂಲವಾಗಿದ್ದರು. ವಿದ್ಯಾರ್ಥಿಗಳು ಕಲಿಕೆಯ ಆಸಕ್ತಿ, ಶಿಸ್ತು ಮತ್ತು ಭವಿಷ್ಯದ ಕನಸುಗಳೊಂದಿಗೆ ಪ್ರತಿದಿನ ತರಗತಿಗಳಿಗೆ ಹಾಜರಾಗುತ್ತಿದ್ದರು. ಇಂದು ಆ ದೃಶ್ಯ ಬದಲಾಗಿದೆ. ತರಗತಿಗಳಲ್ಲಿರುವ ಖಾಲಿ ಬೆಂಚುಗಳು ಕೇವಲ ವಿದ್ಯಾರ್ಥಿಗಳ ಗೈರುಹಾಜರಿಯನ್ನು ಸೂಚಿಸುವುದಿಲ್ಲ; ಅವು ನಮ್ಮ ಶಿಕ್ಷಣ ವ್ಯವಸ್ಥೆ ಎದುರಿಸುತ್ತಿರುವ ಹೊಸ ಸಾಮಾಜಿಕ ಮತ್ತು ಆರ್ಥಿಕ ವಾಸ್ತವಗಳ ಮೌನ ಸಾಕ್ಷಿಗಳಾಗಿವೆ.

ಪದವಿ ಕಾಲೇಜುಗಳಲ್ಲಿ ದಿನದಿಂದ ದಿನಕ್ಕೆ ವಿದ್ಯಾರ್ಥಿಗಳ ಹಾಜರಾತಿ ಕಡಿಮೆಯಾಗುತ್ತಿರುವುದು ಕೇವಲ ಶಿಸ್ತಿನ ಕೊರತೆ ಅಥವಾ ಓದಿನ ಮೇಲಿನ ನಿರಾಸಕ್ತಿಯ ಪರಿಣಾಮವಲ್ಲ. ಅದು ಕಳೆದ ಎರಡು ದಶಕಗಳಲ್ಲಿ ಸಂಭವಿಸಿದ ತಾಂತ್ರಿಕ ಬೆಳವಣಿಗೆಗಳು, ಬದಲಾಗುತ್ತಿರುವ ಉದ್ಯೋಗದ ಅವಕಾಶಗಳು, ಕೋವಿಡ್ ನಂತರದ ಆರ್ಥಿಕ ಸಂಕಷ್ಟ ಮತ್ತು ಯುವಜನರ ಬದುಕಿನ ಆದ್ಯತೆಗಳಲ್ಲಿ ಉಂಟಾದ ಮಹತ್ತರ ಬದಲಾವಣೆಯ ಪ್ರತಿಫಲವಾಗಿದೆ.

ಇಪ್ಪತ್ತು ವರ್ಷಗಳ ಹಿಂದೆ ವಿದ್ಯಾರ್ಥಿಗಳಿಗೆ ಮಾಹಿತಿ ಪಡೆಯುವ ಅವಕಾಶಗಳು ಸೀಮಿತವಾಗಿದ್ದವು. ಇಂಟರ್ನೆಟ್ ಇಂದಿನಷ್ಟು ವ್ಯಾಪಕವಾಗಿರಲಿಲ್ಲ. ಮೊಬೈಲ್ ಫೋನ್‌ಗಳೂ ಎಲ್ಲರ ಕೈಯಲ್ಲಿರಲಿಲ್ಲ. ಶಿಕ್ಷಕರ ಉಪನ್ಯಾಸ, ಗ್ರಂಥಾಲಯದ ಪುಸ್ತಕಗಳು ಮತ್ತು ತರಗತಿ ಚರ್ಚೆಗಳೇ ಜ್ಞಾನಾರ್ಜನೆಯ ಪ್ರಮುಖ ಸಾಧನಗಳಾಗಿದ್ದವು. ಹಾಜರಾತಿಗೆ ಅಂಕಗಳನ್ನು ನೀಡದಿದ್ದರೂ ತರಗತಿಗಳು ವಿದ್ಯಾರ್ಥಿಗಳಿಂದ ಕಿಕ್ಕಿರಿದು ತುಂಬಿರುತ್ತಿದ್ದವು. ಶಿಕ್ಷಣವೇ ಬದುಕನ್ನು ಬದಲಾಯಿಸುವ ಏಕೈಕ ಸಾಧನ ಎಂಬ ನಂಬಿಕೆ ವಿದ್ಯಾರ್ಥಿಗಳಲ್ಲಿ ಗಟ್ಟಿಯಾಗಿತ್ತು.

ಆದರೆ ಕೋವಿಡ್- ಈ ಸಮೀಕರಣವನ್ನು ಸಂಪೂರ್ಣವಾಗಿ ಬದಲಾಯಿಸಿತು. ಸಾಂಕ್ರಾಮಿಕದ ಪರಿಣಾಮವಾಗಿ ಸಾವಿರಾರು ಕುಟುಂಬಗಳು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದವು. ಉದ್ಯೋಗ ಕಳೆದುಕೊಂಡ ಪೋಷಕರ ಕುಟುಂಬಗಳಲ್ಲಿ ವಿದ್ಯಾರ್ಥಿಗಳೇ ದುಡಿದು ಮನೆಗೆ ಆಸರೆಯಾಗಬೇಕಾದ ಪರಿಸ್ಥಿತಿ ನಿರ್ಮಾಣವಾಯಿತು. ಡೆಲಿವರಿ ಸೇವೆಗಳು, ಇ-ಕಾಮರ್ಸ್ ಸಂಸ್ಥೆಗಳು, ಮಾಲ್‌ಗಳು, ಕಾಲ್ ಸೆಂಟರ್‌ಗಳು, ರೈಡ್-ಶೇರಿಂಗ್ ಸೇವೆಗಳು ಮತ್ತು ವಿವಿಧ ಗಿಗ್ ಉದ್ಯೋಗಗಳು ಅವರಿಗೆ ತಕ್ಷಣದ ಆದಾಯದ ಮೂಲಗಳಾದವು. ಶಿಕ್ಷಣ ಭವಿಷ್ಯದ ಭರವಸೆಯನ್ನು ನೀಡಿದರೆ, ಉದ್ಯೋಗ ಇಂದಿನ ಅನ್ನವನ್ನು ಒದಗಿಸಿತು. ಸಹಜವಾಗಿಯೇ ಅನೇಕ ವಿದ್ಯಾರ್ಥಿಗಳು ಬದುಕಿನ ತುರ್ತು ಅಗತ್ಯಕ್ಕೆ ಆದ್ಯತೆ ನೀಡಿದರು.

ಇಂದಿನ ವಿದ್ಯಾರ್ಥಿ ಕೇವಲ ವಿದ್ಯಾರ್ಥಿಯಲ್ಲ. ಆತ ದುಡಿಯುವ ಯುವಕ, ಕುಟುಂಬದ ಜವಾಬ್ದಾರಿಯನ್ನು ಹೊತ್ತಿರುವ ಸದಸ್ಯ ಮತ್ತು ಬದುಕಿನ ಅನಿವಾರ್ಯ ಸವಾಲುಗಳನ್ನು ಎದುರಿಸುತ್ತಿರುವ ವ್ಯಕ್ತಿ. ಈ ವಾಸ್ತವವನ್ನು ಅರಿಯದೆ ವಿದ್ಯಾರ್ಥಿಗಳ ಗೈರುಹಾಜರಿಯನ್ನು ಅರ್ಥಮಾಡಿಕೊಳ್ಳುವುದು ಸಾಧ್ಯವಿಲ್ಲ.

ಇಂದು ಹಲವಾರು ಕಾಲೇಜುಗಳಲ್ಲಿ ದಾಖಲಾತಿ ಪೂರ್ಣವಾಗಿದ್ದರೂ ತರಗತಿಗಳಲ್ಲಿ ಕೇವಲ ಹದಿನೈದು ಅಥವಾ ಇಪ್ಪತ್ತು ವಿದ್ಯಾರ್ಥಿಗಳು ಮಾತ್ರ ಕಾಣಿಸಿಕೊಳ್ಳುತ್ತಾರೆ. ಬೆಳಗ್ಗೆ ಡೆಲಿವರಿ ಮಾಡುವ ವಿದ್ಯಾರ್ಥಿ ಮಧ್ಯಾಹ್ನ ತರಗತಿಗೆ ಬರಲು ಸಾಧ್ಯವಾಗುವುದಿಲ್ಲ. ಮಾಲ್‌ನಲ್ಲಿ ಕೆಲಸ ಮಾಡುವ ವಿದ್ಯಾರ್ಥಿನಿಗೆ ಕೆಲಸದ ಪಾಳಿಯನ್ನು ಬಿಟ್ಟು ಕಾಲೇಜಿಗೆ ಬರುವುದು ಸುಲಭವಲ್ಲ. ಸಂಜೆ ಕಾಲೇಜುಗಳ ವಿದ್ಯಾರ್ಥಿಗಳು ದಿನವಿಡೀ ದುಡಿದು ಸಂಚಾರದ ದಟ್ಟಣೆಯನ್ನು ಎದುರಿಸಿ ತಡವಾಗಿ ತರಗತಿಗೆ ತಲುಪುತ್ತಾರೆ. ಅನೇಕರು ಪರೀಕ್ಷೆಗಳು ಮತ್ತು ಆಂತರಿಕ ಮೌಲ್ಯಮಾಪನಗಳನ್ನು ಸಹ ಪರಿಸ್ಥಿತಿಯ ಒತ್ತಡದಿಂದ ತಪ್ಪಿಸಿಕೊಳ್ಳುತ್ತಾರೆ. ಇದು ಅವರ ನಿರ್ಲಕ್ಷ್ಯವಲ್ಲ; ಬದುಕಿನೊಂದಿಗೆ ನಡೆಸುತ್ತಿರುವ ಹೋರಾಟದ ಅನಿವಾರ್ಯ ಪರಿಣಾಮವಾಗಿದೆ.

ಡಿಜಿಟಲ್ ತಂತ್ರಜ್ಞಾನ: ಇದರ ಜೊತೆಗೆ ಮತ್ತೊಂದು ಮಹತ್ವದ ಬದಲಾವಣೆ ಡಿಜಿಟಲ್ ತಂತ್ರಜ್ಞಾನ ತಂದಿದೆ. ಇಂದು ಜ್ಞಾನವು ತರಗತಿ ಕೊಠಡಿಯ ಗೋಡೆಗಳೊಳಗೆ ಸೀಮಿತವಾಗಿಲ್ಲ. ಮೊಬೈಲ್ ಫೋನ್‌ನಲ್ಲೇ ಸಾವಿರಾರು ಉಪನ್ಯಾಸಗಳು, ಇ-ಪುಸ್ತಕಗಳು, ವೀಡಿಯೊ ಪಾಠಗಳು, ಆನ್‌ಲೈನ್ ಕೋರ್ಸ್‌ಗಳು ಮತ್ತು ಕೃತಕ ಬುದ್ಧಿಮತ್ತೆ ಆಧಾರಿತ ಅಧ್ಯಯನ ಸಂಪನ್ಮೂಲಗಳು ಲಭ್ಯವಿವೆ. ವಿದ್ಯಾರ್ಥಿ ತನ್ನ ಅನುಕೂಲಕ್ಕೆ ತಕ್ಕಂತೆ, ತನಗೆ ಬೇಕಾದ ಸಮಯದಲ್ಲಿ ಕಲಿಯುವ ಅವಕಾಶವನ್ನು ಪಡೆದಿದ್ದಾನೆ.

ಇದು ಶಿಕ್ಷಣದ ಪ್ರಜಾಸತ್ತೀಕರಣಕ್ಕೆ ದಾರಿ ಮಾಡಿಕೊಟ್ಟಿದ್ದರೂ, ಭೌತಿಕ ತರಗತಿಗೆ ಹಾಜರಾಗುವ ಅಗತ್ಯವನ್ನು ವಿದ್ಯಾರ್ಥಿಗಳ ದೃಷ್ಟಿಯಲ್ಲಿ ಕಡಿಮೆ ಮಾಡಿದೆ. ಶಿಕ್ಷಣದ ವಿಧಾನ ಬದಲಾಗಿದ್ದರೂ ನಮ್ಮ ಶಿಕ್ಷಣ ಸಂಸ್ಥೆಗಳು ಇನ್ನೂ ಹಳೆಯ ಮಾದರಿಯಲ್ಲೇ ಕಾರ್ಯನಿರ್ವಹಿಸುತ್ತಿವೆ. ನಿಗದಿತ ವೇಳಾಪಟ್ಟಿಗಳು, ಕಡ್ಡಾಯ ಹಾಜರಾತಿ, ವರ್ಷಗಳಿಂದ ಬದಲಾಗದ ಪಠ್ಯಕ್ರಮಗಳು ಮತ್ತು ಉದ್ಯೋಗ ಮಾರುಕಟ್ಟೆಯ ಅಗತ್ಯಗಳಿಗೆ ಹೊಂದಿಕೆಯಾಗದ ಶಿಕ್ಷಣ ವ್ಯವಸ್ಥೆ ವಿದ್ಯಾರ್ಥಿಗಳಲ್ಲಿ ಅಸಮಾಧಾನವನ್ನು ಹೆಚ್ಚಿಸುತ್ತಿದೆ.

ಆಂತರಿಕ ಮೌಲ್ಯಮಾಪನ: ವಿಶ್ವವಿದ್ಯಾಲಯಗಳ ಆಂತರಿಕ ಮೌಲ್ಯಮಾಪನ ಪದ್ಧತಿಯೂ ಪುನರ್‌ಪರಿಶೀಲನೆಗೆ ಒಳಪಡಬೇಕಾಗಿದೆ. ಹಾಜರಾತಿಗೆ ಅಂಕಗಳನ್ನು ಮೀಸಲಿಟ್ಟಿದ್ದರೂ ಅನೇಕ ಸಂಸ್ಥೆಗಳು ಅದನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಲು ಸಾಧ್ಯವಾಗುತ್ತಿಲ್ಲ. ಏಕೆಂದರೆ ಇಂದಿನ ವಿದ್ಯಾರ್ಥಿಗಳ ಬದುಕಿನ ವಾಸ್ತವವನ್ನು ನಿರ್ಲಕ್ಷಿಸಿ ಕೇವಲ ಹಾಜರಾತಿಯ ಆಧಾರದ ಮೇಲೆ ಮೌಲ್ಯಮಾಪನ ಮಾಡಿದರೆ ಶಿಕ್ಷಣ ವ್ಯವಸ್ಥೆಯೇ ಇನ್ನಷ್ಟು ದುರ್ಬಲವಾಗುವ ಅಪಾಯವಿದೆ.

ಹೀಗಾಗಿ ಆಂತರಿಕ ಮೌಲ್ಯಮಾಪನದ ಉದ್ದೇಶವನ್ನು ಮರುಅರ್ಥೈಸುವ ಕಾಲ ಬಂದಿದೆ. ವಿದ್ಯಾರ್ಥಿಯ ಭೌತಿಕ ಹಾಜರಾತಿಗಿಂತ ಅವನ ಕಲಿಕೆಯ ಗುಣಮಟ್ಟ, ಕೌಶಲ್ಯ, ಸೃಜನಶೀಲತೆ ಮತ್ತು ಪ್ರಾಯೋಗಿಕ ಸಾಮರ್ಥ್ಯಕ್ಕೆ ಹೆಚ್ಚಿನ ಮಹತ್ವ ನೀಡುವ ವ್ಯವಸ್ಥೆಯನ್ನು ರೂಪಿಸಬೇಕಾಗಿದೆ.

ಇಂದು ಕಂಡುಬರುತ್ತಿರುವ ನಿರಂತರ ಗೈರುಹಾಜರಿ, ಕುಸಿಯುತ್ತಿರುವ ದಾಖಲಾತಿಗಳು ಮತ್ತು ಕೆಲವು ಕೋರ್ಸ್‌ಗಳು ಅಥವಾ ಕಾಲೇಜುಗಳ ಮುಚ್ಚುವಿಕೆಯಂತಹ ಬೆಳವಣಿಗೆಗಳು ಕೇವಲ ಆಡಳಿತಾತ್ಮಕ ಸಮಸ್ಯೆಗಳಲ್ಲ; ಅವು ಶಿಕ್ಷಣ ವ್ಯವಸ್ಥೆಗೆ ಎಚ್ಚರಿಕೆಯ ಗಂಟೆಗಳಾಗಿವೆ. ಶಿಕ್ಷಣವು ಸಮಾಜದ ಬದಲಾವಣೆಗಳಿಗೆ ಹೊಂದಿಕೊಳ್ಳದಿದ್ದರೆ ಸಮಾಜ ಶಿಕ್ಷಣದಿಂದ ದೂರವಾಗುತ್ತದೆ. ಆದ್ದರಿಂದ ಇಂದು ನಮ್ಮ ಮುಂದಿರುವ ಪ್ರಶ್ನೆ ವಿದ್ಯಾರ್ಥಿಗಳನ್ನು ಮತ್ತೆ ಹಳೆಯ ರೀತಿಯಲ್ಲಿ ತರಗತಿಗಳಿಗೆ ಹೇಗೆ ಕರೆತರಬೇಕು ಎಂಬುದಲ್ಲ. ಬದಲಾಗಿ ವಿದ್ಯಾರ್ಥಿಗಳ ಬದುಕಿನ ಹೊಸ ವಾಸ್ತವಗಳಿಗೆ ಅನುಗುಣವಾಗಿ ಶಿಕ್ಷಣವನ್ನು ಹೇಗೆ ರೂಪಿಸಬೇಕು ಎಂಬುದಾಗಿದೆ.

ಈ ದಿಕ್ಕಿನಲ್ಲಿ ಕೆಲವು ಮಹತ್ವದ ಕ್ರಮಗಳನ್ನು ಪರಿಗಣಿಸಬೇಕಾಗಿದೆ. ಉದ್ಯೋಗದಲ್ಲಿರುವ ವಿದ್ಯಾರ್ಥಿಗಳಿಗೆ ಅನುಕೂಲವಾಗುವ ತರಗತಿ ವೇಳಾಪಟ್ಟಿಗಳು, ಆನ್‌ಲೈನ್ ಮತ್ತು ಆಫ್‌ಲೈನ್ ಸಂಯೋಜಿತ ಕಲಿಕಾ ವಿಧಾನಗಳು, ಉದ್ಯೋಗೋನ್ಮುಖ ಹಾಗೂ ಕೌಶಲ್ಯಾಧಾರಿತ ಪಠ್ಯಕ್ರಮಗಳು, ನಿರಂತರ ಮತ್ತು ಹೊಂದಿಕೊಳ್ಳುವ ಮೌಲ್ಯಮಾಪನ ವ್ಯವಸ್ಥೆಗಳು ಹಾಗೂ ದುಡಿಯುವ ವಿದ್ಯಾರ್ಥಿಗಳಿಗೆ ವಿಶೇಷ ಶೈಕ್ಷಣಿಕ ಬೆಂಬಲ ವ್ಯವಸ್ಥೆಗಳು ಇಂದಿನ ಅಗತ್ಯಗಳಾಗಿವೆ.

ಸಂಜೆ ಕಾಲೇಜಿನ ಪ್ರಾಂಶುಪಾಲನಾಗಿ ಈ ವಾಸ್ತವವನ್ನು ನಾನು ಪ್ರತಿದಿನ ಕಣ್ಣಾರೆ ನೋಡುತ್ತಿದ್ದೇನೆ. ದಿನವಿಡೀ ದುಡಿದು ಆಯಾಸದಿಂದ ತರಗತಿಗೆ ಬರುವ ವಿದ್ಯಾರ್ಥಿಗಳ ಕಣ್ಣಿನಲ್ಲಿ ನಾನು ಕನಸುಗಳನ್ನು ಕಾಣುತ್ತೇನೆ. ಅವರು ಗೈರಾಗಿರುವುದು ಶಿಕ್ಷಣದಿಂದಲ್ಲ; ಅವರು ಹೋರಾಡುತ್ತಿರುವುದು ಬದುಕಿನೊಂದಿಗೆ. ಅವರ ಪರಿಸ್ಥಿತಿಯನ್ನು ಅರಿಯದೆ ಅವರನ್ನು ನಿಷ್ಪ್ರಯೋಜಕ ವಿದ್ಯಾರ್ಥಿಗಳೆಂದು ಗುರುತಿಸುವುದು ನ್ಯಾಯವಲ್ಲ. ಈ ವಿದ್ಯಾರ್ಥಿಗಳು ತರಗತಿಗಳಲ್ಲಿ ಕಡಿಮೆ ಕಾಣಿಸಿಕೊಳ್ಳಬಹುದು; ಆದರೆ ತಮ್ಮ ಭವಿಷ್ಯದ ಕನಸುಗಳಿಂದ ದೂರವಾಗಿಲ್ಲ. ಪ್ರತಿಕೂಲ ಪರಿಸ್ಥಿತಿಯ ನಡುವೆಯೂ ಶಿಕ್ಷಣವನ್ನು ಕೈಬಿಡದೆ ಮುಂದುವರಿಸುವ ಅವರ ಸಂಕಲ್ಪವೇ ನಮ್ಮ ಸಮಾಜದ ನಿಜವಾದ ಆಶಾಕಿರಣವಾಗಿದೆ.

ನಾವು ಶಿಕ್ಷಣದ ಇತಿಹಾಸದ ಮಹತ್ವದ ತಿರುವಿನಲ್ಲಿದ್ದೇವೆ. ಖಾಲಿಯಾಗುತ್ತಿರುವ ತರಗತಿ ಬೆಂಚುಗಳು ಶಿಕ್ಷಣದ ಅಂತ್ಯವನ್ನು ಸೂಚಿಸುವುದಿಲ್ಲ. ಅವು ಶಿಕ್ಷಣವನ್ನು ಹೊಸದಾಗಿ ಆಲೋಚಿಸುವ ಅಗತ್ಯವನ್ನು ನಮ್ಮ ಮುಂದೆ ಇಡುತ್ತಿವೆ. ಬದಲಾವಣೆಯನ್ನು ನಿರಾಕರಿಸುವ ಶಿಕ್ಷಣ ವ್ಯವಸ್ಥೆ ಕಾಲಕ್ರಮೇಣ ತನ್ನ ಪ್ರಸ್ತುತತೆಯನ್ನು ಕಳೆದುಕೊಳ್ಳುತ್ತದೆ. ಆದರೆ ಬದಲಾವಣೆಯನ್ನು ಸ್ವೀಕರಿಸುವ ಶಿಕ್ಷಣ ವ್ಯವಸ್ಥೆ ಮಾತ್ರ ಹೊಸ ತಲೆಮಾರಿನ ಆಶಯಗಳಿಗೆ ದಿಕ್ಕು ತೋರಬಲ್ಲದು.

ವಿದ್ಯಾರ್ಥಿ ತರಗತಿಗೆ ಬರುವವರೆಗೆ ಶಿಕ್ಷಣ ಕಾಯಬಾರದು. ವಿದ್ಯಾರ್ಥಿಯ ಜೀವನ ಎಲ್ಲಿಗೆ ತಲುಪಿದೆಯೋ ಅಲ್ಲಿಯೇ ಶಿಕ್ಷಣವೂ ತಲುಪಬೇಕು. ಆಗ ಮಾತ್ರ ಶಿಕ್ಷಣ ನಾಲ್ಕು ಗೋಡೆಗಳೊಳಗೆ ಸೀಮಿತವಾಗದೆ, ಸಮಾಜದ ಪ್ರತಿಯೊಂದು ಹೆಜ್ಜೆಯೊಂದಿಗೂ ಜೊತೆಯಾಗಿ ಸಾಗುವ ಜೀವಂತ ಶಕ್ತಿಯಾಗುತ್ತದೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR